29 May 2026 Friday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ
# ವರ್ತಮಾನ
ಸಂಪಾದಕ: ಕೆ.ಎನ್.ರವಿ
ಭವಿಷ್ಯದ ಮುನ್ನುಡಿ
info.varthaman@gmail.com
9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್
VARTHAMAN Volume: 69 Issue: 183 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

**ಭಾವನಾಂತರಂಗ**

ಜಗತ್ತಿನಲ್ಲಿ "ಸ್ನೇಹ"ಎನ್ನುವುದು ಒಂದು ಅದ್ಭುತ ಶಕ್ತಿ! ಜಾತಕ,ರಾಶಿ ಯಾವುದೂ ನೋಡದೆ ಮನಸು ಮೆಚ್ಚುವ ಸುಂದರ ಬಾಂಧವ್ಯ!

-ಸ್ನೇಹಾ ಆನಂದ್


ಮೈಸೂರಿನಲ್ಲಿ ಸಂಭ್ರಮದ ಬಕ್ರೀದ್ ಆಚರಣೆ ಪುಟ ಸಂ. 2


ಸಿದ್ದು ವಿದಾಯ: ಮೈಸೂರಲ್ಲಿ ಮೌನ, ವರುಣದಲ್ಲಿ ಕಣ್ಣೀರು ಪುಟ ಸಂ. 3


ಭೂಸ್ವಾಧೀನ ಹೋರಾಟಕ್ಕೆ ನಿಖಿಲ್ ಕುಮಾರಸ್ವಾಮಿ ಬೆಂಬಲ ಪುಟ ಸಂ. 4

# ಸಿಎಂ ಸಿದ್ದರಾಮಯ್ಯ ನಿರ್ಗಮನ

## ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗೆ ರಾಜೀನಾಮೆ ಸಲ್ಲಿಸಿದ ಮುಖ್ಯಮಂತ್ರಿ

**ಬೆಂಗಳೂರು:** ರಾಜ್ಯ ರಾಜಕೀಯದಲ್ಲಿ ಬಿರುಸಿನಿಂದ ನಡೆಯುತ್ತಿದ್ದ ಮುಖ್ಯಮಂತ್ರಿ ಕುರ್ಚಿ ಕದನಕ್ಕೆ ತೆರೆ ಬಿದ್ದಿದೆ. ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಗುರುವಾರ ರಾಜೀನಾಮೆ ನೀಡಿದರು.


ಲೋಕಭವನಕ್ಕೆ ಗುರುವಾರ ಮಧ್ಯಾಹ್ನ ಆಗಮಿಸಿದ ಸಿದ್ದರಾಮಯ್ಯ ಅವರು ರಾಜೀ ನಾಮೆ ಪತ್ರವನ್ನು ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಪ್ರಭುಶಂಕರ್ ಅವರಿಗೆ ಸಲ್ಲಿಸಿದರು. ಈ ಮೂಲಕ ಕಳೆದ 3 ವರ್ಷಗಳ ಅವರ ಆಡಳಿತ ಅಂತ್ಯಗೊಂಡಿತು.

ಈ ಮೂಲಕ ಐದು ದಶಕಗಳ ಸುದೀರ್ಘ ರಾಜಕೀಯ ಚರಿತ್ರೆಯ ದಣಿವರಿಯದ ಹೋರಾಟಗಾರ, ಸಮಾಜವಾದಿ ಸಿದ್ದರಾಮಯ್ಯ ಅವರ ಎರಡನೇ ಅವಧಿಯ ಮುಖ್ಯಮಂತ್ರಿ ಆಡಳಿತ ಅಂತ್ಯ ಕಂಡಿದೆ. ಹೈಕಮಾಂಡ್ ಸೂಚನೆ ಮತ್ತು ರಾಹುಲ್ ಗಾಂಧಿ ಅವರ ಸಂದೇಶಕ್ಕೆ ಗೌರವ ನೀಡಿ, ಸಿದ್ದರಾಮಯ್ಯ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ ಎನ್ನಲಾಗಿದೆ.

ರಾಜ್ಯಪಾಲರು ಇಂದು ಬೆಳಗ್ಗೆ ದಿಢೀರ್ ಆಗಿ ಇಂದೋರ್‌ಗೆ ತೆರಳಿರುವ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಅವರು ತಮ್ಮ ರಾಜೀನಾಮೆ ಪತ್ರವನ್ನು ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗೆ ಹಸ್ತಾಂತರಿಸಿದರು. ಸದ್ಯಕ್ಕೆ ರಾಜೀನಾಮೆ ಪತ್ರವನ್ನು ಕಾರ್ಯದರ್ಶಿಗಳು ಸ್ವೀಕರಿಸಿದ್ದರೂ, ಸಂವಿಧಾನ ನಿಯಮಾವಳಿಗಳ ಪ್ರಕಾರ ರಾಜ್ಯಪಾಲರು ಖುದ್ದಾಗಿ ಸಹಿ ಮಾಡಿದ ಬಳಿಕವೇ ರಾಜೀನಾಮೆ ಅಧಿಕೃತವಾಗಿ ಅಂಗೀಕಾರವಾಗಲಿದೆ.

ಮೂಲಗಳ ಪ್ರಕಾರ ರಾಜ್ಯಪಾಲರು ಇಂದು ರಾತ್ರಿ 7:30ಕ್ಕೆ ಬೆಂಗಳೂರಿಗೆ ಮರಳುವ ಸಾಧ್ಯತೆಯಿದೆ. ಹೀಗಾಗಿ ರಾಜ್ಯಪಾಲರು ಮರಳಿದ ಬಳಿಕ ರಾಜೀನಾಮೆ ಅಂಗೀಕಾರದ ಪ್ರಕ್ರಿಯೆಗಳು ಪೂರ್ಣಗೊಳ್ಳಲಿವೆ.





## ರಾಜೀನಾಮೆ ನಂತರ ಕೈಕೈ ಹಿಡಿದು ಸಿದ್ದು–ಡಿಕೆಶಿ ಒಗ್ಗಟ್ಟು ಪ್ರದರ್ಶನ

### ಕಣ್ಣೀರಿಟ್ಟ ಲಾಡ್

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರದಿಂದ ಕೆಳಗಿಳಿಯುತ್ತಿರುವುದನ್ನು ನೆನೆದು ಸಚಿವ ಸಂತೋಷ್ ಲಾಡ್ ಕಾರಿನಲ್ಲೇ ಕಣ್ಣೀರಿಟ್ಟರು. ಮುಖ್ಯಮಂತ್ರಿ ಸರ್ಕಾರಿ ನಿವಾಸ ಕಾವೇರಿಯಲ್ಲಿ ಗುರುವಾರ ಆಯೋಜಿಸಲಾಗಿದ್ದ ಉಪಹಾರದ ಸಭೆ ಮುಗಿದ ಬಳಿಕ ಸಂತೋಷ್ ಲಾಡ್ ಅವರು ಹೊರಬಂದರು. ನಿವಾಸದ ಆವರಣದಿಂದ ತಮ್ಮ ಕಾರಿನಲ್ಲಿ ತೆರಳುತ್ತಿದ್ದಾಗ ಪುಟ 2ಕ್ಕೆ

### ಡಿಕೆಶಿ ಮುಂದಿನ ಸಿಎಂ: ಎಚ್.ಕೆ.ಪಾಟೀಲ್

ಡಿ.ಕೆ.ಶಿವಕುಮಾರ್ ಮುಂದಿನ ಮುಖ್ಯಮಂತ್ರಿ ಎಂದು ಹೈಕಮಾಂಡ್ ನಿರ್ಧರಿಸಿದೆ ಎಂದು ಸಚಿವ ಎಚ್.ಕೆ ಪಾಟೀಲ್ ಹೇಳಿದರು. ಬ್ರೇಕ್ ಫಾಸ್ಟ್ ಮೀಟಿಂಗ್ ಮುಗಿಸಿ ಹೊರಬಂದು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಇಂದು ಸಿದ್ದರಾಮಯ್ಯ ರಾಜೀನಾಮೆ ಕೊಡ್ತಾರೆ. ಅವರು ರಾಜ್ಯಸಭೆಗೆ ಹೋಗುವುದಿಲ್ಲ. ಡಿ.ಕೆ ಶಿವಕುಮಾರ್ ಸಿಎಂ ಆಗುತ್ತಾರೆ ಎಂಬ ಸಿದ್ದರಾಮಯ್ಯ ಪ್ರಸ್ತಾಪಕ್ಕೆ ಎಲ್ಲರೂ ಒಪ್ಪಿಗೆ ನೀಡಿದ್ದಾರೆ ಎಂದು ಎಚ್.ಕೆ ಪಾಟೀಲ್ ತಿಳಿಸಿದರು.





### ಡಾ.ರಾಜಕುಮಾರ್ ಸ್ಮರಣೆ: ಮತದಾರರೇ ನನ್ನ ದೇವರು!

ಇದೇ ವೇಳೆ ದಿವಂಗತ ನಟ ಡಾ. ರಾಜಕುಮಾರ್ ಅವರನ್ನು ನೆನೆಸಿಕೊಂಡ ಸಿದ್ದರಾಮಯ್ಯ ಅವರು, ರಾಜ್ ಕುಮಾರ್ ಅವರು ಅಭಿಮಾನಿಗಳನ್ನೇ ದೇವರು ಎಂದು ಕರೆದರು. ನಾನು ರಾಜಕಾರಣಿ. ಹೀಗಾಗಿ ನಮಗೆ ಮತದಾರರೇ ನಮ್ಮ ಅಭಿಮಾನಿ ದೇವರು ಎಂದು ಹೇಳಿದರು.

ಕನ್ನಡನಾಡಿನ 7 ಕೋಟಿ ಜನರ ಸೇವೆ ಮಾಡುವ ಅವಕಾಶ ನನಗೆ ಸಿಕ್ಕಿತ್ತು. ನನಗೆ ಸಂವಿಧಾನವೇ ಧರ್ಮ, ಮತದಾರರೇ ನನ್ನ ಅಭಿಮಾನಿ ದೇವರು ಎಂದು ಭಾವುಕರಾಗಿ ನುಡಿದರು. ತಮ್ಮ ಸುದೀರ್ಘ ರಾಜಕೀಯ ಪಯಣವನ್ನು ಸ್ಮರಿಸುತ್ತಾ ಭಾವುಕರಾದರು.

### ಸಿಎಂ ಹುಟ್ಟೂರಿನಲ್ಲಿ ಮೌನ



**ಮೈಸೂರು:** ಮುಖ್ಯಮಂತ್ರಿ ಸ್ಥಾನದಿಂದ ಸಿದ್ದರಾಮಯ್ಯ ನಿರ್ಗಮನದಿಂದ ಅವರ ಹುಟ್ಟೂರು ಸಿದ್ದರಾಮನಹುಂಡಿಯಲ್ಲಿ ಗುರುವಾರ ಮೌನ ಆವರಿಸಿತ್ತು.

ಸಿದ್ದರಾಮಯ್ಯ ರಾಜೀನಾಮೆ ನೀಡಿದ ಸುದ್ದಿ ಕೇಳುತ್ತಿದ್ದಂತೆಯೇ ಜನ ಕಣ್ಣೀರಾದರು. ಹೈಕಮಾಂಡ್ ಕಠೋರ ನಿರ್ಧಾರ ಕೈಗೊಂಡಿದ್ದು ಸರಿಯಲ್ಲ ಎಂಬ ಆಕ್ಷೇಪ ವ್ಯಕ್ತಪಡಿಸಿದರು.

ಗ್ರಾಮದ ಯುವಜನರಲ್ಲಿ ಹೆಚ್ಚಿನವರು ಬೆಂಗಳೂರಿಗೆ ತೆರಳಿದ್ದಾರೆ. ಹಿರಿಯರು ಊರಿನಲ್ಲೇ ಉಳಿದು ತಮ್ಮ ನಾಯಕನ ಸಾಧನೆಗಳನ್ನು ಕೊಂಡಾಡಿದರು.

ಸಿದ್ದರಾಮಯ್ಯಗೆ ಇನ್ನೂ ಎರಡು ವರ್ಷ ಅವಕಾಶ ಕೊಟ್ಟು, ಅವರ ನೇತೃತ್ವದಲ್ಲೇ ಚುನಾವಣೆಗೆ ಹೋಗಬೇಕಿತ್ತು. ಮುಂದೆಯೂ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿತ್ತು. ಆಗ ಡಿ.ಕೆ. ಶಿವಕುಮಾರ್ ಅವರಿಗೆ ಅವಕಾಶ ನೀಡಬಹುದಿತ್ತು. ಹೈಕಮಾಂಡ್ ದುಡುಕಿದೆ ಎಂದು ಸಿದ್ದರಾಮಯ್ಯ ಅಭಿಮಾನಿಗಳು ಬೇಸರ ವ್ಯಕ್ತಪಡಿಸಿದರು.

### ಜೂ.1ಕ್ಕೆ ಡಿಕೆಶಿ ಪ್ರಮಾಣ

**ಬೆಂಗಳೂರು:** ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದಂತೆ ಡಿ.ಕೆ.ಶಿವಕುಮಾರ್ ರಾಜ್ಯಭಾರಕ್ಕೆ ಕೌಂಟ್‌ಡೌನ್ ಶುರುವಾಗಿದೆ. ರಾಜ್ಯಪಾಲರು ರಾಜೀನಾಮೆ ಅಂಗೀಕರಿದ ನಂತರ ಹೊಸ ಸರ್ಕಾರ ರಚನೆ ಪ್ರಕ್ರಿಯೆ ಆರಂಭಗೊಳ್ಳಲಿದೆ.

ನಾಳೆ ಶುಕ್ರವಾರ ಉಪರಾಷ್ಟ್ರಪತಿ ಬೆಂಗಳೂರಿಗೆ ಆಗಮಿಸುತ್ತಿದ್ದು, ರಾಜ್ಯಪಾಲರು ಶುಕ್ರವಾರ ಸಂಜೆಯೊಳಗೆ ರಾಜೀನಾಮೆ ಅಂಗೀಕರಿಸಿದರೆ ಶನಿವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯುವ ಸಾಧ್ಯತೆಗಳಿದೆ. ಸಿಎಲ್‌ಪಿ ನಾಯಕರಾಗಿ ಡಿಕೆಶಿ ಆಯ್ಕೆಯಾಗುವುದು ಬಹುತೇಕ ಖಚಿತವಾಗಿದೆ. ಸೋಮವಾರ ಸಂಜೆ ಗೋಧೂಳಿ ಮುಹೂರ್ತದಲ್ಲಿ ಡಿಕೆಶಿ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

### ರಾಜ್ಯಸಭಾ ಸ್ಥಾನ ತಿರಸ್ಕಾರ

**ಬೆಂಗಳೂರು:** ಹೈಕಮಾಂಡ್ ನನಗೆ ರಾಜ್ಯಸಭಾ ಸ್ಥಾನದ ಆಹ್ವಾನ ನೀಡಿತ್ತು. ಆದರೆ, ಅದನ್ನು ನಾನು ತಿರಸ್ಕರಿಸಿದ್ದೇನೆ. ಕರ್ನಾಟಕ ಜನರ ಸೇವೆಯನ್ನು ಮುಂದುವರಿಸುತ್ತೇನೆ. ಕೊನೆಯ ಉಸಿರಿರುವವರೆಗೂ ಸಂವಿಧಾನ ವಿರೋಧಿ ಕೋಮುವಾದಿಗಳ ವಿರುದ್ಧ ಹೋರಾಟ ನಡೆಸುತ್ತೇನೆ ಎಂದು ಸಿದ್ದರಾಮಯ್ಯ ತಿಳಿಸಿದರು.

ಶಾಸಕನಾಗಿ ಸೇವೆ ಸಲ್ಲಿಸಲು ಇನ್ನೂ ಎರಡು ವರ್ಷ ಬಾಕಿ ಇರುವುದರಿಂದ ರಾಜ್ಯ ರಾಜಕಾರಣದಲ್ಲಿಯೇ ಇರುತ್ತೇನೆ. ಮುಂದಿನ ಮುಖ್ಯಮಂತ್ರಿಯನ್ನು ಶಾಸಕಾಂಗ ಪಕ್ಷ ಮತ್ತು ಹೈಕಮಾಂಡ್ ನಿರ್ಧರಿಸುತ್ತದೆ ಎಂದು ಸಿದ್ದರಾಮಯ್ಯ ಹೇಳಿದರು.

## ರಾಜ್ಯದ ಜನರಿಗೆ ನಯಾಪೈಸೆ ಪ್ರಯೋಜನವಿಲ್ಲ: ಬಿಜೆಪಿ ಟೀಕೆ

**ಬೆಂಗಳೂರು:** ರಾಜ್ಯ ಕಾಂಗ್ರೆಸ್ಸಿನ ಕುರ್ಚಿ ಕಚ್ಚಾಟದ ಪ್ರಹಸನಕ್ಕೆ ತಾತ್ಕಾಲಿಕ ಅಂತ್ಯ ದೊರೆತಿದೆ. ಆದರೆ ಇದರಿಂದ ಕನ್ನಡಿಗರಿಗೆ ನಯಾಪೈಸೆ ಪ್ರಯೋಜನ ಇಲ್ಲ ಎಂದು ರಾಜ್ಯ ಬಿಜೆಪಿ ಗುರುವಾರ ಟೀಕಾ ಪ್ರಹಾರ ನಡೆಸಿದೆ.

ಸಿದ್ದರಾಮಯ್ಯ ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ನೀಡಿದ ಬೆನ್ನಲ್ಲೇ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಈ ವಿಚಾರ ಹಂಚಿಕೊಂಡಿರುವ ರಾಜ್ಯ ಬಿಜೆಪಿ, ಕಾಂಗ್ರೆಸ್ ಸರ್ಕಾರದ ಮೂರು ವರ್ಷಗಳ ಸಾಧನೆ ಎಂದರೆ ಅದು ದಲಿತರ ಹಣ ದುರ್ಬಳಕೆ, ವಾಲ್ಮೀಕಿ ನಿಗಮದ ಹಣ ಲೂಟಿ, ಯುವಕರಿಗೆ ಟೋಪಿ, ರೈತರಿಗೆ ನೇಣು ಕುಣಿಕೆ, ಜನಸಾಮಾನ್ಯರಿಗೆ ಬೆಲೆ ಏರಿಕೆ, ಕರ್ನಾಟಕಕ್ಕೆ ಸಾಲದ ಶೂಲ ಹೊದಿಕೆ ಎಂದು ಆರೋಪಿಸಿದೆ.

ಕರ್ನಾಟಕದ ಅಭಿವೃದ್ಧಿಯನ್ನು ಸಂಪೂರ್ಣ ಸ್ತಬ್ಧಗೊಳಿಸಿ, ಕಲೆಕ್ಷನ್, ಕರಪ್ಷನ್, ಕಮಿಷನ್‌ನಲ್ಲಿಯೇ ಮೂರು ವರ್ಷ ದೂಡಿದೆ. ಈಗ ರಾಜೀನಾಮೆ ಎಂಬ ಅಲ್ಪ ವಿರಾಮ ಇಟ್ಟಿದ್ದಾರೆ ಎಂದು ಟೀಕಿಸಿದೆ.

ನೂತನವಾಗಿ ಯಾರೇ ಸಿಎಂ ಆಗಿ ಬಂದರೂ ಕನ್ನಡಿಗರಿಗಾಗಲಿ, ಕರ್ನಾಟಕಕ್ಕಾಗಲಿ ನಯಾಪೈಸೆ ಪ್ರಯೋಜನ ಇಲ್ಲ. ಬಡವರು, ಶ್ರಮಿಕರು, ರೈತರು, ಯುವಕರು, ಮಹಿಳೆಯರು, ದೀನ–ದಲಿತರು, ಹಿಂದುಳಿದವರನ್ನು ಹಿಂಸಿಸಿ, ಶೋಷಿಸಿ ಸರ್ಕಾರ ನಡೆಸುವ ಇವರ ಪ್ರವೃತ್ತಿ ಮುಂದುವರೆಯುತ್ತದೆ ಹೊರತು ಬದಲಾಗುವುದಿಲ್ಲ ಎಂದು ಹೇಳಿದೆ. ಕರ್ನಾಟಕವನ್ನು ಸಂಪೂರ್ಣ ದಿವಾಳಿ ಮಾಡುವುದು ಹಾಗೂ ಕಾಂಗ್ರೆಸ್ ಹೈಕಮಾಂಡಿಗೆ ಕರ್ನಾಟಕವನ್ನು ಎಟಿಎಂ ಮಾಡುವುದು ಎರಡೇ ಇವರ ಅಜೆಂಡಾ. ಹಾಗಾಗಿ, ಆದಷ್ಟು ಬೇಗ ಈ ಜನವಿರೋಧಿ ಸರ್ಕಾರ ತೊಲಗಿದರೆ ಕನ್ನಡಿಗರಿಗೆ ನೆಮ್ಮದಿ ದಿನ ಸಿಗಲಿದೆ ಎಂದು ಬಿಜೆಪಿ ತಿಳಿಸಿದೆ.

## ಸಕಲ ದೋಷ ಗಮನಿಸಿ ಮುನ್ನಡೆಗೆ: ಡಿಕೆಶಿಗೆ ನೊಣವಿನಕೆರೆ ಶ್ರೀಗಳ ಕರೆ

**ತುಮಕೂರು:** ಡಿ.ಕೆ.ಶಿವಕುಮಾರ್ ಅವರು ಶಾಸ್ತ್ರದ ಪ್ರಕಾರ ಸಕಲ ದೋಷ ನೋಡಿಕೊಂಡು ಮುನ್ನಡೆಯಬೇಕಾಗುತ್ತದೆ ಎಂದು ನೊಣವಿನಕೆರೆ ಕಾಡಸಿದ್ದೇಶ್ವರ ಮಠದ ಶ್ರೀ ಕರಿವೃಷಭ ಶಿವಯೋಗೀಶ್ವರ ಸ್ವಾಮೀಜಿ ಎಚ್ಚರಿಕೆ ನೀಡಿದರು.

ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ಹಾಗೂ ಮುಂದಿನ ಸಿಎಂ ಡಿಕೆಶಿ ಎನ್ನುವ ವಿಚಾರ ಕುರಿತು ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು. ಶ್ರೀಮಠದ ಆಶೀರ್ವಾದ ಯಾವಾಗಲು ಡಿಕೆಶಿ ಅವರಿಗೆ ಇದ್ದೇ ಇರುತ್ತದೆ. ರಾಜಾ ಪ್ರತ್ಯಕ್ಷ ದೇವತಾ, ಅಂದರೆ ರಾಜ್ಯವನ್ನು ಆಳುವಂತಾ ದೊರೆ ನಾಯಕ. ರೈತರ ಪರ ಬಡವರ ಪರವಾಗಿರುವ ನಾಯಕನಾಗಿ ಹೊರಹೊಮ್ಮುತ್ತಾರೆ. ಶ್ರೀ ಮಠದ ಧರ್ಮದ ಧ್ವಜವನ್ನ ಕೊಟ್ಟು ಅವರಿಗೆ ಆರ್ಶಿವಾದ ಮಾಡುವ ಕಾಲ ಹತ್ತಿರ ಬಂದಿದೆ. ನಿಮ್ಮೆಲ್ಲರ ಪ್ರೀತಿ ವಿಶ್ವಾಸದಿಂದ ಅವರ ಬಾಳು ಬಂಗಾರವಾಗಲೆಂದು ಆರ್ಶಿವಾದ ಮಾಡುತ್ತೇನೆ. ಪ್ರಮಾಣವಚನದ ಸಮಯ ನಾವು ಹೇಳಲು ಆಗಲ್ಲ. ಅವರವರ ನಿರ್ಧಾರಕ್ಕೆ ಬಿಟ್ಟಿದ್ದು ಎಂದು ತಿಳಿಸಿದರು.

ಡಿಕೆ ಶಿವಕುಮಾರ್ ಅವರ ಪ್ರಮಾಣವಚನ ಆಗುವವರೆಗೂ ನಾನು ಮಾತಾನಾಡಬಾರದು ಅಂದುಕೊಂಡಿದ್ದೆ. ಶಾಸ್ತ್ರದ ಪ್ರಕಾರ ಸಕಲ ದೋಷ ನೋಡಿಕೊಂಡು ಡಿಕೆಶಿ ನಡೆದು ಕೊಳ್ಳಬೇಕಾಗುತ್ತದೆ. ರಾಜಕೀಯ ಕ್ಷೇತ್ರದಲ್ಲಿ ಅವರು ಸಾಧಕ. ಡಿಕೆಶಿ ಅವರಿಗೆ ಶುಭವಾಗಲಿ ಎಂದರು. ಡಿ.ಕೆ ಶಿವಕುಮಾರ್ ಅವರು ಇವತ್ತು ಮಠಕ್ಕೆ ಬರುವ ಬಗ್ಗೆ ಮಾಹಿತಿ ಇಲ್ಲ. ಒಟ್ಟಿನಲ್ಲಿ ಡಿಕೆಶಿ ಅವರಿಗೆ ಫಲ ಸಿಗು ತ್ತದೆ ಅನ್ನೊ ವಿಶ್ವಾಸ ಇದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಪುಟ 2ಕ್ಕೆ



## ಸಿಎಂ ಆಪ್ತ ಕಾರ್ಯದರ್ಶಿ, ವಿಶೇಷಾಧಿಕಾರಿ ವರ್ಗಾವಣೆ

**ಬೆಂಗಳೂರು:** ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ ಸಿದ್ದರಾಮಯ್ಯ ಅವರು ತಮ್ಮ ವಿದಾಯದ ಕೊನೇ ಕ್ಷಣದಲ್ಲೂ ಮಹತ್ವದ ಕ್ರಮ ಕೈಗೊಂಡಿದ್ದಾರೆ. ತಮ್ಮ ಆಪ್ತ ಕಾರ್ಯದರ್ಶಿ ಮತ್ತು ವಿಶೇಷಾಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ ಅವರ ಆಪ್ತ ಕಾರ್ಯದರ್ಶಿ ಡಾ.ವೆಂಕಟೇಶಯ್ಯ ಮತ್ತು ವಿಶೇಷ ಕರ್ತವ್ಯ ಅಧಿಕಾರಿ ರಮೇಶ್ ಪಿ ಕೋನಾರೆಡ್ಡಿ ಅವರನ್ನು ವರ್ಗಾವಣೆ ಮಾಡಲಾಗಿದೆ. ಡಾ.ವೆಂಕಟೇಶಯ್ಯ ಅವರನ್ನು ಕೃಷಿ ಮಾರಾಟ ಇಲಾಖೆ ನಿರ್ದೇಶಕರಾಗಿ ಮತ್ತು ರಮೇಶ್ ಅವರನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಇಲಾಖೆ ನಿರ್ದೇಶಕರಾಗಿ ವರ್ಗಾವಣೆ ಮಾಡಲಾಗಿದೆ.

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಇಲಾಖೆಯ ನಿರ್ದೇಶಕರಾಗಿದ್ದ ವಿಜಯ್ ಬಿ.ಪಿ ಅವರಿಗೆ ಸ್ಥಳ ನಿಯುಕ್ತಿಗಾಗಿ ಸಂಬಂಧ ಇಲಾಖೆಗೆ ಕಾರ್ಯವರದಿ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ.

## ಸಚಿವರಿಗೆ ವಿದಾಯದ ಬ್ರೇಕ್‌ಫಾಸ್ಟ್

**ಬೆಂಗಳೂರು:** ಮುಖ್ಯಮಂತ್ರಿ ಸ್ಥಾನಕ್ಕೆ ಮನಃಪೂರ್ವಕವಾಗಿ ರಾಜೀನಾಮೆ ನೀಡುತ್ತಿದ್ದೇನೆ. ಈ ಬಗ್ಗೆ ನನಗೆ ಯಾವುದೇ ನೋವಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಸಚಿವರ ಜೊತೆಗೆ ಗುರುವಾರ ಆಯೋಜಿಸಿದ್ದ ವಿದಾಯದ ಬ್ರೇಕ್‌ಫಾಸ್ಟ್ ಕೂಟದಲ್ಲಿ ಮಾತನಾಡಿದ ಅವರು, ಹೈಕಮಾಂಡ್ ಹೇಳುವುದನ್ನು ಪಾಲನೆ ಮಾಡುವುದು ನನ್ನ ಕರ್ತವ್ಯ. ಈ ಹಿಂದೆ ನಡೆದ ಒಪ್ಪಂದ ಸೂತ್ರ ಬಿಚ್ಚಿಟ್ಟ ಸಿದ್ದರಾಮಯ್ಯ ಸಂಪುಟ ಸಹೋದ್ಯೋಗಿಗಳ ಮುಂದೆ ರಾಜೀನಾಮೆ ನೀಡುವ ನಿರ್ಧಾರ ಪ್ರಕಟಿಸಿದರು.ಮುಂದಿನ ಸಿಎಂ ಯಾರು ಎಂಬ ಹೆಸರನ್ನು ಹೇಳದ ಸಿದ್ದರಾಮಯ್ಯ, ಮುಂದೆ ಯಾರು ಸಿಎಂ ಆಗುತ್ತಾರೆ ಎನ್ನುವುದನ್ನು ಹೈಕಮಾಂಡ್ ನಿರ್ಧರಿಸಲಿದೆ. ಹೈಕಮಾಂಡ್ ನಾಯಕರು ನಾವು ತೀರ್ಮಾನ ಮಾಡುತ್ತೇವೆ ಎಂದಿದ್ದಾರೆ. ಅವರೇ ಎಲ್ಲ ಮುಂದಿನ ಪ್ರಕ್ರಿಯೆ ನಡೆಸುತ್ತಾರೆ ಎಂದು ಹೇಳಿದರು.



ಸಿದ್ದರಾಮಯ್ಯನವರು ಈ ರೀತಿ ಹೇಳುತ್ತಿದ್ದಂತೆ ಡಿ.ಕೆ.ಶಿವಕುಮಾರ್ ಕಣ್ಣಂಚಲಿ ನೀರು ಜಿನುಗಿತು. ಸಿಎಂ ಕೊಟ್ಟ ಮಾತಿನಂತೆ ನಡೆದುಕೊಂಡಿದ್ದಕ್ಕೆ ಡಿಕೆಶಿ ಭಾವುಕರಾದರು. ಪುಟ 2ಕ್ಕೆ

## ಸಿದ್ದರಾಮಯ್ಯ ಕಾಲಿಗೆ ಬಿದ್ದು ಆಶೀರ್ವಾದ ಪಡೆದ ಡಿಕೆಶಿ



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಪರಸ್ಪರ ಅಲಿಂಗನ ಮಾಡಿಕೊಂಡರು. ಈ ಸಂದರ್ಭದಲ್ಲಿ ಭಾವುಕರಾದ ಡಿಕೆಶಿ ಅವರು ಸಿದ್ದರಾಮಯ್ಯ ಅವರ ಕಾಲಿಗೆ ನಮಸ್ಕಾರ ಮಾಡಿದರು.

ಸಚಿವರಿಗೆ ಆಯೋಜಿಸಿದ್ದ ಬ್ರೇಕ್‌ಫಾಸ್ಟ್ ಮೀಟಿಂಗ್‌ಗೆ ಆಗಮಿಸಿದ ಡಿಕೆ ಶಿವಕುಮಾರ್ ಅವರು ಸಿದ್ದರಾಮಯ್ಯರನ್ನು ತಬ್ಬಿಕೊಂಡು ಕಾಲಿಗೆ ಬಿದ್ದು ಆಶೀರ್ವಾದ ಪಡೆದಿದ್ದಾರೆ.

ಮನೆಗೆ ಬಂದ ಡಿಕೆಶಿ ಜೊತೆ ಮೊದಲು ಸಿಎಂ ಪ್ರತ್ಯೇಕ ಮಾತುಕತೆ ನಡೆಸಿದರು. ಆ ಬಳಿಕ ಸಚಿವರ ಜೊತೆ ಸಿಎಂ ಮಾತನಾಡಿದರು. ಸಭೆಯಲ್ಲಿ ಪುಟ 2ಕ್ಕೆ

# ಹೈಕಮಾಂಡ್ ಸೂಚನೆಯಂತೆ ಸಿಎಂ ಸ್ಥಾನಕ್ಕೆ ರಾಜೀನಾಮೆ

## ಸಂವಿಧಾನ ವಿರೋಧಿಗಳ ವಿರುದ್ಧ ಕೊನೆಯ ಉಸಿರಿರುವವರೆಗೂ ಹೋರಾಟ: ಸಿದ್ದು ಘೋಷಣೆ

**ಬೆಂಗಳೂರು:** ಹೈಕಮಾಂಡ್ ಸೂಚಿಸಿದಾಗ ಸಿಎಂ ಸ್ಥಾನಕ್ಕೆ ರಾಜೀನಾಮೆ ಕೊಡುತ್ತೇನೆ ಎಂದು ತಿಳಿಸಿದ್ದೆ. ಹೈಕಮಾಂಡ್ ಮೊನ್ನೆ ರಾಜೀನಾಮೆ ಕೊಡಿ ಎಂದು ಹೇಳಿದರು. ಅದರಂತೆ ಇಂದು ರಾಜೀನಾಮೆ ಸಲ್ಲಿಸಿದ್ದೇನೆ. ರಾಜ್ಯಪಾಲರು ಆಗಮಿಸಿದ ನಂತರ ರಾಜೀನಾಮೆ ಅಂಗೀಕಾರ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ರಾಜಭವನದಲ್ಲಿ ರಾಜೀನಾಮೆ ಸಲ್ಲಿಸಿದ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಿದ್ದರಾಮಯ್ಯ ಅವರು, ಸಂವಿಧಾನವೇ ನನ್ನ ಧರ್ಮ. ಸಂವಿಧಾನ ವಿರೋಧಿ ಕೋಮುವಾದಿಗಳ ವಿರುದ್ಧ ಕೊನೆಯ ಉಸಿರಿರುವವರೆಗೂ ಸಹ ಹೋರಾಟ ನಡೆಸುತ್ತೇನೆ ಎಂದು ಘೋಷಿಸಿದರು.

ಎರಡು ಬಾರಿ ಮುಖ್ಯಮಂತ್ರಿ, ಎರಡು ಬಾರಿ ವಿರೋಧ ಪಕ್ಷದ ನಾಯಕನಾಗುವ ಅವಕಾಶ ನನಗೆ ಸಿಕ್ಕಿತ್ತು. ಈ ಅವಕಾಶ ನೀಡಿದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಪಕ್ಷದ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆಯವರಿಗೆ ಅಪಾರ ಧನ್ಯವಾದ ಅರ್ಪಿಸುತ್ತೇನೆ ಎಂದು ಹೇಳಿದರು.



ನಾನು ಮೊದಲ ಬಾರಿಗೆ 2013ರಿಂದ 2018ರವರೆಗೆ ಮತ್ತು 2023ರಿಂದ ಈವರೆಗೆ ನನ್ನ ಜೊತೆ ಕೆಲಸ ಮಾಡಿದ ಎಲ್ಲರೂ ಎಲ್ಲ ರೀತಿಯ ಬೆಂಬಲವನ್ನು, ಸಹಕಾರವನ್ನು, ಪ್ರೀತಿಯನ್ನು ವ್ಯಕ್ತಪಡಿಸಿದ್ದಾರೆ. ಹೀಗಾಗಿ ಎಲ್ಲರಿಗೂ ನಾನು ಚಿರಋಣಿಯಾಗಿರುತ್ತೇನೆ ಎಂದು ತಿಳಿಸಿದರು.

ಹಳ್ಳಿಯಿಂದ ಬಂದ ನಾನು ಮುಂದೊಂದು ದಿನ ಶಾಸಕನಾಗುತ್ತೇನೆ, ಸಚಿವ ನಾಗುತ್ತೇನೆ, ವಿರೋಧ ಪಕ್ಷದ ನಾಯಕನಾಗುತ್ತೇನೆ ಮುಖ್ಯಮಂತ್ರಿಯಾಗುತ್ತೇನೆಂದು ಕನಸು ಕಂಡಿರಲಿಲ್ಲ. ನಾನು ರಾಜಕೀಯಕ್ಕೆ ಬಂದಿದ್ದು ಆಕಸ್ಮಿಕ. ನಮ್ಮ ಕುಟುಂಬದಲ್ಲಿ ಯಾರೂ ರಾಜಕೀಯದಲ್ಲಿ ಇರಲಿಲ್ಲ. ರಾಜಕೀಯಕ್ಕೆ ಬಂದಾಗಿನಿಂದ ಬುದ್ಧ, ಬಸವ, ಬಾಬಾ ಸಾಹೇಬ್ ಅಂಬೇಡ್ಕರ್, ಗಾಂಧೀಜಿ ಅವರ ತತ್ವಾದರ್ಶಗಳಲ್ಲಿ ನಂಬಿಕೆ ಇಟ್ಟಿದ್ದವನು. ಸಂವಿಧಾನದಲ್ಲಿ ಅಪಾರ ಗೌರವ ಇಟ್ಟುಕೊಂಡಿದ್ದವನು.

ಎಲ್ಲರೂ ಒಂದು ಕುಟುಂಬವಾಗಿ ಬಾಳಬೇಕೆಂಬುದರ ಬಗ್ಗೆ ನಂಬಿಕೆ ಇಟ್ಟುಕೊಂಡಿದ್ದವನು. ತಾರತಮ್ಯ ಇಲ್ಲದೆ ಬದುಕಬೇಕೆಂದು ಕೊಂಡಿದ್ದವನು. ಯಾವುದೇ ತಾರತಮ್ಯವಿಲ್ಲದೆ ಎಲ್ಲರಿಗೂ ದೇಶದ ಆರ್ಥಿಕ ಸಂಪತ್ತು ಹಂಚಿಕೆ ಆಗಬೇಕು. ಕುವೆಂಪು ಅವರು ಹೇಳಿದಂತೆ ಸರ್ವಜನಾಂಗದ ಶಾಂತಿಯ ತೋಟ ಎಂಬ ಮಾತಿನಲ್ಲಿ ನಂಬಿಕೆ ಇಟ್ಟಿದ್ದವನು. ಎಲ್ಲರಿಗೂ ಸಮಾನ ಅವಕಾಶ ಸಿಗಬೇಕು. ಸಮಾನ ಅವಕಾಶ ಸಿಗದೇ ಇರುವುದರಿಂದ ಸಮಾಜದಲ್ಲಿ ಅಸಮಾನತೆ ನೋಡುತ್ತಿದ್ದೇವೆ ಎಂದು ಹೇಳಿದರು.

ಅದಕ್ಕಾಗಿಯೇ ನಮ್ಮ ಮೊದಲ ಅವಧಿಯ ಮತ್ತು 2023ರಿಂದ ಈವರೆಗಿನ ಸರ್ಕಾರವು ಸಮಾನ ಅವಕಾಶಗಳಿಗೆ ಪ್ರಯತ್ನ ಮಾಡಿವೆ. ಪ್ರಣಾಳಿಕೆಯಲ್ಲಿ ನೀಡಿದ್ದ ಭರವಸೆಗಳನ್ನು ಜಾರಿ ಮಾಡುವ ಪ್ರಮಾಣಿಕ ಪ್ರಯತ್ನ ಮಾಡಿದ್ದೇವೆ. 2013ರಲ್ಲಿ ನಾವು ನೀಡಿದ್ದ ಪುಟ 2ಕ್ಕೆ

### ಆಸ್ತಿ ಹಣದ ಹಿಂದೆ ಬೀಳಲಿಲ್ಲ

ನಾನು ಎಂದಿಗೂ ಸಿದ್ಧಾಂತ, ಮೌಲ್ಯಗಳಲ್ಲಿ ರಾಜೀ ಮಾಡಿಕೊಂಡಿಲ್ಲ. ಅಧಿಕಾರದ ಹಿಂದೆ ಹೋದವನಲ್ಲ. ಆಸ್ತಿ ಹಣದ ಹಿಂದೆ ಬಿದ್ದಿಲ್ಲ. ಆಸ್ತಿ, ಹಣ ಮಾಡಬೇಕು ಅಂತ ಅನ್ನಿಸಲಿಲ್ಲ. ಜನಶಕ್ತಿ ಇದ್ದರೆ ರಾಜಕಾರಣ ಮಾಡಬಹುದು ಎಂದು ನಿರ್ಗಮಿತ ಸಿಎಂ ಸಿದ್ದರಾಮಯ್ಯ ತಿಳಿಸಿದರು. ನಮ್ಮ ಪಕ್ಷ 135 ಮತ್ತು 1 ಸ್ಥಾನಗಳನ್ನು ಪಡೆದಿದೆ. ಜೊತೆಯಲ್ಲಿ ಇಬ್ಬರು ಸ್ವತಂತ್ರ ಅಭ್ಯರ್ಥಿಗಳೂ ಕೂಡ ಬೆಂಬಲ ಘೋಷಿಸಿದ್ದಾರೆ. ಹೀಗಾಗಿ ನಾವು ಸಂಪೂರ್ಣ ಬಹುಮತದಲ್ಲಿದ್ದೇವೆ. ಹೀಗಾಗಿ ಮುಂದಿನ ಮುಖ್ಯಮಂತ್ರಿಗೆ ಅವಕಾಶ ನೀಡಬೇಕು. ಸಂವಿಧಾನ ಬದ್ಧವಾಗಿ ನಡೆದುಕೊಳ್ಳಬೇಕು ಎಂದು ಮನವಿ ಮಾಡುತ್ತೇನೆ ಎಂದು ಸಿದ್ದರಾಮಯ್ಯ ಹೇಳಿದರು.

# ರಾಜಶೇಖರ ಕದಂಬಗೆ ಸಾಹಿತ್ಯ ಪರಿಷತ್ತಿನಿಂದ ಸನ್ಮಾನ

ಮೈಸೂರು: ಕರ್ನಾಟಕ ಸಂಘಟಕರ ಸಮಾವೇಶದ ಸಾಂಸ್ಕೃತಿಕ ಸಂಘಟಕರ ಸಮಾಗಮದ ಸಮ್ಮೇಳನಾಧ್ಯಕ್ಷರಾಗಿದ್ದ ರಾಜಶೇಖರ ಕದಂಬ ಅವರನ್ನು ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಸನ್ಮಾನಿಸಲಾಯಿತು.

ನಗರದ ಕೃಷ್ಣಮೂರ್ತಿಪುರಂನಲ್ಲಿರುವ ರಾಜಶೇಖರ ಕದಂಬ ಅವರ ನಿವಾಸಕ್ಕೆ ಭೇಟಿ ನೀಡಿದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ನೇತೃತ್ವದಲ್ಲಿ ಸನ್ಮಾನಿಸಿ ಅಭಿನಂದಿಸಲಾಯಿತು. ರಾಜಶೇಖರ ಕುಟುಂಬದಮನಸ್ಸು ತಾಯಿ ಹೃದಯ ಇದ್ದಂತೆ ಇರುವರು. ಕಳೆದ 50 ವರ್ಷದಿಂದ ಕದಂಬ ರಂಗ ವೇದಿಕೆಯನ್ನು ಯಾರ ನೆರವು ಪಡೆಯದೇ ಯಶಸ್ವಿಯಾಗಿ ನಡೆಸಿಕೊಂಡು ಬಂದಿದ್ದಾರೆ. ಇವರೊಟ್ಟಿಗಿದ್ದವರೆಲ್ಲಾ ದೊಡ್ಡ ದೊಡ್ಡ ಉನ್ನತ ಹುದ್ದೆಗೇರಿದ್ದು, ಇವರು ರಂಗವೇದಿಕೆ ಕಟ್ಟಿಕೊಂಡು ಸಮಾಜಮುಖಿ ಚಿಂತನೆಯಲ್ಲಿ ನಡೆಯುತ್ತಿದ್ದಾರೆಂದರು.

ಬಸವ ಬಳಗಗಳ ಒಕ್ಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ಸಂಘಟನೆ, ರಂಗಭೂಮಿ, ಸಾಹಿತ್ಯ ಕ್ಷೇತ್ರದಲ್ಲಿ ದುಡಿದು ಕ್ರಿಯಾಶೀಲರಾಗಿ ಸಂಘಟನಾ ಚತುರತೆಯಿಂದ ಇದ್ದಾರೆ. ಇವರ ಸಾಹಿತ್ಯ ಕ್ಷೇತ್ರದ ಸೇವೆಗೆ ಅನೇಕ ಪ್ರಶಸ್ತಿಗಳು ಹುಡುಕಿಕೊಂಡು ಬಂದಿವೆ. ಇವರ ಸಾಧನೆಯ ಕದಂಬ ಬಾಹು ದೊಡ್ಡಮಟ್ಟದಲ್ಲಿ ವಿಸ್ತಾರವಾಗಿದೆ ಎಂದು ಹೇಳಿದರು.



ನಿಕಟಪೂರ್ವ ಅಧ್ಯಕ್ಷ ಡಾ.ವೈ.ಡಿ.ರಾಜಣ್ಣ ಮಾತನಾಡಿ, ಮೈಸೂರು ರಂಗಭೂಮಿ ಎಂದರೆ ಅದು ರಾಜಶೇಖರ ಕದಂಬ. 1968ರಿಂದ ಸ್ಥಾಪನೆಯಾದ ಕದಂಬ ರಂಗವೇದಿಕೆಯ ಮೂಲಕ ನೂರಾರು ರಂಗ ಕಲಾವಿದರ ಬೆಳೆಸಿ ಅವರಿಗೆ ಆಸರೆಯಾಗಿದ್ದಾರೆ. ಮುಂದಿಯೂ ಇವರ ಸೇವಾ ಹಾಗೂ ಕಲಾ ಪ್ರೋತ್ಸಾಹ ಕಾರ್ಯ ಮುಂದುವರೆಯಲಿ ಎಂದು ಹೇಳಿದರು.

ಹಿರಿಯ ಪತ್ರಿಕಾ ಛಾಯಾಗ್ರಾಹಕ ಪ್ರಗತಿ ಗೋಪಾಲ ಕೃಷ್ಣ ಮಾತನಾಡಿ, ಸಾಂಸ್ಕೃತಿಕ, ಪೌರಣಿಕ, ಚಾರಿತ್ರಿಕ ನಾಟಕಗಳನ್ನು ಮೊದಲ ಬಾರಿಗೆ ರಂಗಚಾರ್ಲು ಭವನದಲ್ಲಿ ಪ್ರದರ್ಶಿದವರಲ್ಲಿ ಮೊದಲಿಗರಾಗಿದ್ದಾರೆ. ಇವರ ಕಲಾಸೇವೆ ಮನಗಂಡಿದ್ದ ನಟ ದಿ. ರಾಜಕುಮಾರ್ ಅವರೊಟ್ಟಿಗೂ ಉತ್ತಮ ಸ್ನೇಹ ಬಾಂಧವ್ಯ ಹೊಂದಿ ದ್ದಾರೆ ಎಂದು ತಿಳಿಸಿದರು. ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ಜಯಪ್ಪ ಹೊನ್ನಾಳಿ, ಜಿಲ್ಲಾ ಕಸಾಪ ಕಾರ್ಯದರ್ಶಿ ಲತಾಮೋಹನ್, ಕಸಾಪ ಮಹಿಳಾ ಘಟಕದ ಅಧ್ಯಕ್ಷೆ ಡಾ.ರತ್ನ ಹಾಲಪ್ಪಗೌಡ, ದೇವರಾಜ, ರಂಗಣ್ಣ ಮೈಸೂರು, ರಂಗಣ್ಣ ಮೈಸೂರು, ಕೌಶಲ್ಯ, ರಾಮಕೃಷ್ಣ, ಮೋಹನ್ ಕುಮಾರ್, ಪ್ರಗತಿ ಗೋಪಾಲ ಕೃಷ್ಣ, ನಾಗಮಣಿ ಕೆಂಪಣ್ಣ ಇನ್ನಿತರರು ಇದ್ದರು.

# ಡಿಕೆಶಿ ಮುಂದಿನ ಸಿಎಂ ಸ್ಥಾನ: ಪ್ರಾರ್ಥನೆ




ಮೈಸೂರು: ಅಖಿಲ ಕರ್ನಾಟಕ ಒಕ್ಕಲಿಗರ ಸಂಘ ಮೈಸೂರು ಜಿಲ್ಲಾ ಘಟಕದ ವತಿಯಿಂದ ಡಿ.ಕೆ.ಶಿವಕುಮಾರ್ ಮುಂದಿನ ಮುಖ್ಯಮಂತ್ರಿ ಆಗಲೆಂದು ಪ್ರಾರ್ಥಿಸಿ ಅಗ್ರಹಾರದ 101 ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಮಾಡಿಸಿ, 101 ತೆಂಗಿನ ಕಾಯಿ ಹಿಡುಗಾಯಿ ಒಡೆದರು.

ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ ಮಾತನಾಡಿ, 40 ವರ್ಷಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ, ಆಪತ್ಬಾಂದವನಾಗಿ ಕೆಲಸವನ್ನು ಮಾಡಿಕೊಂಡು ಬರುತ್ತಿರುವ ಪಕ್ಷದ ರಾಜ್ಯಾಧ್ಯಕ್ಷನಾಗಿ ಕಾಂಗ್ರೆಸ್ 135ಕ್ಕಿಂತ ಹೆಚ್ಚು ಸ್ಥಾನ ಬರುವಂತೆ ಕಾರ್ಯ ನಿರ್ವಹಿಸಿರುವ ಮೂಲ ಕಾಂಗ್ರೆಸ್ಸಿಗ ಡಿ.ಕೆ.ಶಿವಕುಮಾರ್ ಯಾವುದೇ ವಿಘ್ನಗಳಿಲ್ಲದೆ ನಾಳೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲೆಂದು ಪೂಜೆ ಸಲ್ಲಿಸಲಾಗಿದೆ ಎಂದರು. ಸಂಘದ ಕೆ.ಎನ್.ನಾಗೇಗೌಡ, ಬೋಗಾದಿ ಸಿದ್ದೇಗೌಡ, ಸಿಂದುವಳ್ಳಿ ಶಿವಕುಮಾರ್, ಕೃಷ್ಣಪ್ಪ, ವರಕೂಡು ಕೃಷ್ಣೇಗೌಡ, ಹೆಚ್.ಗಿರೀಶ್, ಸೋಮೇಗೌಡ, ಹನುಮಂತಯ್ಯ, ನಾರಾಯಣ ಗೌಡ, ಕುಮಾರ್ ಗೌಡ, ಬಸವರಾಜು, ತ್ಯಾಗರಾಜ್, ಹೊಂಬೇಗೌಡ, ನೇಹಾ, ಸುಜಾತಾ, ಪದ್ಮಾ, ಶಿವರಾಂ ಗೌಡ, ಶಿವರಾಜ್, ರವೀಶ್, ಸುಬ್ಬೇಗೌಡ, ಚಂದ್ರಶೇಖರ್, ರಮೇಶ್, ಕೇದಾರ್, ಪ್ರಭಾಕರ್, ಶಿವಲಿಂಗಯ್ಯ, ಶ್ರೀನಿವಾಸ್ ಸೇರಿ ಇನ್ನಿತರರು ಉಪಸ್ಥಿತರಿದ್ದರು.

# ಮೈಸೂರಿನಲ್ಲಿ ಸಂಭ್ರಮದ ಬಕ್ರೀದ್



ಮೈಸೂರು: ಸಾಂಸ್ಕೃತಿಕ ನಗರಿ ಮೈಸೂರಿನಲ್ಲೆಡೆ ಶ್ರದ್ಧಾ ಭಕ್ತಿ ಸಂಭ್ರಮ ಸಡಗರದಿಂದ ಬಕ್ರೀದ್ ಆಚರಿಸಲಾಯಿತು.

ಬೆಳಗ್ಗೆ 10ಕ್ಕೆ ತಿಲಕ್‌ನಗರದಲ್ಲಿರುವ ಈದ್ಗಾ ಮೈದಾನದಲ್ಲಿ ನೆರೆದ ಸಾವಿರಾರು ಮಂದಿ ಮುಸ್ಲಿಮರು ಸಾಮೂಹಿಕ ಪ್ರಾರ್ಥನೆ ಸಲ್ಲಿಸುವ ಮೂಲಕ ಆಚರಿಸಿದರು. ಮೈಸೂರಿನ ಸರ್‌ಖಾಜಿ ಹಜರತ್ ಮೌಲಾನಾ ನೇತೃತ್ವದಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡು ಬಕ್ರೀದ್ ಸಂದೇಶ ನೀಡಿದರು. ಶಾಸಕ ತನ್ವೀರ್ ಸೇಟ್ ಅಶೋಕ ರಸ್ತೆಯ ಅಜಮ್ ಮರ್ಕಾಜೆ ಅಹಲೆ ಸುನ್ನತೋ ಜಮಾತ್ ಮಸೀದಿಯಲ್ಲಿ ಪ್ರಾರ್ಥನೆ ಸಲ್ಲಿಸಿದರು. ಇದರೊಂದಿಗೆ ರಾಜೀವ್‌ನಗರ, ಗೌಸಿಯಾ ನಗರದ ಈದ್ಗಾ ಮೈದಾನಗಳು ಹಾಗೂ ಎಲ್ಲಾ ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ನಡೆಯಿತು.

ರಾಜೀವ್ ನಗರದ 2ನೇ ಹಂತದ ಮಸೀದಿ–ಇ– ಖೈರುಲ್‌ವಾರಾ ಮತ್ತು ಮಸೀದಿ ಸೈಯದ್ ಅಹಮದ್, ಶಾಂತಿನಗರದ ದಾರುಲ್ ಉಲೂಮ್ ರಜಾ ಮುಸ್ತಫಾ ಅರೇಬಿಕ್ ಕಾಲೇಜಿನಲ್ಲಿ ಬೆಳಗ್ಗೆ 7ಕ್ಕೆ ಪ್ರಾರ್ಥನೆ ನಡೆಯಿತು. ಮಿಷನ್ ರಸ್ತೆಯ ಈದ್ಗಾ ಮಸೀದಿ, ಭಾರತ್ ನಗರದ ಬಿಸ್ಮಿಲ್ಲಾ ಮಸೀದಿ, ರಾಜೀವ್ ನಗರದ ಮೆಕ್ಕಾ ಮಸೀದಿ, ಅಶೋಕ ರಸ್ತೆಯ ಅಜಮ್ ಮರ್ಕಾಜೆ ಅಹಲೆ ಸುನ್ನತೋ ಜಮಾತ್ ಮಸೀದಿ, ಕಲ್ಯಾಣಗಿರಿಯ ಯಾರಬ್ ಮಸೀದಿ, ರಾಜೀವ್ ನಗರದ ಯಾರಸೂಲ್ ಅಲ್ಲಾಹ ಮಸೀದಿ ಸೇರಿದಂತೆ ಎಲ್ಲಾ ಮಸೀದಿಗಳಲ್ಲಿ ಮುಸ್ಲಿಂ ಬಾಂಧವರು ಬೆಳಗ್ಗೆ 10ರವರೆಗೂ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಸಾವಿರಾರು ಮಂದಿ ಪ್ರಾರ್ಥನೆಗೆ ಸೇರುವ ಹಿನ್ನೆಲೆಯಲ್ಲಿ ಯಾವುದೇ ಅನಾಹುತವಾಗದಂತೆ ಪ್ರಭಾರ ನಗರ ಪೊಲೀಸ್ ಆಯುಕ್ತ ಬಿ.ಕೆ.ಸಿಂಗ್ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಕೆಎಸ್‌ಆರ್‌ಪಿ, ಸಿಎಆರ್ ತುಕಡಿಗಳೊಂದಿಗೆ ಡಿಸಿಪಿ, ಎಸಿಪಿಗಳು ಮತ್ತು ಇನ್ಸ್‌ಪೆಕ್ಟರ್ ಮತ್ತು ಸಿಬ್ಬಂದಿಯನ್ನು ಭದ್ರತೆಗೆ ನಿಯೋಜಿಸಲಾಗಿತ್ತು.

# 70 ಕ್ಷೇತ್ರಗಳಲ್ಲಿ 'ವಿಕಾಸಶೀಲ ಇನ್ಸಾನ್ ಪಾರ್ಟಿ' ಸ್ಪರ್ಧೆ



ಮೈಸೂರು: ರಾಜ್ಯದ ಜನರು ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್ ಆಡಳಿತಕ್ಕೆ ಬೇಸತ್ತಿದ್ದು ಈ ನಿಟ್ಟಿನಲ್ಲಿ ಹಿಂದುಳಿದ ಸಮುದಾಯದ ಏಳಿಗೆಗೆ ಮುಂದಿನ ದಿನಗಳಲ್ಲಿ ವಿಕಾಸಶೀಲ ಇನ್ಸಾನ್ ಪಕ್ಷ (ವಿಐಪಿ) 70ಕ್ಷೇತ್ರಗಳಲ್ಲಿ ಸ್ಪರ್ಧೆ ಮಾಡಲಿದೆ ಎಂದು ವಿಐಪಿ ಪಕ್ಷದ ರಾಜ್ಯ ಉಪಾಧ್ಯಕ್ಷ ಬಿ.ಕೆ.ಮೋಹನ್ ಕುಮಾರ್ ತಿಳಿಸಿದರು.

ಈ ಸಂಬಂಧ ನಗರದ ಖಾಸಗಿ ಹೋಟೆಲ್ ನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯ ರಾಜಕೀಯ ರಣರಂಗಕ್ಕೆ ಮತ್ತೊಂದು ಹೊಸ ರಾಜಕೀಯ ಪಕ್ಷ ಅಧಿಕೃತವಾಗಿ ಪಾದರ್ಪಣೆ ಮಾಡಿದ್ದೇವೆ. ರಾಜ್ಯದಲ್ಲಿ ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್‌ನಂತಹ ಪ್ರಬಲ ಪಕ್ಷಗಳ ನಡುವೆ, ಅತಿ ಹಿಂದುಳಿದ ವರ್ಗಗಳ ಧ್ವನಿಯನ್ನು ಶಾಸನಸಭೆಯಲ್ಲಿ ಮೊಳಗಿಸುವ ಮಹತ್ವಾಕಾಂಕ್ಷೆಯೊಂದಿಗೆ ಪಕ್ಷದ ಉದಯವಾಗಿದೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಯಾವುದೇ ಸರ್ಕಾರ ರಚನೆಯಾಗಬೇಕಾದರೂ ತಮ್ಮ ಪಕ್ಷದ ಬೆಂಬಲ ಅನಿವಾರ್ಯವಾಗಲಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಹಿಂದುಳಿದ ವರ್ಗಗಳಿಗೆ ಆಗಿರುವ ಅನ್ಯಾಯ, ರಾಜಕೀಯ ಪ್ರಾತಿನಿಧ್ಯದ ಕೊರತೆ ಮತ್ತು ಮುಂದಿನ ಚುನಾವಣಾ ರಣತಂತ್ರಗಳ ಕುರಿತು ಸುದೀರ್ಘವಾಗಿ ಬೆಳಕು ಚೆಲ್ಲಿದರು. ಮಹರ್ಷಿ ವಾಲ್ಮೀಕಿ, ಅಂಬಿಗರ ಚೌಡಯ್ಯ, ಬಸವಣ್ಣ, ಬುದ್ಧ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ತತ್ವಗಳಡಿ ಪಕ್ಷವನ್ನು ಮುನ್ನಡೆಸಲಾಗುವುದು.

"ರಾಜ್ಯದಲ್ಲಿ ಕೋಲಿ, ಗಂಗಾಮತ ಹಾಗೂ ಬೆಸ್ತ ಸಮಾಜದವರೇ ನಮ್ಮ ಪಕ್ಷದ ಮೂಲ ಮತದಾರರು. ನಮ್ಮ ಸಮಾಜದ ಜನಸಂಖ್ಯೆ ರಾಜ್ಯದಲ್ಲಿ ಬರೋಬ್ಬರಿ 60 ರಿಂದ 70 ಲಕ್ಷದಷ್ಟಿದೆ. ಆದರೆ, ಇಷ್ಟು ದೊಡ್ಡ ಮಟ್ಟದ ಜನಸಂಖ್ಯೆ ಇದ್ದರೂ, ಶಾಸನಸಭೆಯಲ್ಲಿ ನಮ್ಮ ಸಮಾಜದ ಒಬ್ಬನೇ ಒಬ್ಬ ಶಾಸಕನಿಲ್ಲ ಎಂಬುದು ಅತ್ಯಂತ ನೋವಿನ ಸಂಗತಿ" ಎಂದು ಬೇಸರ ವ್ಯಕ್ತಪಡಿಸಿದರು.

"ಅಹಿಂದ ಎಂದು ಹೆಸರಿಟ್ಟುಕೊಂಡು, ಹಿಂದುಳಿದವರ ಮತಗಳನ್ನು ಪಡೆದು ಎರಡು ಬಾರಿ ಮುಖ್ಯಮಂತ್ರಿಯಾದವರು, ಅಧಿಕಾರಕ್ಕೆ ಬಂದ ಮೇಲೆ ಕೇವಲ ತಮ್ಮ ಜಾತಿಗೆ ಮಾತ್ರ ಸೀಮಿತರಾದರು. ರಾಜ ದಲ್ಲಿರುವ 154 ಹಿಂದುಳಿದ ಸಮಾಜಗಳು ಹಾಗೂ 46 ಅಲೆಮಾರಿ ಸಮಾಜಗಳಿಗೆ ಮಾಡಿದ್ದೇನು? ಈ ಸಣ್ಣಪುಟ್ಟ ಸಮಾಜಗಳಿಗೆ ಎಷ್ಟು ಪ್ರಾಧಿಕಾರಗಳನ್ನು ರಚಿಸಿದ್ದಾರೆ? ಎಷ್ಟು ಅನುದಾನ ನೀಡಿದ್ದಾರೆ?" ಎಂದು ಅವರು ನೇರವಾಗಿ ಪ್ರಶ್ನಿಸಿದರು. ಅಹಿಂದ ನಾಯಕರು ಅಧಿಕಾರದಿಂದ ಕೆಳಗಿಳಿಯುತ್ತಿರುವ ಈ ಸಂದರ್ಭದಲ್ಲಿ ಅವರಿಗೆ ನೋವಾಗುತ್ತಿರಬಹುದು, ಆದರೆ ದಶಕಗಳಿಂದ ಅಧಿಕಾರ ವಂಚಿತರಾದ ನೂರಾರು ಸಮಾಜಗಳ ನೋವು ಅದಕ್ಕಿಂತ ದೊಡ್ಡದು ಎಂದರು.

"ಬಿಹಾರದಲ್ಲಿ ನಮ್ಮ ಬೆಸ್ತ ಸಮಾಜದ ಯುವಕರು ಈ ಪಕ್ಷ ಕಟ್ಟಿ ಯಶಸ್ವಿಯಾಗಿದ್ದಾರೆ. ಅಲ್ಲಿನ ಎಲ್ಲಾ ಹಿಂದುಳಿದ ವರ್ಗಗಳನ್ನು ಒಗ್ಗೂಡಿಸಿ ಇಂದು ಶಾಸನಸಭೆಯಲ್ಲಿ ಮೂವರು ಸಚಿವರನ್ನು ಹೊಂದುವಲ್ಲಿ ಪಕ್ಷ ಸಫಲವಾಗಿದೆ. ಅದೇ ಮಾದರಿಯಲ್ಲಿ ಕರ್ನಾಟಕದಲ್ಲೂ ನಾವು ಅಧಿಕಾರ ಹಿಡಿಯಲಿದ್ದೇವೆ. ನಮ್ಮದೇ ಮರ ಬೆಳೆಸಿ, ಅದರ ಹಣ್ಣು ತಿನ್ನುವ ಕಾಲ ಒದಗಿ ಬಂದಿದೆ. ಮುಂಬರುವ ಜೂನ್ 7ರಂದು ಬೆಂಗಳೂರಿನ ಪ್ರತಿಷ್ಠಿತ ಅಶೋಕ ಹೋಟೆಲ್‌ನಲ್ಲಿ ವಿಕಾಸಶೀಲ ಇನ್ಸಾನ್ ಪಾರ್ಟಿಯ ಬೃಹತ್ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಸಮಾಜಗಳ ಸುಮಾರು 100 ರಿಂದ 150 ಮಠಾಧೀಶರು, ರಾಜಗುರುಗಳು ಹಾಗೂ ಪರಮ ಋಷಿಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದರು.

# ವರಿಷ್ಠರೇ ಅಂತಿಮ: ಶಾಸಕ ತನ್ವೀರ್ ಸೇಠ್



ಮೈಸೂರು: ನಮ್ಮಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮ. ಹೀಗಾಗಿ ಅವರು ಕೈಗೊಳ್ಳುವ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗಿರಬೇಕಿದೆ ಎಂದು ಶಾಸಕ ತನ್ವೀರ್ ಸೇಠ್ ಸಿಎಂ ಬದಲಾವಣೆ ಕುರಿತು ಪ್ರತಿಕ್ರಯಿಸಿದರು.

ಇನ್ನೂ ಸಚಿವ ಸ್ಥಾನ ಕುರಿತಂತೆ ನಾನು ಎಲ್ಲಿಯೂ ಹೋಗಿ ಅಧಿಕಾರ ಕೊಡಿ ಎಂದು ಕೇಳುವುದಿಲ್ಲ. ಪಕ್ಷ ನಿಷ್ಠೆಗೆ ಅಧಿಕಾರ ಕೊಟ್ಟರೆ ಕೆಲಸ ಮಾಡುತ್ತೇನೆ. ಹೀಗೆ ಪಕ್ಷ ತೀರ್ಮಾನಕ್ಕೆ ಎಲ್ಲರೂ ತಲೆಬಾಗಬೇಕಿದೆ. ಎಲ್ಲರಿಗೂ ಬಕ್ರೀದ್ ಹಬ್ಬದ ಶುಭಾಶಯ ಕೋರಿದರು.

# ಕೆ.ಆರ್.ಪೇಟೆ: ಶ್ರದ್ಧಾಭಕ್ತಿಯಿಂದ ಬಕ್ರೀದ್ ಹಬ್ಬ ಆಚರಣೆ

ಕೆ.ಆರ್. ಪೇಟೆ: ಪಟ್ಟಣದಲ್ಲಿ ತ್ಯಾಗ ಮತ್ತು ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಮುಸ್ಲಿಂ ಬಾಂಧವರು ಶ್ರದ್ಧಾಭಕ್ತಿ ಹಾಗೂ ಸಡಗರದಿಂದ ಆಚರಿಸಿದರು.

### ಸಾಮೂಹಿಕ ಮೆರವಣಿಗೆ ಹಾಗೂ ಪ್ರಾರ್ಥನೆ

ಪಟ್ಟಣದ ಶ್ರವಣಬೆಳಗೊಳ ರಸ್ತೆಯಲ್ಲಿರುವ ಜಾಮಿಯಾ ಮಸೀದಿಯಿಂದ ಧರ್ಮಗುರು ನೂರುದ್ದೀನ್ ಶರೀಫ್ ಅವರ ನೇತೃತ್ವದಲ್ಲಿ ಮುಸ್ಲಿಂ ಬಾಂಧವರು ಸಾಮೂಹಿಕ ಮೆರವಣಿಗೆ ಹೊರಟರು. ನಂತರ ಜಯನಗರ ಬಡಾವಣೆಯಲ್ಲಿರುವ ಈದ್ಗಾ ಮೈದಾನದಲ್ಲಿ ಒಗ್ಗೂಡಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ, ಪರಸ್ಪರ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

### ಎಲ್ಲ ಧರ್ಮಗಳ ಸಾರವೂ ಒಂದೇ ಧರ್ಮಗುರು ನೂರುದ್ದೀನ್ ಶರೀಫ್

ಸಾಮೂಹಿಕ ಪ್ರಾರ್ಥನೆಯ ಬಳಿಕ ಧಾರ್ಮಿಕ ಪ್ರವಚನ ನೀಡಿದ ಧರ್ಮಗುರು ನೂರುದ್ದೀನ್ ಶರೀಫ್ ಅವರು, "ಎಲ್ಲಾ ಧರ್ಮಗಳ ಸಾರವೂ ಒಂದೇ ಆಗಿದ್ದು, ಭಗವಂತನ ಸಾಕ್ಷಾತ್ಕಾರ ಹೊಂದುವುದೇ ಅಂತಿಮ ಗುರಿಯಾಗಿದೆ. ತ್ಯಾಗ ಹಾಗೂ ಬಲಿದಾನದ ಸಂಕೇತವಾಗಿರುವ ಬಕ್ರೀದ್ ಹಬ್ಬವನ್ನು ಮುಸ್ಲಿಂ ಬಾಂಧವರು ಈ ಬಾರಿ ವಿಶೇಷವಾಗಿ ದಾನ–ಧರ್ಮ ಮಾಡುವ ಮೂಲಕ ಆಚರಿಸುತ್ತಿದ್ದಾರೆ. ಬಡವ–ಶ್ರೀಮಂತ ಎಂಬ ಯಾವುದೇ ಭೇದಭಾವವಿಲ್ಲದೆ ಎಲ್ಲರೂ ಒಂದಾಗಿ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಂಡಿರುವುದು ಅತ್ಯಂತ ಸಂತೋಷದ ವಿಷಯ" ಎಂದು ತಿಳಿಸಿದರು.



### ಬಿಗಿ ಪೊಲೀಸ್ ಬಂದೋಬಸ್ತ್

ಹಬ್ಬದ ಪ್ರಯುಕ್ತ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮವಾಗಿ ನಾಗಮಂಗಲ ಡಿವೈಎಸ್ಪಿ ಚೆಲುವರಾಜು ಹಾಗೂ ಕೆ.ಆರ್. ಪೇಟೆ ಪಟ್ಟಣ ಪೊಲೀಸ್ ಠಾಣೆಯ ಇನ್ಸ್ಪೆಕ್ಟರ್ ಸುನಿಲ್ ಕುಮಾರ್ ಅವರ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಪ್ರಾರ್ಥನೆ ಮುಕ್ತಾಯಗೊಂಡ ಬಳಿಕ ಎಲ್ಲರೂ ಪರಸ್ಪರ ಆಲಂಗಿಸಿಕೊಂಡು ಶುಭಾಶಯ ಕೋರಿ ತಮ್ಮ ತಮ್ಮ ಮನೆಗಳಿಗೆ ತೆರಳಿದರು.

# ಯತೀಂದ್ರಗೆ ಸಚಿವ ಸ್ಥಾನ



ಬೆಂಗಳೂರು: ಪುತ್ರ ಯತೀಂದ್ರ ಅವರ ಸಂಪುಟ ಸೇರ್ಪಡೆಗೆ ಸಿದ್ದರಾಮಯ್ಯ ಒಪ್ಪಿದ್ದಾರೆ ಎನ್ನಲಾಗಿದೆ. ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ಹೈಕಮಾಂಡ್ ನಾಯಕರ ಭೇಟಿಗೆ ದೆಹ ಲಿಗೆ ತೆರಳಿದ ನಿರ್ಗಮಿತ ಸಿಎಂ ಸಿದ್ದರಾಮಯ್ಯ ಅವರು ಪುತ್ರ ಸಂಪುಟ ಸೇರ್ಪಡೆಗೆ ಒಪ್ಪಿದ್ದಾರೆಂದು ತಿಳಿದುಬಂದಿದೆ.

ದೆಹಲಿಯಲ್ಲಿ ಹೈಕಮಾಂಡ್ ನಾಯಕರೊಂದಿಗೆ ಮಾತುಕತೆ ನಡೆಸಿದಾಗ ತಮಗೆ ರಾಜ್ಯಸಭೆ ಸ್ಥಾನ, ಪುತ್ರನಿಗೆ ಸಚಿವ ಸ್ಥಾನ ಎರಡೂ ಬೇಡ ಎಂದು ಸಿದ್ದರಾಮಯ್ಯ ತಿಳಿಸಿದ್ದರು. ಬಳಿಕ ಸಿದ್ದರಾಮಯ್ಯ ಮನವೊಲಿಸುವಲ್ಲಿ ಸಚಿವ ಕೆ.ಜೆ ಜಾರ್ಜ್ ಯಶಸ್ವಿಯಾಗಿದ್ದಾರೆ. ಪುತ್ರನ ಸಂಪುಟ ಸೇರ್ಪಡೆಗೆ ಸಿದ್ದರಾಮಯ್ಯ ಒಪ್ಪಿದ್ದಾರೆ ಎನ್ನಲಾಗಿದೆ.

## ಮೊದಲ ಪುಟದಿಂದ

### ಕಣ್ಣೀರಿಟ್ಟ ಲಾಡ್

ಅವರು ಅತ್ಯಂತ ಭಾವುಕರಾದರು. ಮುಖ್ಯಮಂತ್ರಿಗಳ ಅಧಿಕೃತ ನಿವಾಸ ಕಾವೇರಿಯಲ್ಲಿ ಸಚಿವರ ಕೊನೆಯ ಬ್ರೇಕ್ ಫಾಸ್ಟ್ ಸಭೆಯಲ್ಲಿ ಭಾಗಿಯಾಗಿದ್ದ ಪ್ರಮುಖ ಮಂತ್ರಿಗಳು ಮತ್ತು ಆಪ್ತ ನಾಯಕರು ಸಿದ್ದರಾಮಯ್ಯ ಅವರ ಸುದೀರ್ಘ ಹೋರಾಟದ ಪಯಣವನ್ನು ನೆನೆದು ಭಾವುಕರಾದರು. ಹಲವು ಸಚಿವರ ಕಣ್ಣಾಲಿಗಳು ತೇವಗೊಂಡಿದ್ದವು.

### ಸಿದ್ದು ಕಾಲಿಗೆ ಬಿದ್ದು ಆಶೀರ್ವಾದ ಪಡೆದ ಡಿಕೆಶಿ

ಸಿದ್ದರಾಮಯ್ಯನವರ ಅಕ್ಕಪಕ್ಕ ಡಿಸಿಎಂ ಡಿ.ಕೆ ಶಿವಕುಮಾರ್ ಮತ್ತು ಪರಮೇಶ್ವರ್ ಕುಳಿತಿದ್ದರು. ಸಂಪುಟದ ಎಲ್ಲಾ ಸಚಿವರು ಭಾಗಿಯಾಗಿದ್ದರು.

### ಹೈಕಮಾಂಡ್ ಸೂಚನೆಯಂತೆ ಸಿಎಂ ಸ್ಥಾನಕ್ಕೆ ರಾಜೀನಾಮೆ

ಭರವಸೆಗಳಲ್ಲಿ 158 ಭರವಸೆ ಈಡೇರಿಸಿದ್ದೇವೆ. 2023ರ ಪ್ರಣಾಳಿಕೆಯಲ್ಲಿ ನೀಡಿದ್ದ ಸುಮಾರು 300 ಭರವಸೆ ಮತ್ತು ಐದು ಗ್ಯಾರಂಟಿ ಯೋಜನೆ ಪೂರೈಸಿದ್ದೇವೆ ಎಂದು ಹೇಳಿದರು.

### ಸಕಲ ದೋಷ ಗಮನಿಸಿ ಮುನ್ನಡೆಯಿರಿ: ನೊಣವಿನಕೆರೆ ಶ್ರೀ

ಡಿಸಿಎಂ ಡಿಕೆ ಶಿವಕುಮಾರ್ ಇಂದು ನೊಣವಿನಕೆರೆ ಮಠಕ್ಕೆ ಭೇಟಿ ನೀಡುವ ಸಾಧ್ಯತೆಯಿತ್ತು. ಮಧ್ಯಾಹ್ನ 3 ಗಂಟೆಗೆ ಅಜ್ಜಯ್ಯನ ಪೀಠದ ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಶ್ರೀಗಳು ಕಾದಿದ್ದರು. ಆದರೆ ಡಿಸಿಎಂ ಅವರ ನೊಣವಿನಕೆರೆ ಮಠದ ಭೇಟಿ ಮುಂದೂಡಿಕೆಯಾಗಿದೆ. ಸ್ವಾಮೀಜಿಗಳನ್ನು ಬೆಂಗಳೂರಿನ ಶಾಖಾ ಮಠದಲ್ಲೇ ಭೇಟಿಯಾಗಿ ಆಶೀರ್ವಾದ ಪಡೆಯಲಿದ್ದಾರೆ.

### ಸಚಿವರಿಗೆ ವಿದಾಯದ ಬ್ರೇಕ್‌ಫಾಸ್ಟ್

ಉಪಹಾರ ಸಭೆಗೂ ಮೊದಲು ಡಿಕೆಶಿ ಜೊತೆ ಮೊದಲು ಸಿಎಂ ಪ್ರತ್ಯೇಕ ಮಾತುಕತೆ ನಡೆಸಿದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

## ಸಾವರ್ಕರ್ ಭಾವಚಿತ್ರಕ್ಕೆ ಸಂಸದ ಯದುವೀರಕೃಷ್ಣದತ್ತ ಚಾಮರಾಜ ಒಡೆಯರ್ ಪುಷ್ಪಾರ್ಚನೆ

# ಬ್ರಿಟಿಷರ ನಾಡಿನಲ್ಲಿಯೇ ಹೋರಾಡಿದ ಸಾವರ್ಕರ್

ಮೈಸೂರು: ಸಾವರ್ಕರ್ ಪ್ರತಿಷ್ಠಾನ ಮೈಸೂರು ವತಿಯಿಂದ ಸ್ವಾತಂತ್ರ್ಯ ವೀರ ನಾಯಕ ದಾಮೋದರ ಸಾವರ್ಕರ್ ರ 143ನೇ ಜಯಂತಿಯನ್ನು ನಗರದ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತದಲ್ಲಿ ಆಯೋಜಿಸಲಾಗಿತ್ತು.

ಸಂಸದ ಯದುವೀರಕೃಷ್ಣದತ್ತ ಚಾಮರಾಜ ಒಡೆಯರ್ ಸಾವರ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿ, ದೇಶದ ಸ್ವಾತಂತ್ರ್ಯಕ್ಕಾಗಿ ವಿನಾಯಕ ದಾಮೋದರ ಸಾವರ್ಕರ್ ತಮ್ಮ ಜೀವಿತಾವಧಿಯ ಬಹುಪಾಲು ಜೈಲಿನಲ್ಲಿ ಸವೆದು ತಮ್ಮನ್ನು ತಾವೇ ಸಮರ್ಪಿಸಿಕೊಂಡವರು. ಸ್ವಾತಂತ್ರ್ಯ ಬಂದ ನಂತರವೂ ಅವರು ಅನುಭವಿಸಿದ ಶಿಕ್ಷೆ ನೋವು ಹೇಳತೀರದು. ಬ್ರಿಟಿಷರ ನಾಡಿಗೆ ಹೋಗಿ ಅವರ ವಿರುದ್ಧ ಹೋರಾಟಕ್ಕಾಗಿ ಸಂಘಟನೆಯನ್ನು ಸಜ್ಜುಗೊಳಿಸಿದ ವೀರ ಸಾವರ್ಕರ್ ಎಂದು ಬಣ್ಣಿಸಿದರು. ಅಂಡಮಾನಿನ ಜೈಲಿನ ಚಿಕ್ಕ ಕೋಣೆಯೊಂದರಲ್ಲಿ ಕಠಿಣ ಕರಿನೀರಿನ ಶಿಕ್ಷೆ ಅನುಭವಿಸಿದ್ದರು, ಅಂತಹ ಮಹಾನ್ ವ್ಯಕ್ತಿಯ ಜಯಂತಿಯಂದು ಅವರ ತ್ಯಾಗವನ್ನು ನೆನೆದು ಗೌರವಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ತಿಳಿಸಿದರು.



ನಂತರ ಸಾರ್ವಜನಿಕರಿಗೆ ಸಿಹಿ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಸಂಸದ ಯದುವೀರ್, ಸಾವರ್ಕರ್ ಪ್ರತಿಷ್ಠಾನದ ಪ್ರಧಾನ ಕಾರ್ಯದರ್ಶಿ ರಾಕೇಶ್ ಭಟ್, ನಗರ ಪಾಲಿಕೆ ಮಾಜಿ ಸದಸ್ಯರಾದ ಪ್ರಶಾಂತ್ ಗೌಡ, ಜಗದೀಶ್, ವಿಕ್ರಂ ಅಯ್ಯಂಗಾರ್, ಸಂದೇಶ್, ಪ್ರಮೋದ್ ಗೌಡ, ಸಂಜಯ್, ಸಂತೋಷ್, ಟಿ.ಎಸ್. ಅರುಣ್, ದೀಪಕ್, ರವಿ, ಗೈಡ್ ಚಂದ್ರು, ಸಂಜಯ್ ಪ್ರಸನ್ನ, ಡಿ.ರಾಘವೇಂದ್ರ, ಚೇತನ್, ಭಾಗ್ಯರಾಜ್, ಮಧು ಸೋಮಶೇಖರ್, ಚಂದನ್ ಗೌಡ, ಮುರಳಿ, ನಾಗೇಂದ್ರ, ವಿಷ್ಣುವರ್ಧನ್ ಇನ್ನಿತರರು ಹಾಜರಿದ್ದರು.

# ಯಾರಾಗ್ತಾರೆ ಮೈಸೂರಿನ ನೂತನ ಸಾರಥಿ



ಮೈಸೂರು: ಮುಖ್ಯಮಂತ್ರಿಗಳನ್ನು ಕಳೆದಕೊಂಡ ಜಿಲ್ಲೆ ಎಂಬಂತಾಗಿರುವ ಮೈಸೂರಿನ ಮುಂದಿನ ಸಾರಥಿಯಾರು ಎಂಬ ಪ್ರಶ್ನೆ ಈಗ ಎಲ್ಲೆಡೆ ಚರ್ಚೆಗೆ ಗ್ರಾಸವಾಗಿದ್ದು, ಇದಕ್ಕೆ ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಅಥವಾ ತನ್ವೀರ್ ಸೇಠ್‌ಗೆ ಈ ಅವಕಾಶ ಸಿಗಲಿದೆಯೇ ಎಂಬ ಚಿತ್ತ ಈಗ ದೆಹಲಿಯತ್ತ ನೆಟ್ಟಿದೆ.

**▸▸ ಸಿದ್ದು ನಡೆಯತ್ತ ಚಿತ್ತ, ಯತೀಂದ್ರ ತನ್ವೀರ್ ಸೇಠ್ ಪೈಪೋಟಿ**

ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಅಧಿಕಾರದಲ್ಲಿ ಇರಲಿ, ಇಲ್ಲದಿರಲಿ ನಾಯಕತ್ವದಲ್ಲಿ ಮೈಸೂರಿನ ಬಹುತೇಕ ರಾಜಕೀಯ ತೀರ್ಮಾನ ಆಗುವುದು ಅವರಿಂದಲೇ ಆಗಿದೆ. ಹೀಗಿರುವಾಗಿ ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ನೀಡಿರುವ ಸಿದ್ದರಾಮಯ್ಯ ಸ್ವತಃ ತಾವೇ ಮೈಸೂರಿನ ಇದುವರೆವಿಗಿನ ಅಭಿವೃದ್ಧಿ ಪರ ತೀರ್ಮಾನಗಳನ್ನು ಕೈಗೊಂಡಿದ್ದರು. ಅವರ ಮಾತೇ ಜಿಲ್ಲೆಗೆ ಸುಪ್ರೀಂ ಆಗಿತ್ತು. ಆದರೆ, ಈ ಸನ್ನಿವೇಶದಲ್ಲಿ ಮೈಸೂರು ಜಿಲ್ಲೆಯ ಕಾಂಗ್ರೆಸ್ ನಾಯಕತ್ವ ಮುನ್ನಡೆಸುವುದಕ್ಕೆ ಸಿದ್ದರಾಮಯ್ಯನವರೇ ಬರುತ್ತಾರಾ ಅಥವಾ ಬೇರೊಬ್ಬರಿಗೆ ಇದರ ಹೊಣೆ ಹೋಗುತ್ತದೆಯೇ ಎಂಬ ಪ್ರಶ್ನೆ ಈಗ ಉದ್ಭವಿಸಿದೆ.

**ಯತೀಂದ್ರಗೆ ಸ್ಥಾನ**

ಇನ್ನೂ ಅಧಿಕಾರ ಹಂಚಿಕೆ ಕುರಿತು ಯಾವುದೇ ಚರ್ಚೆಯಾಗಿಲ್ಲ. ಹೀಗಿರುವಾಗ ಮೂಲಗಳ ಪ್ರಕಾರ ಡಾ.ಯತೀಂದ್ರ ಸಿದ್ದರಾಮಯ್ಯನವರಿಗೆ ಸಚಿವ ಸಂಪುಟದಲ್ಲಿ ಸ್ಥಾನದಲ್ಲಿ ಸಿಗಲಿದೆ ಎಂಬ ಮಾತು ಸಿದ್ದರಾಮಯ್ಯನವರ ಆಪ್ತ ವಲಯದಲ್ಲಿ ಕೇಳಿ ಬರುತ್ತಿದೆ. ಆದರೆ, ಮೈಸೂರು ಉಸ್ತುವಾರಿಯೂ ಸೇರಿದಂತೆ ಯತೀಂದ್ರ ಸಂಪುಟ ಸೇರುವ ಬಗ್ಗೆ ಇದುವರೆವಿಗೂ ಸಿದ್ದರಾಮಯ್ಯ ಮಾತ್ರ ಯಾವುದೇ ಚರ್ಚೆ ನಡೆಸಿಲ್ಲ. ಯತೀಂದ್ರರಿಗೆ ಅನುಭವದ ಕೊರತೆ ಇರುವ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಮುಂದಿನ ಬೆಳವಣಿಗೆಗಳನ್ನು ಕಾದು ನೋಡುವ ತಂತ್ರ ನಡೆಸಿದ್ದಾರೆ ಎನ್ನಲಾಗುತ್ತಿದೆ.

**ಡಿಕೆ ಆಪ್ತನಿಗೆ ಒಲಿಯುವುದೇ**

ಪಕ್ಷದ ಹೈಕಮಾಂಡ್ ನಮಗೆ ಸುಪ್ರೀಂ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಇಬ್ಬರೂ ಪಕ್ಷಕ್ಕೆ ಅನಿವಾರ್ಯ ಎನ್ನುವ ಜಿಲ್ಲೆಯ ಹಿರಿಯ ಶಾಸಕರಲ್ಲಿ ಒಬ್ಬರಾದ ಶಾಸಕ ತನ್ವೀರ್ ಸೇಠ್ ಡಿಕೆಶಿ ತಂಡದ ಕೋಟಾದಡಿಯಲ್ಲಿ ಸಚಿವ ಸ್ಥಾನ ಬಯಸಿದ್ದಾರೆ. ಅಲ್ಲದೆ ಹಿರಿತನ ಆಧಾರದ ಮೇಲೂ ತಮಗೆ ಟಿಕೆಟ್ ನೀಡುವಂತೆ ತಮ್ಮದೇ ದಾಟಿಯಲ್ಲಿ ತನ್ವೀರ್ ಸೇಠ್ ಒತ್ತಡ ಹಾಕಲಾರಂಭಿಸಿದ್ದಾರೆ. ಈ ಬಗ್ಗೆಯೂ ಚಿಂತನೆ ನಡೆಸಿರುವ ಡಿ.ಕೆ.ಶಿವಕುಮಾರ್ ಸಹ ಇವರ ಪರವಾಗಿ ಬ್ಯಾಟಿಂಗ್ ಬೀಸುವ ತಂತ್ರಗಾರಿಕೆಯಿದೆ. ಆದರೆ, ತವರೂರಿನ ಸಾರಥಿ ನಿರ್ಧಾರದಲ್ಲಿ ಸಿದ್ದರಾಮಯ್ಯ ಅಂತಿಮ ಆಗಿರುವುದರಿಂದ ಯಾರಿಗೆ ಮೈಸೂರು ಸಾರಥಿ ಭಾಗ್ಯ ದೊರೆಯಲಿದೆ ಎಂಬುದನ್ನು ಕಾದು ನೋಡಬೇಕಿದೆ.

## ಮಹದೇವಪ್ಪ ಅನುಮಾನ

**ಸಿದ್ದರಾಮಯ್ಯನವರ ಪರಮಾಪ್ತ ಸಮಾಜ ಕಲ್ಯಾಣ ಇಲಾಖೆ ಸಚಿವರಾಗಿದ್ದ ಡಾ.ಎಚ್.ಸಿ.ಮಹದೇವಪ್ಪ ಸಿದ್ದರಾಮಯ್ಯ ಅಧಿಕಾರ ತ್ಯಜಿಸಿರುವುದರಿಂದ ಹಾಗೂ ಕಾಂಗ್ರೆಸ್ ಹೈಕಮಾಂಡ್ ಹೊಸಬರಿಗೆ ಅವಕಾಶ ನೀಡುವ ಉದ್ದೇಶ ಹೊಂದಿರುವುದರಿಂದ ಮೈಸೂರು ಉಸ್ತುವಾರಿ ಸ್ಥಾನ ಕೈ ತಪ್ಪುವುದು ಬಹುತೇಕ ಖಚಿತವಾಗಿದೆ. ಇನ್ನೂ ತಮ್ಮ ಸ್ಥಾನ ಉಳಿಸಿಕೊಳ್ಳುವ ನಿಟ್ಟಿನಲ್ಲಿಯೂ ಸಿಎಂ ಸಿದ್ದರಾಮಯ್ಯರನ್ನೇ ಅವಲಂಬಿಸಿರುವ ಮಹದೇವಪ್ಪ ಸದ್ಯದ ಸ್ಥಿತಿಯಲ್ಲಿ ತಮ್ಮ ಉಳಿವು, ಅಳಿವು ಸಿದ್ದರಾಮಯ್ಯ ಕೈಗೊಳ್ಳುವ ತೀರ್ಮಾನಕ್ಕೆ ಬದ್ಧರಾಗಿದ್ದಾರೆ.**

## ಅಬಿದ್ ಪಾಷಾಗೆ ಜೀವಾವಧಿ ಶಿಕ್ಷೆಗೆ ಆಗ್ರಹ

ಮೈಸೂರು: ಪಿರಿಯಾಪಟ್ಟಣದ ಬಳಿ ಓರ್ವರನ್ನು ಕೊಲೆ ಮಾಡಲು ಸುಪಾರಿ ಪಡೆದು ಸಿಕ್ಕಿಬಿದ್ದಿರುವ ಅಬಿದ್ ಪಾಷಾ ಇದುವರೆಗೆ ಅನೇಕ ಕೊಲೆಗಳನ್ನು ಮಾಡಿ, ಹಲವರ ಹತ್ಯೆಗೆ ಯತ್ನಿಸಿದ್ದಾನೆ. ಈ ಹಿಂದೆ ತಮ್ಮ ಮೇಲೆ ನಡೆದ ಮಾರಣಾಂತಿಕ ಹಲ್ಲೆ ಪ್ರಕರಣದ ಪ್ರಮುಖ ಆರೋಪಿಯೂ ಆಗಿದ್ದು, ಪೊಲೀಸರು ಹಾಗೂ ನ್ಯಾಯಾಲಯ ಈತ ತಪ್ಪಿಸಿಕೊಳ್ಳಲು ಬಿಡದೇ ಜೀವಾವಧಿ ಶಿಕ್ಷೆ ವಿಧಿಸಬೇಕೆಂದು ಬಿಜೆಪಿ ಮುಖಂಡ ವಿ.ಗಿರಿಧರ್ ಆಗ್ರಹಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಶಾಸಕ ತನ್ವೀರ್‌ಸೇಠ್ ಮೇಲೆ ನಡೆದ ಭೀಕರ ಹಲ್ಲೆ ಪ್ರಕರಣದಲ್ಲಿಯೂ ಈತನ ಕೈವಾಡವಿದೆ. ಈತನಿಂದಾಗಿ ಎನ್.ಆರ್. ಕ್ಷೇತ್ರದ ಭಾಗದಲ್ಲಿ ಹಾಗೂ ಇನ್ನಿತರೆಡೆ ಹಿಂದೂಗಳು ನೆಮ್ಮದಿಯಿಂದ ಇರಲು ಸಾಧ್ಯವಾಗದಂತಾಗಿದೆ. ಹಿಂದೂಗಳಿಂದಲೇ ಸುಪಾರಿ ಪಡೆದು, ಹಿಂದೂಗಳನ್ನು ಕೊಲೆ ಮಾಡುವ ಕ್ರೂರಿ ಈತ, ಈ ಹಿಂದೆ ಹುಣಸೂರಿನ ಓರ್ವ ಬಾಲಕನ ಬರ್ಬರ ಕೊಲೆ ಪ್ರಕರಣದಲ್ಲಿಯೂ ಭಾಗಿಯಾಗಿದ್ದಾನೆ. ಆದರೂ ಇಷ್ಟು ದಿನ ಈತ ಪೊಲೀಸರ ಕಣ್ಣಿಗೆ ಮಣ್ಣೆರಚಿ ಓಡಾಡಲು ಬಿಟ್ಟವರಾರು ಎಂಬುದು ತಿಳಿಯುತ್ತಿಲ್ಲ ಎಂದು ಆತಂಕ ವ್ಯಕ್ತಪಡಿಸಿದರು.

ಈತ ಈ ಹಿಂದೆ ಎಸ್‌ಡಿಪಿಐ ಸ್ಟಾರ್ ಪ್ರಚಾರಕನೂ ಆಗಿದ್ದ. ಜಿಹಾದಿ ಮನಸ್ಥಿತಿಯ ಈತನಿಂದಾಗಿ ಉದಯಗಿರಿಯಲ್ಲಿ ಅನೇಕ ಕೊಲೆಗಳು, ಹಲ್ಲೆಗಳು ನಡೆದಿವೆ. ಕ್ಯಾತಮಾರನಹಳ್ಳಿ ಕೋಮು ಗಲಭೆಯಲ್ಲಿಯೂ ಈತನ ಪಾತ್ರವಿದೆ. ಹೀಗಾಗಿ ಈತ ನಡೆಸಿದ ಕೊಲೆ ಯತ್ನದಲ್ಲಿ ಬದುಕುಳಿದ ಕೆಲವೇ ಮಂದಿಯಲ್ಲಿ ತಾವೂ ಒಬ್ಬ. ಹೀಗಾಗಿ ಈತನಿಂದ ತಮಗೆ ಜೀವ ಭಯವಿದ್ದು, ಈತನಿಗೆ ಉಗ್ರ ಶಿಕ್ಷೆ ವಿಧಿಸಬೇಕೆಂದು ಕೋರಿದರು. ಸುಬ್ರಹ್ಮಣ್ಯ ಹಾಗೂ ಪ್ರದೀಪ್ ಇದ್ದರು.

## ಕಂದಾಯ ಇಲಾಖೆಗಳಿಂದ ನಕಲಿ ವಂಶವೃಕ್ಷ ನೀಡಿಕೆ ಆರೋಪ

ಮೈಸೂರು: ಎಚ್.ಡಿ. ಕೋಟೆ ತಾಲ್ಲೂಕು ಅಂತರಸಂತೆ ಹೋಬಳಿಯ ನೂರಲಕುಪ್ಪೆ ಗ್ರಾಮಕ್ಕೆ ಸೇರಿದ ತಮ್ಮ ತಂದೆ ತಾಯಿಯ ವಶಂಸ್ಥರ ಜಮೀನಿಗೆ ಪೌತಿ ಖಾತೆ ಮಾಡಿಸುವುದಕ್ಕೆ ಸಂಬಂಧಿಸಿದಂತೆ ತಮ್ಮ ಸೋದರ ಮಾವಂದಿರಿಂದ ಹಣ ಪಡೆದಿರುವ ಅಧಿಕಾರಿಗಳು ನಾಲ್ವರು ಹೆಣ್ಣು ಮಕ್ಕಳನ್ನು ಕೈಬಿಟ್ಟಿರುವ ನಕಲಿ ವಂಶವೃಕ್ಷವನ್ನು ಅವರಿಗೆ ನೀಡಿದ್ದಾರೆ ಎಂದು ನಗರದ ನಿವಾಸಿ ಕೃಷ್ಣಮೋಹನ್ ಆರೋಪಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ತಾವು ಮರಣಪತ್ರಕ್ಕಾಗಿ ಅರ್ಜಿ ಸಲ್ಲಿಸಿದರೆ ತಾಲ್ಲೂಕು ಅಧಿಕಾರಿಗಳು ಸಮರ್ಪಕ ದಾಖಲೆ ನೀಡಿಲ್ಲ. ಬದಲಾಗಿ ತಮ್ಮ ಸೋದರ ಮಾವಂದಿರಿಗೆ ನೀಡಿದ್ದಾರೆ. ನಕಲಿ ವಂಶವೃಕ್ಷ ಪಡೆದ ಅವರು ಪೌತಿ ಖಾತೆ ಮಾಡಿಸಿಕೊಂಡಿದ್ದಾರೆ. ಈ ಬಗ್ಗೆ ತಹಸೀಲ್ದಾರ್‌ಗೆ ದೂರು ನೀಡಿದ ಬಳಿಕ ಖಾತೆ ಬದಲಾವಣೆ ಮಾಡಿದ್ದಾರೆ. ಆದರೆ ಅಕ್ರಮ ಎಸಗಿದ ವಿಎ ಮತ್ತು ಆರ್‌ಐ ವಿರುದ್ಧ ಕ್ರಮ ಕೈಗೊಂಡಿಲ್ಲ ಎಂದು ದೂರಿದರು. ಇವರೆಲ್ಲರ ವಿರುದ್ಧ ಸಂಬಂಧಿಸಿದವರಿಗೆ ದೂರು ನೀಡಿದರೂ ಪ್ರಯೋಜನವಾಗಿಲ್ಲ. ಹೀಗಾಗಿ ಕೂಡಲೇ ಕ್ರಮ ಜರುಗಿಸಬೇಕು. ಇಲ್ಲದಿದ್ದಲ್ಲಿ ನ್ಯಾಯಾಲಯದ ಮೊರೆ ಹೋಗುವುದಾಗಿ ಎಚ್ಚರಿಸಿದರು.

## ಮೇಕೆದಾಟು ಯೋಜನೆ: ಮೋದಿ ಮಧ್ಯ ಪ್ರವೇಶಕ್ಕೆ ಮನವಿ

ಮೈಸೂರು: ಮೇಕೆದಾಟು ಯೋಜನೆಯ ವಿಚಾರವಾಗಿ ಪ್ರಧಾನಿ ಮೋದಿ ಅವರು ಮಧ್ಯಪ್ರವೇಶ ಮಾಡಿ, ರಾಜ್ಯಕ್ಕೆ ನ್ಯಾಯ ಒದಗಿಸಬೇಕು ಎಂದು ಕಾವೇರಿ ಕ್ರಿಯಾ ಸಮಿತಿ ಗೌರವಾಧ್ಯಕ್ಷ, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಆಗ್ರಹಿಸಿದರು.

ತಮಿಳುನಾಡು ಮುಖ್ಯಮಂತ್ರಿ ವಿಜಯ್, ಪ್ರಧಾನಿ ಮೋದಿ ಅವರನ್ನು ಭೇಟಿಯಾಗಿ, ಮೇಕೆದಾಟು ಯೋಜನೆಗೆ ಅನುಮತಿ ನೀಡಬಾರದು ಎಂದು ಮನವಿ ಮಾಡಿದ್ದಾರೆ. ಮೇಕೆದಾಟು ಯೋಜನೆಯಿಂದ ಎರಡು ರಾಜ್ಯಗಳಿಗೆ ಅನುಕೂಲವಾಗಲಿದೆ. ಈ ಕುರಿತು ರಾಷ್ಟ್ರಪತಿ, ಪ್ರಧಾನಿ , ಕೇಂದ್ರ ನೀರಾವರಿ ಮಂತ್ರಗಳನ್ನು ಕಾವೇರಿ ಕ್ರಿಯಾ ಸಮಿತಿ ನಿಯೋಗದಿಂದ ಭೇಟಿ ಮಾಡಿ, ಮೇಕೆದಾಟು ಯೋಜನೆಗೆ ನಿರ್ಮಾಣಕ್ಕೆ ಅನುಮತಿ ಕೊಡಿಸುವಂತೆ ಮನವಿ ಮಾಡುತ್ತೇವೆ ಎಂದು ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಪ್ರಧಾನಿ ಮಂತ್ರಿಗಳು ಮೇಕೆದಾಟು ವಿಚಾರವಾಗಿ ಮಧ್ಯಸ್ಥಿಕೆ ವಹಿಸಿ, ಮೇಕೆದಾಟುವಿನಲ್ಲಿ ಅಣೆಕಟ್ಟೆ ಕಟ್ಟಲು ಅವಕಾಶ ಕೊಡಿಸಬೇಕು. ಕಾವೇರಿ ಹುಟ್ಟುವುದು ರಾಜ್ಯದ ಕೊಡಗಿನಲ್ಲಿ, ಇಲ್ಲಿ ಹುಟ್ಟುವ ನೀರಿನ ರಾಜ್ಯಕ್ಕೆ ಸಲ್ಲಬೇಕು.ನೀರು ವ್ಯರ್ಥವಾಗಬಾರದು ಎಂಬ ಉದ್ದೇಶದಿಂದ ಅಣೆಕಟ್ಟು ಕಟ್ಟಲು ಉದ್ದೇಶ ಇದೆ. ಇದರಿಂದ ತಮಿಳುನಾಡಿಗೆ ನೀರಿನ ಸಮಸ್ಯೆ ಎದುರಾಗುವುದಿಲ್ಲ ಎಂದರು.

1974ರಲ್ಲಿ ಕಾವೇರಿ ನೀರಿನ ಒಪ್ಪಂದವನ್ನು ಮರು ಪರಿಶೀಲನೆ ಮಾಡಬೇಕು. ರಾಜಕೀಯ ಪಕ್ಷಗಳು ಕಿತ್ತಾಟದಿಂದ ರಾಜ್ಯದಲ್ಲಿ ಕಾವೇರಿ ವಿವಾದ ಇಂದಿಗೂ ಮುಂದುವರೆದಿದೆ. ಆದರೆ, ತಮಿಳುನಾಡಿ ಜಲ,ನೆಲ,ಭಾಷೆಯ ವಿಷಯ ಬಂದಾಗ, ಪಕ್ಷಭೇದ ಮರೆತು, ಎಲ್ಲ ಪಕ್ಷದವರು ಒಂದಾಗುತ್ತಾರೆ.ಆದರೆ, ನಮ್ಮಲ್ಲಿ ಒಗ್ಗಟ್ಟಿನ ಕೊರತೆ ಕಾಣುತ್ತಿದೆ.ಇದನ್ನು ಬಿಟ್ಟು ಪಕ್ಷಾತೀತವಾಗಿ ಮೋದಿಯವರನ್ನು ಭೇಟಿ, ಕಾವೇರಿ ನೀರಿನ ಸಮಸ್ಯೆ ಬಗೆಹರಿಸಿಕೊಳ್ಳಬೇಕು ಎಂದು ಹೇಳಿದರು. ತಮಿಳುನಾಡಿ ಯಾವುದೇ ಸರಕಾರ ಬಂದರೂ,ಕಾವೇರಿ ನೀರಿನ ವಿಚಾರವಾಗಿ ಧ್ವನಿ ಎತ್ತುತ್ತಿವೆ.ಅದೇ ರೀತಿ ನೂತನ ಸಿಎಂ ಜೋಸ್? ವಿಜಯ್ ಅವರು ಮೇಕೆದಾಟು ವಿಚಾರವಾಗಿ ಧ್ವನಿ ಎತ್ತಿದ್ದಾರೆ ಎಂದರು. ಸಮಿತಿ ಅಧ್ಯಕ್ಷ ಎಸ್.ಜಯಪ್ರಕಾಶ್ ಮಾತನಾಡಿ, ತಮಿಳುನಾಡು ನೂತನ ಸಿಎಂ ಜೋಸ್? ವಿಜಯ್ ಅವರು, ಪ್ರಧಾನಿ ಮೋದಿ ಅವರನ್ನು ಭೇಟಿ ಮಾಡಿ, ಮೇಕೆದಾಟು ಯೋಜನೆ ಕೈ ಬಿಡುವಂತೆ ಮನವಿ ಸಲ್ಲಿಸಿದ್ದಾರೆ. ಇದಕ್ಕೂ ಮೊದಲು ವಿಜಯ್ ಅವರು, ಮೇಕೆದಾಟು ಯೋಜನೆಯ ವಿಚಾರವನ್ನು ಸರಿಯಾಗಿ ಅರಿಯಲಿ ಎಂದರು. ಮೇಕೆದಾಟು ಯೋಜನೆ ಆರಂಭಿಸುವಂತೆ ರಾಜ್ಯ ಸರಕಾರವು, ಕೇಂದ್ರ ಸರಕಾರದ ಮೇಲೆ ಒತ್ತಡ ಹೇರಬೇಕು.ಈ ಯೋಜನೆಯಿಂದ ರೈತರಿಗೆ ಹಾಗೂ ಜನರಿಗೆ ಸಾಕಷ್ಟು ಅನುಕೂಲವಾಗಲಿದೆ. ಈ ಯೋಜನೆ ಕೈ ಬಿಟ್ಟರೆ, ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಕೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ನಟಿ ಶುಭರಕ್ಷಘಿ, ಕಾವೇರಿ ಕ್ರಿಯಾ ಸಮಿತಿ ಪ್ರಧಾನ ಸಂಚಾಲಕ ಮೂಗೂರು ನಂಜುಂಡಸ್ವಾಮಿ, ಕಾರ್ಯದರ್ಶಿ ಮೆಲ್ಲಹಳ್ಳಿ ಮಹದೇವಸ್ವಾಮಿ, ಎಂ.ಜೆ.ಸುರೇಶ್‌ಗೌಡ, ರೈತ ಶಿವಕುಮಾರ್, ರವೀಶ್, ಹನುಮಂತೇಗೌಡ, ಸ್ವಾಮಿಗೌಡ ಇದ್ದರು.

## ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಲು ಮನವಿ

ಮೈಸೂರು: ಚಾಮರಾಜನಗರ ಕ್ಷೇತ್ರದ ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಜಿಲ್ಲಾ ಉಪ್ಪಾರರ ಸಂಘದ ಅಧ್ಯಕ್ಷ ನಾಗರಾಜು ಕರಳಾಪುರ ಕಾಂಗ್ರೆಸ್ ವರಿಷ್ಠರಲ್ಲಿ ಮನವಿ ಮಾಡಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕ್ಷೇತ್ರದಿಂದ ನಾಲ್ಕು ಬಾರಿ ಶಾಸಕರಾಗಿ ಅಯ್ಕೆಯಾಗಿರುವ ಪುಟ್ಟರಂಗಶೆಟ್ಟಿ ಹಿರಿಯ ಜನನಾಯಕ ಹಾಗೂ ಹಿಂದುಳಿದ




ವರ್ಗದ ಪ್ರಮುಖ ಮುಖಂಡರಾಗಿದ್ದಾರೆ. ಹೀಗಾಗಿ ಇವರನ್ನು ಸಚಿವರನ್ನಾಗಿಸುವ ಮೂಲಕ ಉಪ್ಪಾರ ಸಮುದಾಯಕ್ಕೆ ಶಕ್ತಿ ತುಂಬಬೇಕೆಂದು ಕೋರಿದರು. ಇನ್ನಿತರ ಪದಾಧಿಕಾರಿಗಳಾದ ಜಿ. ರಾಮಚಂದ್ರ, ಎಂ. ಸೋಮಣ್ಣ, ಆರ್. ನಾಗರಾಜು, ಎಂ. ಗೋವಿಂದರಾಜು, ಸಿ. ಗೋವಿಂದರಾಜು, ಸಿದ್ದಶೆಟ್ಟಿ ಹಾಗೂ ಇನ್ನಿತರರು ಇದ್ದರು.

**ಭಗೀರಥ ಉಪ್ಪಾರ ಸಂಘ ಮನವಿ**

ಚಾಮರಾಜನಗರ ಶಾಸಕರಾದ ರಾಜ್ಯ ಉಪ್ಪಾರ ಸಂಘದ ಅಧ್ಯಕ್ಷ ಸಿ. ಪುಟ್ಟರಂಗಶೆಟ್ಟಿ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಮೈಸೂರು ಜಿಲ್ಲಾ ಭಗೀರಥ ಉಪ್ಪಾರ ಸಂಘದ ಜಿಲ್ಲಾಧ್ಯಕ್ಷ ಎಸ್.ಯೋಗೀಶ್ ಉಪ್ಪಾರ ಮನವಿ ಮಾಡಿದರು. ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇಡೀ ರಾಜ್ಯದ 224 ಕ್ಷೇತ್ರಗಳಲ್ಲಿ ಉಪ್ಪಾರ ಸಮುದಾಯದ ಮತದಾರರು 25 ರಿಂದ 30 ಲಕ್ಷದಷ್ಟಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ 136 ಕ್ಷೇತ್ರಗಳಲ್ಲಿಯೂ ಅತಿ ಹೆಚ್ಚು ಬೆಂಬಲ ನೀಡಿ ಕಾಂಗ್ರೆಸ್ ಗೆಲುವಿಗೆ ಕಾರಣರಾಗಿದ್ದಾರೆ. ಸಮುದಾಯದವರು ಸದಾ ಕಾಂಗ್ರೆಸ್ಸನ್ನು ಬೆಂಬಲಿಸುವವರಾಗಿದ್ದು, ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಕೋರಿದರು. ಮಹದೇವಸ್ವಾಮಿ, ಮರಿಸ್ವಾಮಿ, ಗೋವಿಂದಶೆಟ್ಟಿ, ರಾಜು ಹಾಗೂ ಬಸವರಾಜು, ಇನ್ನಿತರರು ಇದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಸಿದ್ದು ವಿದಾಯ: ಮೈಸೂರಲ್ಲಿ ಮೌನ, ವರುಣದಲ್ಲಿ ಕಣ್ಣೀರು



ಮೈಸೂರು: ರಾಜ್ಯ ರಾಜಕೀಯದ ಅತಿ ದೀರ್ಘಾವಧಿ ಮುಖ್ಯಮಂತ್ರಿಯಾಗಿ ಅದರಲ್ಲೂ ಮೈಸೂರಿನವರೇ ಆಗಿದ್ದ ಡಿ.ದೇವರಾಜ ಅರಸು ಅವರ ನಂತರ ಅತಿಹೆಚ್ಚು ಬಾರಿ ರಾಜ್ಯವನ್ನು ಮುಖ್ಯಮಂತ್ರಿಯಾಗಿ ಮುನ್ನಡೆಸಿ ದಾಖಲೆ ಬರೆದಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯರ ವಿದಾಯ ತವರು ಜಿಲ್ಲೆ ಮೈಸೂರಿನಲ್ಲಿ ಮೌನ ಆವರಿಸಿದ್ದರೆ, ಸ್ವಕ್ಷೇತ್ರ ವರುಣಗೆ ಕಣ್ಣೀರು ತರಿಸಿತಲ್ಲದೆ ಹುಟ್ಟೂರು ಸಿದ್ದರಾಮಯ್ಯನ ಹುಂಡಿಯಲ್ಲೂ ಭಾವನಾತ್ಮಕ ಮೌನ ಆವರಿಸಿತು.

ಕಳೆದೆರಡು ದಿನಗಳಿಂದ ಆದ ಬೆಳವಣಿಗೆಯನ್ನು ಟಿವಿಯಲ್ಲೇ ಕುಳಿತು ನೋಡುತ್ತಿದ್ದ ವರುಣ ಹಾಗೂ ಸಿದ್ದರಾಮನಹುಂಡಿಯ ಜನತೆ ಸಿದ್ದರಾಮಯ್ಯನವರ ಬಾಯಿಯಿಂದ ಅಂತಿಮವಾಗಿ ರಾಜೀನಾಮೆ ಮಾತು ಬರುವವರೆಗೂ ಮುಖ್ಯಮಂತ್ರಿಯಾಗಿಯೇ ಉಳಿಯುತ್ತಾರೆಂಬ ನಿರೀಕ್ಷೆಯಲ್ಲಿದ್ದರು. ಆದರೆ, ರಾಜ್ಯಪಾಲರ ಭೇಟಿ, ಸಚಿವರ ಬ್ರೇಕ್ ಫಾಸ್ಟ್ ನಂತಹ ಬೆಳವಣಿಗೆ ಇಡೀ ದಿನದ ರಾಜಕೀಯ ಬೆಳವಣಿಗೆಯನ್ನು ತಿರುಗಿ ನೋಡುವಂತೆ ಮಾಡಿತ್ತು. ಅಲ್ಲದೆ, ಬಹುತೇಕ ಆತ್ಮೀಯರು ನಿನ್ನೆಯೇ ಬೆಂಗಳೂರಿಗೆ ತೆರಳಿ ಬೆಳವಣಿಗೆ ನೋಡಲಾರಂಭಿಸಿದ್ದರು. ಇನ್ನೂ ಅನೇಕರು ಇಲ್ಲಿಂದಲೇ ಸಿಎಂ ಆಪ್ತರಿಗೆ ಕರೆ ಮಾಡಿ ರಾಜಕೀಯ ಸ್ಪಷ್ಟತೆ ಬಗ್ಗೆ ಆಲೋಚಿಸುವ ಬಗ್ಗೆ ತೀರ್ಮಾನಿಸಿದ್ದರು. ಇನ್ನೂ ಅನೇಕರು ಮೈಸೂರಿನಿಂದ ಮತ್ತೊಬ್ಬ ಮುಖ್ಯಮಂತ್ರಿ ಹೊರಬರಬೇಕಾದರೂ ಇನ್ನೂ ಒಂದೆರಡು ತಲೆಮಾರಿನವರೆಗೆ ಕಾಯಬೇಕಷ್ಟೇ ಎಂಬ ಬೇಸರದ ನುಡಿಗಳನ್ನು ಹಾಕುತ್ತಿದ್ದ ದೃಶ್ಯ ವರುಣ ಕ್ಷೇತ್ರದಲ್ಲಿ ಕಂಡು ಬಂದಿತು. ಇನ್ನೆರಡು ವರ್ಷ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯರನ್ನೇ ಮುಂದುವರೆಸಿ ಮುಂದಿನ ಚುನಾವಣೆಯ ಬಳಿಕ ಡಿ.ಕೆ.ಶಿವಕುಮಾರ್ ಅವರಿಗೆ ಅವಕಾಶ ನೀಡಬಹುದಿತ್ತು. ಈ ವಿಚಾರದಲ್ಲಿ ಕಾಂಗ್ರೆಸ್ ಹೈಕಮಾಂಡ್ ದುಡುಕಿದೆ ಎಂದು ಕೆಲವರು ಆಕ್ರೋಶ ಸಹ ಹೊರಹಾಕಿದರು.

### ಸಿದ್ದು ಮಾತಿಗೆ ಎಲ್ಲರೂ ಗಪ್ ಚುಪ್

**ಬೆಂಗಳೂರಿನಲ್ಲಿ ಸಿದ್ದರಾಮಯ್ಯ ತಾವೇ ಹೈಕಮಾಂಡ್ ಸೂಚನೆ ಮೇರೆಗೆ ಸ್ವಯಂ ಪ್ರೇರಿತರಾಗಿ ರಾಜೀನಾಮೆ ನೀಡಿರುವುದಾಗಿ ಹೇಳಿದರು. ಅಲ್ಲದೆ, ಕೆಲವು ಆತ್ಮೀಯರು ನಿನ್ನೆಯೇ ಮುಖ್ಯಮಂತ್ರಿ ಹುದ್ದೆ ಮುಂದುವರೆಸಲು ಒತ್ತಡ ಹೇರಲು ಪ್ರತಿಭಟನೆಗೂ ಮುಂದಾಗುವುದಾಗಿ ಸಿಎಂ ಸಿದ್ದು ಬಳಿ ಅವಲತ್ತುಕೊಂಡಿದ್ದರು. ಆದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅದಾವುದಕ್ಕೂ ಆಸ್ಪದ ನೀಡದೇ ನಾನು ಹೇಳುವವರೆಗೂ ಮೌನವಾಗಿ ಇರುವಂತೆ ನೀಡಿದ ಸೂಚನೆ ಹಿನ್ನೆಲೆಯಲ್ಲಿ ಬೇಸರದಲ್ಲೇ ಬೆಂಬಲಿಗರು ಮೌನಕ್ಕೆ ಜಾರಿದ್ದರು.**

# ರಾಮನಗರ ಜಿಲ್ಲಾದ್ಯಂತ ಸಂಭ್ರಮದ ಬಕ್ರೀದ್ ಆಚರಣೆ

ರಾಮನಗರ: ತ್ಯಾಗ, ಬಲಿದಾನದ ಹಾಗೂ ಸಹೋದರತ್ವದ ಸಂಕೇತವಾದ ಈದ್ ಉಲ್ ಅಜ್ಹಾ (ಬಕ್ರೀದ್ ) ಹಬ್ಬವನ್ನು ಮುಸ್ಲಿಂ ಬಾಂಧವರು ಗುರುವಾರ ಸಡಗರ ಸಂಭ್ರಮದಿಂದ ಜಿಲ್ಲಾದ್ಯಂತ ಆಚರಿಸಿದರು.

ಜಿಲ್ಲಾ ಕೇಂದ್ರ ರಾಮನಗರದ ಈದ್ಗಾ ಮೈದಾನದಲ್ಲಿ ಸಹಸ್ತಾರು ಸಂಖ್ಯೆಯಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದ ಮುಸ್ಲಿಂರು ಪರಸ್ಪರ ಶುಭಾಷಯ ವಿನಿಮಯ ಮಾಡಿಕೊಂಡರು.

ಇಲ್ಲಿನ ಜಮೀಯ ಮಸೀದಿಯ ಇಮಾಮ್ ಅಜ್ಗರ್ ಅಲಿರವರು ಈದ್ ನಮಾಜ್ ಅನ್ನು ಬೋಧಿಸಿದರು. ಈದ್ಗಾ ಮೈದಾನದಲ್ಲಿ ಸ್ಥಳಾಭಾವದಿಂದಾಗಿ ಎಂದಿನಂತೆ ಹಳೇ ಬೆಂಗಳೂರು–ಮೈಸೂರು ಹೆದ್ದಾರಿಯಲ್ಲಿ ಪ್ರಾರ್ಥನೆ ಸಲ್ಲಿಸಿದರು. ಸಾಮೂಹಿಕ ಪ್ರಾರ್ಥನೆ ನಂತರ ಮುಸ್ಲಿಂರು ಪರಸ್ಪರ ಶುಭಾಶಯ ಕೋರಿದರು. ಇದೇ ಸಂದರ್ಭದಲ್ಲಿ ಬೇರೆ ಧರ್ಮದವರು ಮುಸ್ಲಿಂ ಬಾಂಧವರಿಗೆ ಶುಭಾಶಯ ಕೋರಿ ತಮ್ಮ ಸಂತಸ ಅಭಿಮಾನಗಳನ್ನು ವ್ಯಕ್ತಪಡಿಸಿದರು.



ರಾಮನಗರ ಕ್ಷೇತ್ರ ಶಾಸಕ ಇಕ್ಬಾಲ್ ಹುಸೇನ್ ಸೇರಿದಂತೆ ಹಲವು ರಾಜಕೀಯ ಪಕ್ಷಗಳ ನಾಯಕರು ಹಾಗೂ ಜನಪ್ರತಿನಿಧಿಗಳು ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡು ಮುಸ್ಲಿಂ ಬಾಂಧವರಿಗೆ ಶುಭಾಶಯ ಕೋರಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಎಚ್.ಎ.ಇಸ್ಬಾಲ್ ಹುಸೇನ್ ರವರು, ತ್ಯಾಗ ಬಲಿದಾನದ ಸಂಕೇತವಾಗಿ ವಿಶ್ವದ ಮುಸಲ್ಮಾನರೆಲ್ಲರು ಬಕ್ರೀದ್ ಹಬ್ಬ ಆಚರಣೆ ಮಾಡುತ್ತಾರೆ. ನಮ್ಮ ಬದುಕಿನ ಎಲ್ಲ ಘಟ್ಟದಲ್ಲಿಯೂ ಮಾದರಿಯಾಗಿ ತ್ಯಾಗಕ್ಕೆ ಸಿದ್ದರಾಗಬೇಕೆಂಬ ಮತ್ತು ಸಮಾನತೆಯ ಸಂದೇಶವನ್ನು ಈ ಹಬ್ಬ ಸಾರುತ್ತದೆ ಎಂದು ಹೇಳಿದರು.

ಚನ್ನಪಟ್ಟಣದ ಕೋಟೆ ಈದ್ಗಾ ಮೈದಾನದಲ್ಲಿ. ಮಾಗಡಿ ಪಟ್ಟಣದ ಬಿ.ಕೆ.ರಸ್ತೆಯಲ್ಲಿರುವ ಈದ್ಗ ಮೈದಾನ,

ಕನಕಪುರದ ನಮಾಜಿ ಬೋರೆಯ ಈದ್ಗಾ ಪ್ರದೇಶದಲ್ಲಿ ಮುಸಲ್ಮಾನರು ಸಾಮೂಹಿಕ ಪ್ರಾರ್ಥನೆ ನೆರವೇರಿಸಿದರು.

## ವೇತನ ಹೆಚ್ಚಳ: ನೌಕರರ ಸ್ವಾಗತ

ಮೈಸೂರು: ರಾಜ್ಯ ಸರ್ಕಾರ ಶೇ.60ರಷ್ಟು ವೇತನ ಹೆಚ್ಚಳ ಮಾಡಿರುವುದನ್ನು ಕರ್ನಾಟಕ ರಾಜ್ಯ ಗ್ರಾಮ ಪಂಚಾಯತ್ ನೌಕರರ ಸಂಘ ಸ್ವಾಗತಿಸುತ್ತದೆ. ಆದರೆ ಗ್ರಾಪಂಗಳಲ್ಲಿ ತ್ಯಾಜ್ಯ ವಿಲೇವಾರಿ ಕೆಲಸ ಮಾಡುತ್ತಿರುವ ಚಾಲಕಿಯರು ಹಾಗೂ ಸಹಾಯಕಿಯರನ್ನೂ ಪಂಚಾಯ್ತಿ ನೌಕರರನ್ನಾಗಿ ಪರಿಗಣಿಸಬೇಕು ಎಂದು ಸಂಘದ ಜಿಲ್ಲಾಧ್ಯಕ್ಷ ಕೆ. ಬಸವರಾಜು ಆಗ್ರಹಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ನೌಕರರಿಗೆ ಸಂಬಂಧಿಸಿದಂತೆ ಒಟ್ಟು 17 ಬೇಡಿಕೆ ಸರ್ಕಾರದ ಮುಂದೆ ಇರಿಸಲಾಗಿತ್ತು. ಇವುಗಳಲ್ಲಿ ಒಂದನ್ನು ಮಾತ್ರ ಈಡೇರಿಸಲಾಗಿದೆ. ಹೀಗಾಗಿ ಉಳಿದವನ್ನೂ ಈಡೇರಿಸಬೇಕೆಂದು ಕೋರಿದರು. ರಾಜ್ಯ ಉಪಾಧ್ಯಕ್ಷ ಜಿ. ರಾಮಕೃಷ್ಣ ಮಾತನಾಡಿ, ಕಳೆದ ಮೂರು ವರ್ಷಗಳಿಂದ ಗ್ರಾಪಂ ನೌಕರರಿಗೆ ಸೇವಾ ಹಿರಿತನ ಭತ್ಯೆ ಹೆಚ್ಚಳ, ಪಿಂಚಣಿ ಅಥವಾ ಇಡಿಗಂಟು, ಎಲ್ಲ ಗ್ರಾಪಂಗೆ ಲೆಕ್ಕ ಸಹಾಯಕರ ನೇಮಕಾತಿ ಮಾಡಿಕೊಳ್ಳಬೇಕು ಎಂಬುವು ಇನ್ನಿತರ ಬೇಡಿಕೆಗಳಾಗಿವೆ ಎಂದರು. ಮತ್ತೋರ್ವ ರಾಜ್ಯ ಉಪಾಧ್ಯಕ್ಷರಾದ ಎಸ್. ರೇಖಾ ಮಾತನಾಡಿ, ಸಂಜೀವಿನಿ ಒಕ್ಕೂಟದ ಅಡಿಯಲ್ಲಿ ತ್ಯಾಜ್ಯ ವಿಲೇವಾರಿ ಮಾಡುವ ಚಾಲಕಿಯರು ಹಾಗೂ ಸಹಾಯಕಿಯರ ನೇಮಕ ಮಾಡಿಕೊಂಡು ಕೆಲಸ ಮಾಡಿಸಲಾಗುತ್ತಿದೆ. ಆದರೆ ನೀವೇ ಗ್ರಾಮಸ್ಥರಿಂದ ಶುಲ್ಕ ವಸೂಲಿ ಮಾಡಿ, ಬಂದ ಹಣದಿಂದ ವೇತನವಾಗಿ ಪಡೆದುಕೊಳ್ಳಿ ಎಂದು ಒತ್ತಾಯ ಮಾಡುತ್ತಿರುವುದು ಸರಿಯಲ್ಲ. ಹೀಗಾಗಿ ಪಂಚಾಯ್ತಿಗಳಿಂದಲೇ ಹಣ ನೀಡಬೇಕೆಂದು ಕೋರಿದರು. ಟಿ.ಎಸ್. ದಿನೇಶ್, ಮಲ್ಲೇಶ್, ಎಸ್. ನಾಗರಾಜು ಮೊದಲಾದವರು ಇದ್ದರು.

**ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ**

# ಕೇಂದ್ರ ಸರ್ಕಾರದ ವಿರುದ್ಧ ಎನ್.ಎಸ್.ಯು.ಐ ಪ್ರತಿಭಟನೆ

ರಾಮನಗರ: ನೀಟ್ ಪ್ರಶ್ನೆಪತ್ರಿಕೆ ಸೋರಿಕೆಯ ವೈಫಲ್ಯದ ಹೊಣೆ ಕೇಂದ್ರ ಸರ್ಕಾರ ಹೊರಬೇಕು ಎಂದು ಒತ್ತಾಯಿಸಿ ಹಾಗೂ ಪರೀಕ್ಷೆ ರದ್ದು ಮಾಡಿರುವ ಕೇಂದ್ರ ಸರ್ಕಾರದ ಕ್ರಮವನ್ನು ಖಂಡಿಸಿ ಎನ್.ಎಸ್.ಯು.ಐ ಪದಾಧಿಕಾರಿಗಳು, ಕಾರ್ಯಕರ್ತರು, ಪ್ರಮುಖರು ಬುಧವಾರ ಸಂಜೆ ಪಂಜಿನ ಮೆರವಣಿಗೆ ನಡೆಸಿ, ಪ್ರತಿಭಟಿಸಿದರು.

ನಗರದ ಕಾಂಗ್ರೆಸ್ ಕಚೇರಿಯಿಂದ ಕೆಂಗಲ್ ಹನುಮಂತಯ್ಯ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ, ಮೆರವಣಿಗೆಯುದ್ದಕ್ಕೂ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಹಾಕಿ, ಆಕ್ರೋಶ ವ್ಯಕ್ತಪಡಿಸಿದರು. ಎನ್ ಎಸ್ ಯು ಐ ರಾಜ್ಯ ಪ್ರಾಧಾನ ಕಾರ್ಯದರ್ಶಿ ವಿನೋದ್ ಕುಮಾರ್ ಮಾತನಾಡಿ, ಕೇಂದ್ರ ಸರ್ಕಾರ ನೀಟ್ ಪರೀಕ್ಷೆಯನ್ನು ಸಮರ್ಥವಾಗಿ ನಿರ್ವಹಿಸಲಾಗದೇ ಯುವ ಜನಾಂಗದ ಕನಸುಗಳನ್ನು ಭಗ್ನಗೊಳಿಸಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಮಾನವ ಸಂಪನ್ಮೂಲ ಸಚಿವ ಧರ್ಮೆಂದ್ರ ಪ್ರಧಾನ್ ನೈತಿಕ ಹೊಣೆ




ಹೊತ್ತು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಎನ್ ಎಸ್ ಯು ಐ ರಾಜ್ಯಾಧ್ಯಕ್ಷ ಕೀರ್ತಿ ಗಣೇಶ್ ಮಾತನಾಡಿ ಕೇಂದ್ರ ಸರಕಾರ ವಿದ್ಯಾರ್ಥಿಗಳ ಜೀವನದಲ್ಲಿ ಚೆಲ್ಲಾಟ ಆಡುತ್ತಿದ್ದು, ನೀಟ್ ವಿಚಾರವಾಗಿ 17 ಜನ ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ, ಒಂದು ಸಣ್ಣ ಪ್ರಶ್ನೆ ಪತ್ರಿಕೆ ತಡೆಯಲು ಸಾಧ್ಯವಾಗುತ್ತಿಲ್ಲ, ಮಾನವೀಯತೆ ದೃಷ್ಟಿಯಿಂದ 17 ಜನ ವಿದ್ಯಾರ್ಥಿಗಳ ಕುಟುಂಬಕ್ಕೆ ಸಾಂತ್ವನ ಹೇಳಲು ಮುಂದಾಗದ ಧರ್ಮೆಂದ್ರ ಪ್ರದಾನ್ ಈ ಕೂಡಲೇ ರಾಜೀನಾಮೆ ನೀಡಬೇಕು, ರಾಜೀನಾಮೆ ನೀಡುವವರೆಗೂ ನಮ್ಮ ಪ್ರತಿಭಟನೆ ಮುಂದುವರಿಯಲಿದೆ ಎಂದರು.

ಜಿಲ್ಲಾಧ್ಯಕ್ಷ ಅಮರ್ ಮಾತನಾಡಿ ವೈದ್ಯಕೀಯ ಪ್ರವೇಶಕ್ಕಾಗಿ 22ಲಕ್ಷ ವಿದ್ಯಾರ್ಥಿಗಳು ನೀಟ್ ಪರೀಕ್ಷೆ ಬರೆದಿದ್ದಾರೆ, ವಿದ್ಯಾರ್ಥಿಗಳಿಗೆ ನ್ಯಾಯ ಸಿಗಬೇಕು, ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಕುಟುಂಬಗಳಿಗೆ ಪರಿಹಾರ ಘೋಷಿಸಬೇಕು, ಪ್ರಧಾನಿ ಮೋದಿ ಅವರು ಧರ್ಮೆಂದ್ರ ಪ್ರದಾನ್ ಅವರನ್ನು ಈ ಕೂಡಲೇ ಸಚಿವ ಸ್ಥಾನದಿಂದ ವಜಾಗೊಳಿಸಬೇಕು ಎಂದು ಅಗ್ರಹಿಸಿದರು.

ಪ್ರತಿಭಟನೆಯಲ್ಲಿ ರಾಜ್ಯ ಉಪಾಧ್ಯಕ್ಷ ರಫೀಕ್, ರಾಜ್ಯ ಪ್ರಧಾನ ಕಾರ್ಯದರ್ಶಿ ಲೋಕೇಶ್, ಜಿಲ್ಲಾ ಉಪಾಧ್ಯಕ್ಷ ಎಂ.ಕೆ ಫೈರೋಜ್, ನಗರ ಅಧ್ಯಕ್ಷ, ಪುನೀತ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಖಿತ್, ಕಾರ್ಯದರ್ಶಿ ಸುಪ್ರೀತ್, ಕಾರ್ಯಕರ್ತರಾದ ಮೋಹನ್, ಅಪ್ಪಾಜಿ, ಶಿವಾಜಿ, ಸತೀಶ್, ಮನು, ಕಾರ್ತಿಕ್, ಪ್ರವೀಣ್ (ಪವಿ) ಇದ್ದರು.

## ಸಿ.ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಲು ಕ್ರೈಸ್ತ ಸಮುದಾಯ ಆಗ್ರಹ



ಚಾಮರಾಜನಗರ, ಚಾಮರಾಜನಗರ ವಿಧಾನಸಭಾ ಕ್ಷೇತ್ರದಿಂದ ಸತತ 4 ಬಾರಿ ಶಾಸಕರಾಗಿ ಆಯ್ಕೆಯಾಗಿ ದಾಖಲೆ ನಿರ್ಮಿಸಿರುವ ಸಿ. ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಕ್ರೈಸ್ತ ಸಮುದಾಯದ ಮುಖಂಡರು ಆಗ್ರಹಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಕ್ರೈಸ್ತ ಸಮುದಾಯ ಮುಖಂಡ, ಚೂಡಾ ಸದಸ್ಯ ಮಸಗಾಪುರ ರಾಜು ಮಾತನಾಡಿ, ಕ್ಷೇತ್ರದ ಅಭಿವೃದ್ಧಿ ದೃಷ್ಟಿಯಿಂದ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಬೇಕು. ಆ ನಿಟ್ಟಿನಲ್ಲಿ ಕೇಂದ್ರ ಹಾಗೂ ರಾಜ್ಯ ಕಾಂಗ್ರೆಸ್ ನಾಯಕರು ಸಿ.ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಲು ಮುಂದಾಗಬೇಕು ಎಂದು ಒತ್ತಾಯಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಟ್ಟ ಅಭಿಮಾನಿಯಾಗಿರುವ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಕಳೆದ ಸಚಿವ ಸಂಪುಟದಲ್ಲಿ ಸಚಿವರಾಗುವ ಅವಕಾಶವಿದ್ದು, ಸಚಿವ ಸ್ಥಾನದಿಂದ ವಂಚಿತರಾದರು. ಈ ಬಾರಿಯ ಪುನರ್ ಸಚಿವ ಸಂಪುಟದಲ್ಲ ಅವರಿಗೆ ಸಚಿವ ಸ್ಥಾನ ನೀಡಿ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರನ್ನಾಗಿ ಮಾಡಬೇಕು ಕಾಂಗ್ರೆಸ್ ವರಿಷ್ಠರಲ್ಲಿ ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಚಾಮರಾಜನಗರ ವಲಯ ಪ್ರಾಂತ್ಯ ಉಪಾಧ್ಯಕ್ಷ ಸುಜೇಂದ್ರ ಡೆಕ್ಲಾಸ್, ರೆ.ದೇಬೋರಾ ಶಾಂತಕುಮಾರಿ, ಪೃಥ್ವಿದಾಸ್, ಕಾಂತರಾಜು, ಹಾಲ್ವಿನ್, ಸುನಂದರಾಜು ಹಾಜರಿದ್ದರು.

## ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಿ



ಚಾಮರಾಜನಗರ, ಚಾಮರಾಜನಗರ ವಿಧಾನಸಭಾ ಕ್ಷೇತ್ರದಿಂದ ಸತತ 4 ಬಾರಿ ಶಾಸಕರಾಗಿ ಆಯ್ಕೆಯಾಗಿ ದಾಖಲೆ ನಿರ್ಮಿಸಿರುವ ಸಿ. ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಯಳಂದೂರು ಪಿಎಲ್ ಡಿ ಬ್ಯಾಂಕ್ ನಿರ್ದೇಶಕ ಹೊನ್ನೂರು ಸಿದ್ದಪ್ಪಸ್ವಾಮಿ ಒತ್ತಾಯಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಪುಟ್ಟರಂಗಶೆಟ್ಟಿ ಅವರು ರಾಜ್ಯದ ಉಪ್ಪಾರ ಜನಾಂಗದ ಏಕೈಕ ಶಾಸಕರು. ಕಾಂಗ್ರೆಸ್ ಗೆಲುವಿಗೆ ಶ್ರಮಿಸಿದ್ದಾರೆ. ಉಪ್ಪಾರ ಸಮಾಜ ಮತದಾರರು ಹೆಚ್ಚು ಇರುವ ಕ್ಷೇತ್ರದಲ್ಲಿ ಕಾಂಗ್ರೆಸ್ ಬೆಂಬಲಿಸುವಂತೆ ಜಾಗೃತಿ ಮೂಡಿಸಿದ್ದಾರೆ. 2008ರಿಂದ ನಿರಂತರ ಆಯ್ಕೆಯಾಗಿದ್ದಾರೆ. ಜಿಲ್ಲಾ ಕೇಂದ್ರದ ಅಭಿವೃದ್ಧಿಗಾಗಿ ಶ್ರಮಿಸಿದ್ದಾರೆ ಎಂದರು.

ಶಾಸಕರಾದ ಸಿ.ಪುಟ್ಟರಂಗಶೆಟ್ಟಿ ಅವರು ಕಾಂಗ್ರೆಸ್ ಪಕ್ಷದಿಂದಲ್ಲೇ ರಾಜಕೀಯ ಆರಂಭಿಸಿದರು. ಅಧಿಕಾರ ಇರಲಿ, ಇಲ್ಲದಿದ್ದ ಸಂದರ್ಭದಲ್ಲೂ ಕಾಂಗ್ರೆಸ್ ಬಿಟ್ಟು ಹೋಗಿಲ್ಲ. ಅವರಿಗೆ ಬೇರೆ ಪಕ್ಷಗಳಿಂದಲ್ಲೂ ಅಫರ್ ಬಂದರು ಕೂಡ ಪಕ್ಷಾಂತರ ಮಾಡದೆ ಕಾಂಗ್ರೆಸ್ ನಲ್ಲಿ ನಿಷ್ಠಾವಂತರಾಗಿ ಪಕ್ಷ ಬೆಳೆಸಿದ್ದಾರೆ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಟ್ಟ ಅಭಿಮಾನಿಯಾಗಿರುವ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಿ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರನ್ನಾಗಿ ಮಾಡಬೇಕು ಕಾಂಗ್ರೆಸ್ ವರಿಷ್ಠರಲ್ಲಿಮನವಿ ಮಾಡಿದರು. ಕಟ್ಟೆ ಮನೆ ಯಜಮಾನ ಆನಂದ್, ಸೋಮಣ್ಣೇಗೌಡ, ಗುರುಲಿಂಗಯ್ಯ, ಮಹಾದೇವಸ್ವಾಮಿ, ಧನರಾಜು, ಮರಿಲಿಂಗ ಹಾಜರಿದ್ದರು.

## ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಿ



ಚಾಮರಾಜನಗರ,ಚಾಮರಾಜನಗರ ಕ್ಷೇತ್ರದ ಶಾಸಕ ಸಿ. ಪುಟ್ಟರಂಗಶೆಟ್ಟರಿಗೆ ಸಚಿವ ಸ್ಥಾನ ನೀಡಬೇಕೆಂದು ನಗರದಲ್ಲಿ ಟಿಪ್ಪು ಸರ್ಕಲ್ ಬಳಿ ಪುಟ್ಟರಂಗಶೆಟ್ಟಿ ಅಭಿಮಾನಿಗಳ ಬಳಗದಿಂದ ಪೋಸ್ಟರ್ ಪ್ರದರ್ಶನ ಮಾಡಲಾಯಿತು.

ನಗರದದ ಟಿಪ್ಪು ಸರ್ಕಲ್‌ನಲ್ಲಿ ಕಾಂಗ್ರೆಸ್ ಮುಖಂಡ ನಯಾಜ್ ಪಾಷಾ ನೇತೃತ್ವದಲ್ಲಿ ಜಮಾಯಿಸಿದ ಮುಖಂಡರು ಶಾಸಕ ಸಿ.ಪುಟ್ಟರಂಗಶೆಟ್ಟಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಭಾವಚಿತ್ರ ಹಿಡಿದು ಜಯಕಾರ ಕೂಗಿದರು. ನಾಡಿನ ಜನತೆಗೆ ಬಕ್ರಿದ್ ಹಬ್ಬದ ಶುಭಾಶಯವನ್ನು ಕೋರಿದರು.

ಬಳಿಕ ಮಾತನಾಡಿದ ನಯಾಜ್ ಪಾಷಾ, ಶಾಸಕ ಸಿ. ಪುಟ್ಟರಂಗಶೆಟ್ಟರು ನಾಲ್ಕು ಬಾರಿ ಕ್ಷೇತ್ರದ ಶಾಸಕರಾಗಿ ಕ್ಷೇತ್ರದ ಅಭಿವೃದ್ಧಿ ಮಾಡಿದ್ದಾರೆ. ಹಿರಿಯರಾದ ಅವರಿಗೆ ಕಳೆದ ಅವಧಿಯಲ್ಲಿ ಸರ್ಕಾರದಲ್ಲಿ ಸಚಿವ ಸ್ಥಾನ ಕೈತಪ್ಪಿತ್ತು. ಈ ಬಾರಿ ಅವರಿಗೆ ಕಾಂಗ್ರೆಸ್ ವರಿಷ್ಟರು ಅವರನ್ನು ಸಚಿವರನ್ನಾಗಿ ಮಾಡುವ ಮೂಲಕ ಜಿಲ್ಲೆಯ ಅಭಿವೃದ್ದಿ ಮುಂದಾಗಬೇಕು ಒತ್ತಾಯಿಸಿದರು.

ಈ ಸಂದರ್ಭ ಅಭಿಮಾನಿಗಳ ಬಳಗದ ನಯಜ್ ಪಾಷಾ, ಪೈಸಲ್, ಆರೀಪ್, ಪರಾಜ್ ಅಹಮದ್ ಸಯ್ಯದ್ , ಬಾಷಾ ಮೊದಲಾದವರು ಹಾಜರಿದ್ದರು

# ಭೂಸ್ವಾಧೀನ ಹೋರಾಟಕ್ಕೆ ಬೆಂಬಲ

## ಸ್ವಾಧೀನಕ್ಕೆ ಗುರುತಿಸಿರುವ ಭೂಮಿಗೆ ಭೇಟಿ. ನಿಮ್ಮೊಂದಿಗೆ ನಾವಿದ್ದೇವೆ; ನಿಖಿಲ್



ರಾಮನಗರ: ಬಿಡದಿ ಹೋಬಳಿಯಲ್ಲಿ ಎಐ-ಸಿಟಿ ನಿರ್ಮಾಣಕ್ಕೆ ಭೂಸ್ವಾಧೀನಕ್ಕೆ ರಾಜ್ಯ ಸರ್ಕಾರದ ಉದ್ದೇಶಕ್ಕೆ ಆ ಭಾಗದ ಅನೇಕ ಗ್ರಾಮಸ್ಥರು ವಿರೋಧ ವ್ಯಕ್ತಪಡಿಸಿದ್ದಾರೆ. ಈ ವಿಚಾರದಲ್ಲಿ ಬೈರಮಂಗಲದಲ್ಲಿ ಕೆಲವು ತಿಂಗಳುಗಳಿಂದ ನಿರಂತರ ಹೋರಾಟ ನಡೆಯುತ್ತಿದೆ. ಭೂಸ್ವಾಧೀನದ ವಿಚಾರದಲ್ಲಿ ಕಾಂಗ್ರೆಸ್ ಮತ್ತು ಜೆಡಿಎಸ್ ನಾಯಕರು ಪರಸ್ಪರ ಮಾತಿನ ಚಕಮಕಿ ನಡೆಸುತ್ತಿದ್ದಾರೆ. ಇದೀಗ ಹೋರಾಟದ ಮುಂಚೂಣಿಯಲ್ಲಿರುವುದಾಗಿ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದ್ದಾರೆ.

ಸರ್ಕಾರ ತಂದೊಡ್ಡಿರುವ ಸಮಸ್ಯೆಗೆ ತಾರ್ಕಿಕ ಅಂತ್ಯ ಕಾಣಿಸುವುದು ತಮ್ಮ ಗುರಿ, ಮಣ್ಣಿನಮಗ ಹೆಚ್.ಡಿ.ಕುಮಾರಸ್ವಾಮಿ ಅವರ ಮಗನಾಗಿ, ನಾನು ನಿಮಗೆ ಮಾತು ನೀಡುತ್ತಿದ್ದೇನೆ. ಇಂದಿನಿಂದ ಇದು ನಿಮ್ಮ ಹೋರಾಟ ಮಾತ್ರವಲ್ಲ ನನ್ನ ಹೋರಾಟ ಎಂದು ಘೋಷಿಸಿದ್ದಾರೆ. ಬೈರಮಂಗಲ ಗ್ರಾಮದಲ್ಲಿ ಜಿಬಿಎ ಭೂಸ್ವಾಧೀನ ವಿರೋಧಿಸಿ ರೈತರು ನಡೆಸುತ್ತಿರುವ ಧರಣಿಗೆ ಬೆಂಬಲ ಘೋಷಿಸಿದಲ್ಲದೇ ಜಿಬಿಎ ಭೂಸ್ವಾಧೀನ ಪಡಿಸಿಕೊಳ್ಳಲು ಹೊರಟಿರುವ ಭೂಮಿಗಳ ರಿಯಾಲಿಟಿ ಚೆಕ್ ನಡೆಸಲು ಭೇಟಿ ನೀಡಿದ್ದ ಅವರು ಬೈರಮಂಗಲ ವೃತ್ತದ ಬಳಿ ರೈತರನ್ನುದ್ದೇಶಿಸಿ ಮಾತನಾಡಿದರು. ರೈತರನ್ನು ವಿಶ್ವಾಸಕ್ಕೆ ಪಡೆಯದೇ, ರೈತರನ್ನು ಒಕ್ಕಲೆಬ್ಬಿಸಲು ಹೊಂಚು ಹಾಕುತ್ತಿರುವ ಸರ್ಕಾರದ ವಿರುದ್ಧ ನಿಮ್ಮಗಳ ಜತೆಗೆ ನಾನೂ ಕೂಡ ಹೋರಾಟ ಮಾಡುತ್ತೇನೆ ಎಂದು ಧೈರ್ಯ ತುಂಬಿದರು.

### ನಮ್ಮ ಕುಟುಂಬ ನಿಮ್ಮೊಟ್ಟಿಗಿದೆ

ಮೇ ತಿಂಗಳ ಅಂತ್ಯಕ್ಕೆ ಭೂಸ್ವಾಧೀನದ ಅಂತಿಮ ಅಧಿಸೂಚನೆಗೆ ಸರ್ಕಾರ ನಿರ್ಧರಿಸಿದೆ. ರೈತರು ಯಾವುದೇ ಕಾರಣಕ್ಕೂ ಧೃತಿಗೆಡಬೇಡಿ, ಎಂತಹ ಸನ್ನಿವೇಶ ಬಂದರೂ ನಾನು, ನಮ್ಮ ಕುಟುಂಬ ನಿಮ್ಮ ಜತೆಗೆ ಸದಾ ಕಾಲ ಇರುತ್ತೇವೆ. ರಾಜ್ಯದ ಒಬ್ಬ ಪ್ರಜೆಯಾಗಿ, ಒಬ್ಬ ಕನ್ನಡಿಗನಾಗಿ, ಈ ಜಿಲ್ಲೆಯ ಮತದಾರನಾಗಿ ನಾನು ನಿಮ್ಮೊಡನಿರುತ್ತೇನೆ ಎಂದು ಭರವಸೆ ನೀಡಿದರು. ಭೂ ಸ್ವಾಧೀನ ವಿರೋಧಿ 2 ಗ್ರಾಮ ಪಂಚಾಯಿತಿ ವ್ಯಾಪ್ತಿಯ 26 ಗ್ರಾಮಗಳ ಜನರು ಕಳೆದ 436 ದಿನಗಳಿಂದ ಹೋರಾಟ ಮಾಡುತ್ತಿದ್ದೀರಿ. ಇದು ಕೇವಲ ಭೂಮಿ ಉಳಿಸಿಕೊಳ್ಳುವ ಹೋರಾಟ ಮಾತ್ರವಲ್ಲ. ಇದು ರೈತರ ಸ್ವಾಭಿಮಾನದ ಹೋರಾಟ. ನನಗಾಗಲೀ, ನನ್ನ ಕುಟುಂಬಕ್ಕಾಗಲೀ, ನಮ್ಮ ಪಕ್ಷಕ್ಕಾಗಲೀ ರಾಜಕೀಯ ಲಾಭ ಪಡೆಯುವ ದುರುದ್ದೇಶದಿಂದ ನಾನು ಇಲ್ಲಿಗೆ ಬಂದಿಲ್ಲ ಎಂದರು. ಸರ್ಕಾರದ ವಿರುದ್ಧ ರೈತರು ಮಾಡುತ್ತಿರುವ ಹೋರಾಟಕ್ಕೆ ಬೆಂಬಲ ನೀಡುವ ಜತೆಗೆ ದಪ್ಪ ಚರ್ಮದ ಸರ್ಕಾರವನ್ನು ಎಚ್ಚರಿಸಲು ನಾನಿಲ್ಲಿಗೆ ಬಂದಿರುವುದಾಗಿ ತಿಳಿಸಿದರು.

### ಕುಮಾರಸ್ವಾಮಿ ಅವರ ತಲೆಗೆ ಕಟ್ಟಲು ಕಾಂಗ್ರೆಸ್ ಹುನ್ನಾರ

ಈ ಯೋಜನೆ ಕುಮಾರಸ್ವಾಮಿ ಅವರ ಕನಸಿನ ಕೂಸು ಎಂಬುದಾಗಿ ಬಿಂಬಿಸಿ, ಅದನ್ನು ಅವರ ತಲೆಗೆ ಕಟ್ಟಲು ಈ ಯೋಜನೆಯನ್ನು ಜಾರಿಗೆ ಮುಂದಾಗಿರುವ ಜನಪ್ರತಿನಿಧಿಗಳು ಹೇಳುತ್ತಿದ್ದಾರೆ. 2006ರಲ್ಲಿ ಯೋಜನೆ ಮುಂದಾಗಿದ್ದು ನಿಜ. ಆದರೆ, ರೈತರ ಭಾವನೆಗಳಿಗೆ ಬೆಲೆ ನೀಡಿ ಯೋಜನೆಯನ್ನು ಕೈಬಿಡಲಾಗಿತ್ತು.

ಒಂದು ವೇಳೆ ಈ ಯೋಜನೆ ಮುಂದುವರಿಸಬೇಕು ಎಂಬ ದುರುದ್ದೇಶ ಕುಮಾರಸ್ವಾಮಿ ಅವರಿಗಿದ್ದಿದ್ದರೆ 2018ರಲ್ಲಿ ಎರಡನೇ ಬಾರಿಗೆ ಸಿಎಂ ಆಗಿದ್ದಾಗ ಆ ಯೋಜನೆಯನ್ನು ಮುಂದುವರಿಸುತ್ತಿದ್ದರು. ನಮ್ಮ ಕುಟುಂಬ ಆಗಲೀ, ನಮ್ಮ ಪಕ್ಷವಾಗಲೀ ಎಂದೆಂದಿಗೂ ರೈತಪರವಾಗಿಯೇ ರಾಜಕೀಯ ಮಾಡಿದ್ದೇವೆ. ರೈತರಿಗಾಗಿಯೇ ಇರುವ ಏಕೈಕ ಪಕ್ಷ ನಮ್ಮ ಜೆಡಿಎಸ್. ಹಾಗಾಗಿ ನಮ್ಮ, ನಮ್ಮ ಪಕ್ಷದ ವಿರುದ್ಧದ ಸುಳ್ಳು ವದಂತಿಗಳಿಗೆ ಕಿವಿಗೊಡಬೇಡಿ ಎಂದು ಮನವಿ ಮಾಡಿದರು. ಮಾಜಿ ಶಾಸಕ ಎ. ಮಂಜುನಾಥ್, ಜೆಡಿಎಸ್ ಜಿಲ್ಲಾಧ್ಯಕ್ಷ ಜಯಮುತ್ತು, ರಾಮನಗರ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಸಬ್ಬಕೆರೆ ಶಿವಲಿಂಗಪ್ಪ, ಚನ್ನಪಟ್ಟಣ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಗೋವಿಂದಳ್ಳಿ ನಾಗರಾಜು, ಬಿಡದಿ ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ದೇವರಾಜು, ಸದಸ್ಯರಾದ ರಾಕೇಶ್, ಹರಿಪ್ರಸಾದ್, ಮುಖಂಡರಾದ ಡಾ.ಭರತ್ ಕೆಂಪಣ್ಣ, ನರಸಿಂಹಯ್ಯ, ಲಕ್ಷ್ಮೀಕಾಂತ್, ಬಿ.ಉಮೇಶ್, ಬೋರೇಗೌಡ, ಗೌಡಯ್ಯನದೊಡ್ಡಿ ಕೃಷ್ಣೇಗೌಡ, ಬೈರಮಂಗಳ ಕಂಚುಗಾರನಹಳ್ಳಿ ಭೂ ಹಿತರಕ್ಷಣಾ ಸಂಘದ ಅಧ್ಯಕ್ಷ ರಾಮಣ್ಣ, ಖಜಾಂಚಿ ನಾಗರಾಜು, ರೈತ ಮುಖಂಡರಾದ ಶ್ರೀನಿವಾಸ ರೆಡ್ಡಿ, ರಾಧಾಕೃಷ್ಣ, ಅಶ್ವತ್ಥ್, ಕೃಷ್ಣ, ಜಯಮ್ಮ, ಸುಮಿತ್ರ, ಭಾಗ್ಯ ನಾಗರಾಜ್, ಮಂಜುನಾಥ್, ಹೇಮಂತ್, ಜ್ಯೋತಿ, ಚೈತ್ರಾ, ರಾಮಚಂದ್ರ, ಗಿರೀಶ ಮತ್ತಿತರರು ಇದ್ದರು.

### ಯಾರೇ ಸಿಎಂ ಆದರೂ ದುರಾಡಳಿತ ತಪ್ಪಿದಲ್ಲ

ರಾಜ್ಯದಲ್ಲಿ ಕಾಂಗ್ರೆಸ್‌ನವರಿಗೆ 136 ಶಾಸಕ ಬೆಂಬಲ ಇದ್ದು, ಮೆಜಾರಿಟಿ ಇದೆ. ಯಾರು ಸಿಎಂ, ಯಾರು ಡಿಸಿಎಂ, ಯಾರು ಮಂತ್ರಿಗಳಾಗ್ತಾರೆ ಅನ್ನುವುದು ಮುಖ್ಯ ಅಲ್ಲ. ಯಾರೇ ಸಿಎಂ ಆದರೂ, ದುರಾಡಳಿತ, ಭ್ರಷ್ಟಾಚಾರ, ಲೂಟಿ, ರೈತರ ಬವಣೆ ತಪ್ಪುವುದಿಲ್ಲ ಎಂದು ನಿಖಿಲ್ ಕುಮಾರಸ್ವಾಮಿ ಕಿಡಿ ಕಾರಿದರು.

### ರೈತರೇ ಇಲ್ಲಾ ಅಂತಿದ್ದಾರೆ


ಯಾವುದೇ ಜನಪ್ರತಿನಿಧಿಗಳಾಗಲೀ, ಸರ್ಕಾರಿ ಅಧಿಕಾರಿಗಳಾಗಲೀ ನಮ್ಮ ಗ್ರಾಮಕ್ಕೆ ಆಗಮಿಸಿ ನೀವು ಯೋಜನೆಗೆ ಜಮೀನು ನೀಡಲು ಸಿದ್ಧರಿದ್ದೀರಾ ಎಂಬುದಾಗಿ ಕೇಳಿಲ್ಲ. ಪ್ರತಿಭಟನೆ ಮಾಡುತ್ತಿರುವವರು ರೈತರೇ ಅಲ್ಲ, ಇಲ್ಲಿ ಯಾರೂ ವ್ಯವಸಾಯವನ್ನೇ ಮಾಡುತ್ತಿಲ್ಲ ಎಂಬುದಾಗಿ ಸುಳ್ಳನ್ನು ಹರಡುವ ಕೆಲಸ ಮಾಡುತ್ತಿದ್ದಾರೆ. ಆದರೆ, ನಮ್ಮ ಮಾಧ್ಯಮ ಮಿತ್ರರು ವಿಡಿಯೋ ಮೂಲಕ ಅದೆಲ್ಲವೂ ಸುಳ್ಳು ಎಂಬುದನ್ನು ಸಾಬೀತು ಮಾಡಿದ್ದಾರೆ. ಯಾವುದೇ ಕಾರಣಕ್ಕೂ ರೈತರನ್ನು ಒಕ್ಕಲೆಬ್ಬಿಸಲು ಬಿಡಲ್ಲ ಎಂದರು.

## ಸೀಳು ನಾಯಿಗಳ ಗುಂಪಿನ ದರ್ಶನ



ಗುಂಡ್ಲುಪೇಟೆ :-ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಕಣಿಯನಪುರ ಕಾಲೋನಿಯ ಮಹದೇಶ್ವರ ದೇವಸ್ಥಾನ ಬಳಿಯ ಕರೆಯಲ್ಲಿ ಸೀಳು ನಾಯಿಗಳ ಗುಂಪು ಬಿರು ಬಿಸಿಲಲ್ಲಿ ಮೃತಣಿಸಿಕೊಂಡು ದೃಶ್ಯವನ್ನು ಸ್ಥಳೀಯರು ಮೊಬೈಲ್ ನಲ್ಲಿ ಸೆರೆ ಹಿಡಿದಿದ್ದಾರೆ ಇದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಅಗಿದೆ ಬಂಡೀಪುರ ಹುಲಿ ಸಂರಕ್ಷಿತಾ ಪ್ರದೇಶಕ್ಕೆ ಹೊಂದಿಕೊಂಡತಿರುವ ಕಣಿಯನಪುರ ಕಾಲೋನಿ ಕೆರೆಯಲ್ಲಿ ಆಗ್ಗಾಗೆ ಸೀಳು ನಾಯಿಗಳ ಗುಂಪು ಗ್ರಾಮಸ್ಥರಿಗೆ ಕಾಣಿಸಿಕೊಳ್ಳುತ್ತಿವೆ ಕೆಲ ದಿನಗಳ ಹಿಂದಷ್ಟೇ ದಾಹ ನೀಗಿಸಿಕೊಳ್ಳತ್ತಿದ್ದ ಜಿಂಕೆಯನ್ನು ಬೇಟೆಯಾಡಿ ಭಕ್ಷಿಸಿದ್ದ ಸೀಳು ನಾಯಿಗಳು ಪ್ರತಿನಿತ್ಯ ಮಧ್ಯಾಹ್ನದ ವೇಳೆಗೆ ಕೆರೆಯ ಬಳಿ ಜಮಾಯಿಸಿ ಹೊಂಚುಹಾಕಿ ಆಡಗಿ ಕುಳಿತಿರುತ್ತವೆ ಎಂಬುವುದು ಸ್ಥಳೀಯರ ಮಾತಾಗಿದೆ.

ಇತ್ತೀಚಿಗೆ ಬಂಡೀಪುರದಲ್ಲಿ ಸುರಿದ ಮಳೆಯಿಂದ ಕಾನನವು ಹಚ್ಚ ಹಸಿರಿನಿಂದ ಕಂಗೊಳಿಸುತ್ತಿದ್ದು ನೋಡುಗರ ಕಣ್ಮನ ಸೆಳೆಯುತ್ತಿದ್ದರೆ ಸಫಾರಿಗೆ ತೆರಳಿದ ಪ್ರವಾಸಿಗರಿಗೆ ಹುಲಿ. ಚಿರತೆ. ಕರಡಿ. ಆನೆಗಳು ದರ್ಶನ ನೀಡುತ್ತಿವೆ



## ಪರಮಾಪುರ ರಸ್ತೆಯಲ್ಲಿ ಚಿರತೆ ಓಡಾಟ


ಗುಂಡ್ಲುಪೇಟೆ,:- ತಾಲೂಕಿನ ಪರಮಾಪುರ ರಸ್ತೆಯಲ್ಲಿ ರಾತ್ರಿ ವೇಳೆ ಚಿರತೆಯೊಂದು ಓಡಾಟ ನಡೆಸಿದ್ದು ವಾಹನ ಸವಾರರ ಮೊಬೈಲ್ ದೃಶ್ಯ ಸರಿಯಾಗಿದೆ ಇದು ರೈತರ ಅಂತಕಕ್ಕೆ ಕಾರಣವಾಗಿದೆ ಪರಮಾಪುರ -ಕಬ್ಬಹಳ್ಳಿ ಮಾರ್ಗ ಮದ್ಯದ ರಸ್ತೆ ಬದಿಯ ಪೊದೆಯಲ್ಲಿ ಅಡಗಿದ್ದ ಚಿರತೆ ಕಾರಿನ ಶಬ್ದ ಕೇಳಿ ಹೂರ ಬಂದು ರಸ್ತೆ ಮೂಲಕ ಎದುರಿನ ಜಮೀನಿನೂಳಗೆ ನುಗ್ಗಿದೆ ಇದನ್ನು ಕಾರಿನಲ್ಲಿ ತೆರಳುತ್ತಿದ್ದ ಸ್ಥಳೀಯರು ಗಮನಿಸಿ ವಿಡಿಯೋ ಚಿತ್ರೀಕರಿಸಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದಾರೆ ಇದ್ದರಿಂದ ಸುತ್ತು ಮುತ್ತ ಗ್ರಾಮಸ್ಥರು ಹಾಗೂ ರೈತರಲ್ಲಿ ಭಯದ ವಾತಾವರಣ ನಿರ್ಮಾಣವಾಗಿದ್ದು ರಾತ್ರಿ ವೇಳೆ ಜಮೀನುಗಳಿಗೆ ತೆರಳದ ಪರಿಸ್ಥಿತಿ ನಿರ್ಮಾಣವಾಗಿದೆ

ಗುಂಡ್ಲುಪೇಟೆ ಬಫರ್ ಜೋನ್ ವಲಯದ ಅರಣ್ಯ ಅಧಿಕಾರಗಳು ಇದನ್ನು ಗಂಭೀರವಾಗಿ ಪರಿಗಣಿಸಿ ಕೂಡಲೆ ಚಿರತೆ ಸೆರೆ ಹಿಡಿಯಬೇಕೆಂದು ಕಬ್ಬಹಳ್ಳಿ ಬಸಪ್ಪ. ಮಧು ಒತ್ತಾಯಿಸಿದ್ದಾರೆ.

## ಅರಣ್ಯ ಅಧಿಕಾರಿಗೆ ಸನ್ಮಾನ

ಚಾಮರಾಜನಗರ, ಚಾಮರಾಜನಗರ ವಲಯ ಅರಣ್ಯ ಅಧಿಕಾರಿಯಾಗಿ ಅಧಿಕಾರ ವಹಿಸಿಕೊಂಡ ಮಂಜುನಾಥ್ ಓಣಿಕೇರಿ ಅವರನ್ನು ಜಿಲ್ಲಾ ರೈತ ಹಿತರಕ್ಷಣಾ ಹೋರಾಟ ಸಮಿತಿ ವತಿಯಿಂದ ಸನ್ಮಾನಿಸಲಾಯಿತು.

ನಗರದ ಗಾಳೀಪುರ ಬಡಾವಣೆಯಲ್ಲಿರುವ ಚಾಮರಾಜನಗರ ಪ್ರಾದೇಶಿಕ ವಲಯದ ವಲಯ ಅರಣ್ಯ ಅಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ರೈತ ಹಿತರಕ್ಷಣಾ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ಆಲೂರುಮಲ್ಲು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವನಪುರ ರಾಜಶೇಖರ್ ಅವರ ನೇತೃತ್ವದಲ್ಲಿ ಭೇಟಿ ಮಾಡಿ ಅವರಿಗೆ ಶಾಲು ಹೊದಿಸಿ, ಹಾರಹಾಕಿ, ಫಲತಾಂಬೂಲ ನೀಡಿ ಸನ್ಮಾನಿಸಲಾಯಿತು. ಜಿಲ್ಲಾ ರೈತ ಹಿತರಕ್ಷಣಾ ಹೋರಾಟ ಸಮಿತಿಯ ಯಳಂದೂರು ತಾಲೂಕು ಅಧ್ಯಕ್ಷ ಕೆಸ್ತೂರುಮರಪ್ಪ, ಕುರುಬ ಸಮುದಾಯ ಮುಖಂಡ ಮಹೇಶ್, ಗುರುಸಿದ್ದ ಶೆಟ್ಟಿ, ರಾಜಣ್ಣ, ಸುಬ್ಬಣ್ಣ ಹಾಜರಿದ್ದರು.



## ಚಾಮರಾಜನಗರ: ಸಂಭ್ರಮದ ಬಕ್ರೀದ್ ಆಚರಣೆ



ಚಾಮರಾಜನಗರ, ಬಕ್ರೀದ್ ಹಬ್ಬವನ್ನು ಮುಸ್ಲಿಂ ಬಾಂಧವರು ನಗರದಲ್ಲಿ ಅತ್ಯಂತ ಸಡಗರ, ಸಂಭ್ರಮದಿಂದ ಆಚರಿಸಿದರು.

ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಸಮೀಪದಲ್ಲಿರುವ ಈದ್ಗಾ ಮೈದಾನದಲ್ಲಿ ಬೆಳಗ್ಗೆ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದ ಮುಸ್ಲಿಮರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು. ಹೊಸ ಬಟ್ಟೆ ಧರಿಸಿ ಕಂಗೊಳಿಸಿದ ಪುಟಾಣಿಗಳು ಕೂಡ ಪರಸ್ಪರ ಅಪ್ಪಿ ಈದ್ ಶುಭಾಶಯ ವಿನಿಮಯ ಮಾಡಿಕೊಳ್ಳುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು. ಧರ್ಮಗುರು ಮೌಲಾನ ಅಬ್ದಲ್ ಹಸೀಬ್ ಬಕ್ರೀದ್ ಹಬ್ಬದ ಮಹತ್ವ ಕುರಿತು ಸಂದೇಶ ನೀಡಿದರು.

ಬಳಿಕ ದೇವರ ಹೆಸರಿನಲ್ಲಿ ಮನೆ-ಮನೆಗಳಲ್ಲಿ ಪ್ರಾಣಿ ಬಲಿ ನೆರವೇರಿಸಲಾಯಿತು. ಮಾಂಸದ ಒಂದು ಭಾಗವನ್ನು ಮನೆಗೆ, ಇನ್ನೊಂದು ಭಾಗವನ್ನು ಸಂಬಂಧಿಕರಿಗೆ ಹಾಗೂ ಮತ್ತೊಂದು ಭಾಗವನ್ನು ಬಡ-ಬಗ್ಗರಿಗೆ ದಾನ ಮಾಡುವುದು ಬಕ್ರೀದ್ ಹಬ್ಬದ ಪದ್ಧತಿಗಳಲ್ಲೊಂದು. ಅದರಂತೆ, ಕೆಲವರು ಮಾಂಸವನ್ನು ದಾನ ಮಾಡಿದರೆ, ಇನ್ನೂ ಕೆಲವರು ಅಡುಗೆ ಮಾಡಿ ಬಡವರಿಗೆ ದಾನ ಮಾಡುವ ಮೂಲಕ ತಮ್ಮ ಸೇವೆಯನ್ನು ಸಮರ್ಪಿಸಿದರು.

## ಕೆ.ಹೆಚ್.ಮುನಿಯಪ್ಪಗೆ ಡಿಸಿಎಂ ಸ್ಥಾನ ನೀಡಿ



ಚಾಮರಾಜನಗರ, ರಾಜ್ಯದ ದಲಿತ ಸಮುದಾಯದ ಹಿರಿಯರು, ಪ್ರಭಾವಿ ನಾಯಕರು, ಸಚಿವ ಡಾ. ಕೆ. ಹೆಚ್. ಮುನಿಯಪ್ಪಅವರನ್ನುಉಪಮುಖ್ಯಮಂತ್ರಿಯಾಗಿ ಮಾಡಬೇಕು ಎಂದು ಕರ್ನಾಟಕ ಮಾದರ ಮಹಾಸಭಾದ ಜಿಲ್ಲಾಧ್ಯಕ್ಷ ಎಂ.ಶಿವಮೂರ್ತಿ ಒತ್ತಾಯಿಸಿದರು.

ನಗರದ ಪ್ರವಾಸಿಮಂದಿರದಲ್ಲಿ ನಡೆದ ಜಿಲ್ಲಾ ಸಮಿತಿಯ ಪದಾಧಿಕಾರಿಗಳ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕೆ.ಹೆಚ್.ಮುನಿಯಪ್ಪ ಅವರು ಕೋಲಾರ ಲೋಕಸಭಾ ಕ್ಷೇತ್ರದಿಂದ ಸತತ 7 ಬಾರಿ ಸಂಸದರಾಗಿ ಆಯ್ಕೆಯಾಗುವ ಮೂಲಕ ಅಪರೂಪದ ಸಾಧನೆ ಮಾಡಿದ್ದಾರೆ.ಕೇಂದ್ರ ಸಚಿವರಾಗಿ ಹಾಗೂ ಪ್ರಸ್ತುತ ರಾಜ್ಯ ಸರ್ಕಾರದಲ್ಲಿ ಸಚಿವರಾಗಿ ದೀರ್ಘಕಾಲದ ಆಡಳಿತ ಅನುಭವ ಹೊಂದಿರುವ ಅವರು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಹಾಗೂ ಜನಪರ ನಾಯಕರಾಗಿದ್ದಾರೆ. ಸುಮಾರು ಐದು ದಶಕಗಳಿಂದ ಪಕ್ಷ ಸಂಘಟನೆ, ದಲಿತ ಸಮುದಾಯದ ಹಕ್ಕುಗಳ ರಕ್ಷಣೆ ಹಾಗೂ ಸಾಮಾಜಿಕ ನ್ಯಾಯದ ಪರ ಹೋರಾಟ ನಡೆಸಿರುವ ಡಾ.ಕೆ.ಹೆಚ್.ಮುನಿಯಪ್ಪ ರಾಜ್ಯದ ಮಾದಿಗ ಸಮುದಾಯದ ಹಿರಿಯ ರಾಜಕೀಯ ಧ್ವನಿಯಾಗಿದ್ದಾರೆ. ಎಂದರು.

ರಾಜ್ಯದ ಅತಿ ದೊಡ್ಡ ದಲಿತ ಸಮುದಾಯವಾದ ಮಾದಿಗ ಸಮುದಾಯಕ್ಕೆ ಇದುವರೆಗೆ ಮುಖ್ಯಮಂತ್ರಿ ಅಥವಾ ಉಪ ಮುಖ್ಯಮಂತ್ರಿ ಸ್ಥಾನ ದೊರಕಿಲ್ಲ. ಆದ್ದರಿಂದ ಸಾಮಾಜಿಕ ನ್ಯಾಯದ ಆಶಯವನ್ನು ಬಲಪಡಿಸುವ ನಿಟ್ಟಿನಲ್ಲಿ ಡಾ. ಕೆ.ಹೆಚ್. ಮುನಿಯಪ್ಪನವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡುವುದು ಈ ಕಾಲದ ಅಗತ್ಯವಾಗಿದೆ. ಕರ್ನಾಟಕ ಮಾದರ ಮಹಾಸಭಾ ಜಿಲ್ಲಾಧ್ಯಕ್ಷಎಂ.ಶಿವಮೂರ್ತಿ ಒತ್ತಾಯಿಸಿದರು..ಸಭೆಯಲ್ಲಿ ಮಾದರ ಮಹಾಸಭಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಾಳ್ಯ ರಾಜಪ್ಪ, ಉಪಾಧ್ಯಕ್ಷ ನಿಟ್ರೆ ಮಹದೇವಯ್ಯ, ಕೊಳ್ಳೇಗಾಲ ತಾಲ್ಲೂಕು ಆಧ್ಯಕ್ಷ ಸಿ.ಸೋಮು, ಹನೂರು ತಾಲೂಕು ಅಧ್ಯಕ್ಷ ಟಿ .ಸುದೇಶ್, ಚಾಮರಾಜನಗರ ತಾಲೂಕು ಅಧ್ಯಕ್ಷ ಎಂ.ರಾಜು, ಗುಂಡ್ಲುಪೇಟೆ ತಾಲೂಕು ಅಧ್ಯಕ್ಷ ಅಂಕಹಳ್ಳಿ ಸಿದ್ದಯ್ಯ, ಕೊಳ್ಳೇಗಾಲ ಡಾ.ಬಾಬು ಜಗಜೀವನರಾಂ ಸಂಘಗಳ ಒಕ್ಕೂಟ ಅಧ್ಯಕ್ಷ ಬಿ.ಬಾಲರಾಜು, ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸದಸ್ಯ ಹರವೆ ನಾಗೇಶ್, ಕೊಳ್ಳೇಗಾಲ ಮಾದರ ಮಹಾಸಭಾದ ಕಾರ್ಯಕಾರಿಣಿ ಸದಸ್ಯ ಆರ್.ಸೋಮೇಶ್ ಹಾಜರಿದ್ದರು.

### ಹುಚ್ಚಮ್ಮ ದೇವಿ ದೇವಾಲಯ ನಿರ್ಮಾಣ

## ಧಮಸ್ಥಳ ಟ್ರಸ್ಟ್ ವತಿಯಿಂದ ದೇಣಿಗೆ



ರಾಮನಗರ: ತಾಲ್ಲೂಕಿನ ಕಸಬಾ ಹೋಬಳಿಯ ರಾಜೀವ್‌ಗಾಂಧಿಪುರದಲ್ಲಿ ನಿರ್ಮಾಣವಾಗುತ್ತಿರುವ ಶ್ರೀ ಹುಚ್ಚಮ್ಮ ದೇವಿ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿಸಿ ಟ್ರಸ್ಟ್‌ವತಿಯಿಂದ ಸಮುದಾಯ ಅಭಿವೃದ್ಧಿ ವಿಭಾಗದ ಮೂಲಕ 1 ಲಕ್ಷ ರೂ ದೇಣಿಗೆ ಸಮರ್ಪಣೆಯಾಗಿದೆ.

1 ಲಕ್ಷ ರೂ ಮೊತ್ತದ ಡಿಡಿಯನ್ನು ದೇವಸ್ಥಾನ ನಿರ್ವಹಣೆಯ ಟ್ರಸ್ಟ್‌ಗೆ ಹಸ್ತಾಂತರಿಸಿದ ಶ್ರೀ ಧರ್ಮಸ್ಥಣ ಗ್ರಾಮಾಭಿವೃದ್ಧಿ ಯೋಜನೆಯ ಬೆಂಗಳೂರ್ ದಕ್ಷಿಣ ಜಿಲ್ಲೆಯ ನಿರ್ದೇಶಕ ಜಯಕರ್ ಶೆಟ್ಟಿ, ಮಾತನಾಡಿ, ಯೋಜನೆಯ ಅಡಿಯಲ್ಲಿ ದೇವಸ್ಥಾನದ ಜೀರ್ಣೋದ್ಧಾರ, ಹಿಂದೂ ರುದ್ರ ಭೂಮಿ ರಚನೆ, ಹಾಲು ಉತ್ಪಾದಕರ ಸಹಕಾರಿ ಸಂಘದ ಕಟ್ಟಡದ ನಿರ್ಮಾಣಕ್ಕೆ ನೆರವು, ಶಾಲೆಗಳಿಗೆ ಬೆಂಚ್ ಡೆಸ್ಕ್ ವಿತರಣೆ, ಜ್ಞಾನದೀಪ ಕಾರ್ಯಕ್ರಮದಲ್ಲಿ ಸರ್ಕಾರಿ ಶಾಲೆಗಳಿಗೆ ಶಿಕ್ಷಕರ ನಿಯೋಜನೆ, ಸಮುದಾಯ ಭವನಗಳ ನಿರ್ಮಾಣಕ್ಕೆ ನೆರವು, ಆಸಕ್ತ ಕುಟುಂಬಗಳಿಗೆ ವಾತ್ಸಲ್ಯ ಮನೆ ನಿರ್ಮಿಸಿಕೊಡುವುದು, ಅಶಕ್ತರಿಗೆ ಮಾಸಾಶನ, ಜನ ಮಂಗಲ ಉಪಕರಣ ವಿತರಣೆ, ಕೆರೆಗಳ ಹೂಳೆತ್ತುವ ಕಾರ್ಯಕ್ರಮ ಹೀಗೆ ಹತ್ತು ಹಲವಾರು ಕಾರ್ಯಕ್ರಮಗಳನ್ನು ಬಿಸಿ ಟ್ರಸ್ಟ್‌ವತಿಯಿಂದ ನೀಡಲಾಗುತ್ತಿದೆ. ಈ ಎಲ್ಲಾ ಕಾರ್ಯಕ್ರಮಗಳಿಗೆ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ ವೀರೇಂದ್ರ ಹೆಗಡೆಯವರ ಕೊಡುಗೆಯಗಿದೆ. ಎಂದು ತಿಳಿಸಿದರು. ಧರ್ಮಸ್ಥಳ ಸಂಸ್ಥೆಯಲ್ಲಿ ಸಂಘದ ಸದಸ್ಯರ ಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕೆ ಶಿಷ್ಯವೇತನ, ಸಂಘದ ಸದಸ್ಯರಿಗೆ ಆರೋಗ್ಯವೇ ಕಾರ್ಯಕ್ರಮಗಳನ್ನು ಕೂಡ ನಡೆಯುತ್ತಿವೆ ಎಂದರು. ಈ ವೇಳೆ ದೇವಾಲಯ ಟ್ರಸ್ಟ್‌ನ ಅಧ್ಯಕ್ಷ ಹನುಮಂತು, ಉಪಾಧ್ಯಕ್ಷ ಸತೀಶ್ ಎಚ್ ಎನ್ ಕಾರ್ಯದರ್ಶಿ ಪ್ರಮೋದ್ ಕುಮಾರ್, ಖಜಾಂಚಿ ದೇವೇಂದ್ರ. ಗೌರವಾಧ್ಯಕ್ಷ ಗೂಳಿ ಗೌಡ, ಪ್ರಮುಖರಾದ ರಮೇಶ್, ಶಿವಮಾದು, ವಿನೋದ್ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಯೋಜನಾಧಿಕಾರಿ ಮುರಳಿಧರ್, ವಲಯದ ಮೇಲ್ವಿಚಾರಕ ಶ್ರೀನಿವಾಸ ,ಸೇವಾ ಪ್ರತಿನಿಧಿ ಸುನೀತಾ ಹಾಗೂ ಸಂಘದ ಸದಸ್ಯರು ಉಪಸ್ಥಿತರಿದ್ದರು.

## ವಿವಿಧ ಕಾಮಗಾರಿಗೆ ಶಾಸಕ ಜಿ.ಟಿ.ದೇವೇಗೌಡ ಚಾಲನೆ

# ರೂ.4 ಕೋಟಿ 83 ಲಕ್ಷ ವೆಚ್ಚದಲ್ಲಿ ಅಭಿವೃದ್ಧಿ

**ಮೈಸೂರು:** ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ದಡದಕಲ್ಲಹಳ್ಳಿ, ಯಾಚೇಗೌಡಹಳ್ಳಿ ಮತ್ತು ಹೊಸಕೋಟೆ ಗ್ರಾಮಗಳ ಅಭಿವೃದ್ಧಿಗೆ ಶಾಸಕ ಜಿ.ಟಿ.ದೇವೇಗೌಡ ಚಾಲನೆ ನೀಡಿದರು.

ದಡದಕಲ್ಲಹಳ್ಳಿ ಗ್ರಾಮದಲ್ಲಿ ರೂ 80 ಲಕ್ಷ ವೆಚ್ಚದಲ್ಲಿ ಗ್ರಾಮದ ಪರಿಮಿತಿಯ ರಸ್ತೆಗಳ ಅಭಿವೃದ್ಧಿಗೆ ಚಾಲನೆ ನೀಡಿದರು. ದಡದಕಲ್ಲಹಳ್ಳಿ ಗ್ರಾಮದ ಕೆಲವು ಮನೆಗಳಿಗೆ ನಿರಂತರ ವಿದ್ಯುತ್ ಸಂಪರ್ಕವಿಲ್ಲದೆ ತೊಂದರೆಯಾಗುತ್ತಿದ್ದು, ನಿರಂತರ ವಿದ್ಯುತ್ ಸಂಪರ್ಕವನ್ನು ಒದಗಿಸಲು ಗ್ರಾಮಸ್ಥರು ಕೋರಿದರು. ಸೆಸ್ಕಾಂನ ಅಧೀಕ್ಷಕ ಅಭಿಯಂತರರಿಗೆ ದೂರವಾಣಿ ಮೂಲಕ ಮಾತನಾಡಿ ಕೂಡಲೇ ಸದರಿ ಮನೆಗಳಿಗೆ ನಿರಂತರ ವಿದ್ಯುತ್ ಸಂಪರ್ಕವನ್ನು ಒದಗಿಸಲು ಸೂಚಿಸಿದರು.

ಹೊಸಕೋಟೆಯಿಂದ ಯಾಚೇ ಗೌಡನಹಳ್ಳಿಗೆ ಸಂಪರ್ಕಿಸುವ ಪ್ರಮುಖ ರಸ್ತೆಯನ್ನು ರೂ. 3 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಯಾಚೇಗೌಡನಹಳ್ಳಿ ಗ್ರಾಮದ ಪರಿಮಿತಿಯಲ್ಲಿ ರೂ. 23 ಲಕ್ಷ ವೆಚ್ಚದಲ್ಲಿ ರಸ್ತೆಗಳ ಅಭಿವೃದ್ಧಿಗೆ ಚಾಲನೆ ನೀಡಿದರು.

ಯಾಚೇಗೌಡನಹಳ್ಳಿ ಗ್ರಾಮದಿಂದ ಕಾವೇರಿ ಹಿನ್ನಿರಿಗೆ ಹೋಗುವ ರಸ್ತೆ ಹಾಳಾಗಿದ್ದು, ಸದರಿ ರಸ್ತೆಯನ್ನು ಅಭಿವೃದ್ಧಿಪಡಿಸಿಕೊಡುವಂತೆ ಅಲ್ಲಿನ ರೈತರು ಕೋರಿದರು, ಶಾಸಕರು ಮುಂದಿನ ಅನುದಾನದಲ್ಲಿ ರಸ್ತೆಯನ್ನು ಅಭಿವೃದ್ಧಿಪಡಿಸುವ ಭರವಸೆ ನೀಡಿದರು.



ಬಸ್ ಸೌಲಭ್ಯ ಕುರಿತು ಅಲ್ಲಿನ ಶಾಲಾ ಮಕ್ಕಳು ತಿಳಿಸಿದಾಗ ಕೂಡಲೇ ವಿಭಾಗೀಯ ನಿಯಂತ್ರಣಾಧಿಕಾರಿಳಾದ ವಿರೇಶ್ರವರಿಗೆ ದೂರವಾಣಿ ಮೂಲಕ ತಿಳಿಸಿ, ಕೂಡಲೇ ಬಸ್ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲು ಸೂಚಿಸಿದರು.

ಹೊಸಕೋಟೆ ಗ್ರಾಮದಲ್ಲಿ ರೂ.80 ಲಕ್ಷ ವೆಚ್ಚದಲ್ಲಿ ಹೊಸಕೋಟೆ ಗ್ರಾಮದ ಪರಿಮಿತಿಯಲ್ಲಿ ಚರಂಡಿ ಮತ್ತು ರಸ್ತೆ ನಿರ್ಮಾಣಕ್ಕೆ ಚಾಲನೆ ನೀಡಿದರು. ಗ್ರಾಮಸ್ಥರು ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ ಮಾಡುವಂತೆ ಕೋರಿದರು. ಶಾಸಕರು ಕೂಡಲೇ ಶಾಸಕರ ಅನುದಾನದಲ್ಲಿ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾಜಿ ಜಿ.ಪಂ.ಸದಸ್ಯರಾದ ಹೆಚ್.ಎಸ್.ನಾಗರಾಜು, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಯೋಗಮೂರ್ತಿ, ಮಾಜಿ ಗ್ರಾಮ ಪಂಚಾಯಿತಿ ಸದಸ್ಯರುಗಳಾದ ಲೋಕೇಶ್, ಮುಖಂಡರಾದ ವೀರಭದ್ರಸ್ವಾಮಿ, ಸಿದ್ದಲಿಂಗಪ್ಪ, ಕಲರ್ ಮಂಜು, ಮುಕುಂದ, ವೆಂಕಟೇಶ್, ಸೋಮಶೇಖರ್, ನಾಗೇಂದ್ರ, ಯಾಚೇಗೌಡನಹಳ್ಳಿ ನಂಜುಂಡೇಗೌಡರು, ಮಲ್ಲೇಶ್, ಶಿವಣ್ಣ, ತಿಲಕ್, ಶರತ್, ಪರಶುರಾಮ್, ಹೊಸಕೋಟೆಯ ಯ॥ ತಿಮ್ಮೇಗೌಡ, ಕೆಂಪೇಗೌಡ, ಬಸವರಾಜು, ರಾಮಕೃಷ್ಣೇಗೌಡ, ವೆಂಕಟೇಶ್, ಮಾಜಿ ಉಪಾಧ್ಯಕ್ಷರಾದ ಮಹದೇವು, ಪುನೀತ್ ಗೌಡ ಶಿವರಾಮು, ಲೋಕೇಶ್, ರಘು. ಲೋಕೇಶ್, ಯೋಗೇಶ್ ಸೇರಿದಂತೆ ಹಲವಾರು ಮುಖಂಡರು ಭಾಗವಹಿಸಿದ್ದರು.

# ಯೋಗಾಭ್ಯಾಸದಿಂದ ಒತ್ತಡ ಮುಕ್ತ ಜೀವನ ಸಾಧ್ಯ: ಯೋಗಿನಿ ಕಾಲೀಜಿ

**ಮಂಡ್ಯ:** ಸಾಧನೆಯ ಸಂಕಲ್ಪ ಮಾಡಿದಾಗ ದೇಹದಲ್ಲಿ ಉತ್ಪತ್ತಿಯಾಗುವ ಋಣಾತ್ಮಕ ಜೀನ್‌ಗಳು ತೊಲಗಿ ಧನಾತ್ಮಕ ಜೀನ್‌ಗಳ ಉತ್ಪತ್ತಿಯಿಂದ ಒತ್ತಡಮುಕ್ತ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ಅಮೆರಿಕಾ ಕ್ಯಾಲಿಫೋರ್ನಿಯಾದ ವ್ಯಾಸ ಭಾರತಿ ತ್ರೈಯೋಗ ವಿಶ್ವವಿದ್ಯಾಲಯದ ಕುಲಾಧಿಪತಿ ಯೋಗಿನಿ ಕಾಲೀಜಿ ತಿಳಿಸಿದರು.

ನಗರದ ಪತ್ರಕರ್ತರೊಂದಿಗೆ ನಡೆದ ವಿಶೇಷ ಸಂದರ್ಶನದಲ್ಲಿ ಮಾತನಾಡಿದ ಅವರು, ಧ್ಯಾನಮಯ ಪ್ರವಾಹದಲ್ಲಿ ದೇಹ, ಉಸಿರು ಮತ್ತು ಮನಸ್ಸನ್ನು ಒಂದಾಗಿಸುವ ಸಮಗ್ರ ಯೋಗಪಥವೇ ತ್ರೈಯೋಗವಾಗಿದ್ದು, ಕ್ರಿಯಾವತಿ ಸಿದ್ಧಿಯ ಮೂಲಕ 1300ಕ್ಕೂ ಹೆಚ್ಚು ಸಂಪೂರ್ಣ ಯೋಗ ಪದ್ಧತಿಗಳು ರೂಪಿತಗೊಂಡಿವೆ ಎಂದು ಹೇಳಿದರು.

ನಿಯಮಿತ ಯೋಗಾಭ್ಯಾಸದಿಂದ ಮಾನಸಿಕ ಸ್ಪಷ್ಟತೆ, ಭಾವನಾತ್ಮಕ ಸ್ಥಿರತೆ, ದೈಹಿಕ ಆರೋಗ್ಯ ಹಾಗೂ ಆಧ್ಯಾತ್ಮಿಕ ನೆಲೆಯಲ್ಲೂ ಒತ್ತಡಮುಕ್ತ ಜೀವನ ಸಾಧ್ಯವಾಗುತ್ತದೆ. ಆಧುನಿಕ ಶಿಕ್ಷಣದ ಜೊತೆಗೆ ಯೋಗಜ್ಞಾನ, ಶಿಸ್ತು, ಕರುಣೆ ಮತ್ತು ಆತ್ಮಜಾಗೃತಿಯನ್ನು ಸಂಯೋಜಿಸಿದಾಗ ಆಂತರಿಕ ಸಮತೋಲನದೊಂದಿಗೆ ಯಶಸ್ಸು ಸಾಧ್ಯ ಎಂದು ತಿಳಿಸಿದರು.

ವ್ಯಾಸ ಭಾರತಿ ತ್ರೈಯೋಗ ವಿಶ್ವವಿದ್ಯಾಲಯವು ಕೇವಲ ವಿದ್ಯಾಸಂಸ್ಥೆಯಲ್ಲ, ಪರಿವರ್ತನಾತ್ಮಕ ಶಿಕ್ಷಣದ ಕೇಂದ್ರವಾಗಿದೆ. ಜ್ಞಾನದ ಜೊತೆಗೆ ಪ್ರಜ್ಞೆಯನ್ನು ಬೆಳೆಸುವುದು ಇದರ ಉದ್ದೇಶವಾಗಿದ್ದು, ಜಾಗೃತಿ, ಸರಳತೆ, ಕೃತಜ್ಞತೆ ಹಾಗೂ ಸರ್ವ ಜೀವಿಗಳ ಮೇಲಿನ ಪ್ರೀತಿಯನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ಉಸಿರಿನ ಜಾಗೃತಿ ಮತ್ತು ಧ್ಯಾನವು ವಿದ್ಯಾರ್ಥಿಗಳ ವಿಚಲತೆ ನಡುವೆ ಏಕಾಗ್ರತೆಯನ್ನು ಹೆಚ್ಚಿಸುತ್ತದೆ ಎಂದರು.

ಈ ವೇಳೆ ವಿಶ್ವವಿದ್ಯಾಲಯದ ಉಪಕುಲಾಧಿಪತಿ ರಾಘವೇಂದ್ರ ಪೈ ಹಾಗೂ ಬೇಬಿಮಠದ ತ್ರಿನೇತ್ರ ಮಹಂತ ಶಿವಯೋಗಿ ಸ್ವಾಮೀಜಿ ಉಪಸ್ಥಿತರಿದ್ದರು.




## ಬೆಂಗಳೂರಿನಲ್ಲಿ ಡಿ.5. 6ರಂದು ಮನೋತ್ಸವ-2026 ವಿಶಿಷ್ಟ ಕಾರ್ಯಕ್ರಮ

# ರಾಷ್ಟ್ರೀಯ ಮಾನಸಿಕ ಆರೋಗ್ಯ ಹಬ್ಬ

**ಬೆಂಗಳೂರು:** ದೇಶದ ಪ್ರತಿಷ್ಠಿತ ರಾಷ್ಟ್ರೀಯ ಮಾನಸಿಕ ಆರೋಗ್ಯ ಹಬ್ಬವಾದ ಮನೋತ್ಸವ–2026 ಮೂರನೇ ಆವೃತ್ತಿಯು ಇದೇ ವರ್ಷದ ಡಿ.5, 6ರಂದು ಬೆಂಗಳೂರಿನಲ್ಲಿ ನಡೆಯಲಿದ್ದು, ಸಾರ್ವಜನಿಕರಿಗೆ ಉಚಿತ ಪ್ರವೇಶವಿರುವ ಈ ವಿಶಿಷ್ಟ ಕಾರ್ಯಕ್ರಮಕ್ಕಾಗಿ ಪ್ರಸ್ತುತ ಕಾರ್ಯಕ್ರಮ ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿದೆ.

ರೋಹಿಣಿ ನಿಲೇಕಣಿ ಫಿಲಾಂತ್ರಪೀಸ್, ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ ಹಾಗೂ ನ್ಯಾಷನಲ್ ಸೆಂಟರ್ ಫಾರ್ ಬಯೋಲಾಜಿಕಲ್ ಸೈನ್ಸಸ್ ಜಂಟಿಯಾಗಿ ಮಾನಸಿಕ ಆರೋಗ್ಯ ಉತ್ತೇಜಿಸುವ ಉದ್ದೇಶದಿಂದ ಈ ಬೃಹತ್ ಹಬ್ಬವನ್ನು ಆಯೋಜಿಸುತ್ತಿವೆ.

ಕಳೆದ 2025ರ ನವೆಂಬರ್‌ನಲ್ಲಿ ನಡೆದ ಮನೋತ್ಸವದ ಎರಡನೇ ಆವೃತ್ತಿ ಅಭೂತಪೂರ್ವ ಯಶಸ್ಸು ಕಂಡಿತ್ತು. ತಜ್ಞರ ನೇತೃತ್ವದ ಚರ್ಚಾಗೋಷ್ಠಿಗಳು, ಮುಖ್ಯ ಭಾಷಣಗಳು, ಅನುಭವ ಹಂಚಿಕೊಳ್ಳುವ ವಲಯಗಳು, ಸಂವಾದಾತ್ಮಕ ಕಾರ್ಯಾಗಾರಗಳು, ಸಾಂಸ್ಕೃತಿಕ ಪ್ರದರ್ಶನಗಳು ಹಾಗೂ ಸಮುದಾಯ ಮಳಿಗೆಗಳು ಸೇರಿದಂತೆ ಒಟ್ಟು 80ಕ್ಕೂ ಹೆಚ್ಚು ಗೋಷ್ಠಿಗಳಲ್ಲಿ 6 ಸಾವಿರಕ್ಕೂ ಅಧಿಕ ಜನರು ಭಾಗವಹಿಸಿದ್ದರು.

ಇದೀಗ ಮನೋತ್ಸವ–2026ರ ಕಾರ್ಯಕ್ರಮಗಳ ರೂಪುರೇಷೆಗಾಗಿ ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿದೆ. ಕಲಾವಿದರು, ಸಂಶೋಧಕರು, ವೈದ್ಯಕೀಯ ವೃತ್ತಿಪರರು, ಆರೈಕೆದಾರರು, ಮಾನಸಿಕ ಆರೋಗ್ಯದ ಸವಾಲುಗಳನ್ನು ಸ್ವತಃ ಎದುರಿಸಿದವರು ಹಾಗೂ ಬದಲಾವಣೆಯ ಹರಿಕಾರರು ಒಟ್ಟಾಗಿ ರೂಪಿಸುವ ಮುಕ್ತ ವೇದಿಕೆಯಾಗಿ ಈ ಹಬ್ಬ ಬೆಳೆಯುತ್ತಿದೆ.





ಸಂಶೋಧನೆ, ವೈಯಕ್ತಿಕ ಅನುಭವಗಳು, ಕಲೆ ಹಾಗೂ ಸಮುದಾಯದ ಜ್ಞಾನವನ್ನು ಒಂದೇ ವೇದಿಕೆಗೆ ತರುವುದು, ಮಾನಸಿಕ ಆರೋಗ್ಯದ ಕುರಿತು ಮುಕ್ತ ಸಂವಾದಕ್ಕೆ ಅವಕಾಶ ಕಲ್ಪಿಸುವುದು ಹಾಗೂ ಜನರು ಆರೈಕೆ ಮತ್ತು ಬೆಂಬಲ ನೀಡುವ ಸಮುದಾಯಗಳೊಂದಿಗೆ ಸಂಪರ್ಕ ಸಾಧಿಸಲು ನೆರವಾಗುವುದು ಈ ಹಬ್ಬದ ಮುಖ್ಯ ಉದ್ದೇಶವಾಗಿದೆ.

ಸ್ಥಳೀಯರ ಪಾಲ್ಗೊಳ್ಳುವಿಕೆ ಮತ್ತು ತೊಡಗಿಸಿಕೊಳ್ಳುವಿಕೆಯನ್ನು ಮತ್ತಷ್ಟು ಗಾಢವಾಗಿಸಲು ಈ ವರ್ಷದ ಆವೃತ್ತಿಯಲ್ಲಿ ಸುಲಭ ಪ್ರವೇಶ ಹಾಗೂ ಸಮುದಾಯದ ಧ್ವನಿಗಳಿಗೆ ಹೆಚ್ಚಿನ ಒತ್ತು ನೀಡಲಾಗಿದೆ. ಕನ್ನಡದಲ್ಲಿ ಕಾರ್ಯಕ್ರಮ ಪ್ರಸ್ತಾವನೆಗಳನ್ನು ಸಲ್ಲಿಸಲು ವಿಶೇಷ ಪ್ರೋತ್ಸಾಹ ನೀಡಲಾಗಿದೆ.

ಮಾನಸಿಕ ಆರೋಗ್ಯ ಮತ್ತು ಯೋಗಕ್ಷೇಮದ ವಿವಿಧ ಆಯಾಮಗಳ ಕುರಿತು ಕೆಲಸ ಮಾಡುತ್ತಿರುವ ವ್ಯಕ್ತಿಗಳು ಹಾಗೂ ಸಂಸ್ಥೆಗಳು ಸಂವಾದ, ಸಾರ್ವಜನಿಕ ಪಾಲ್ಗೊಳ್ಳುವಿಕೆ, ಚಿಂತನೆ ಹಾಗೂ ಅರಿವು ಹೆಚ್ಚಿಸುವ ಯಾವುದೇ ರೂಪದ ಕಾರ್ಯಕ್ರಮ ಪ್ರಸ್ತಾವನೆಗಳನ್ನು ಸಲ್ಲಿಸಲು ಆಹ್ವಾನಿಸಲಾಗಿದೆ.

ಪ್ರಸ್ತಾವನೆಗಳನ್ನು ಅಧಿಕೃತ ಅರ್ಜಿ ನಮೂನೆಯ ಮೂಲಕ ಮಾತ್ರ ಸ್ವೀಕರಿಸಲಾಗುತ್ತದೆ. ಆಯೋಜಕ ತಂಡದ ಸದಸ್ಯರಿಗೆ ನೇರ ಇಮೇಲ್ ಸೇರಿದಂತೆ ಇತರ ಯಾವುದೇ ಮಾಧ್ಯಮಗಳ ಮೂಲಕ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಲು ಮೇ 31, 2026 ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಳು ಹಾಗೂ ಪ್ರಸ್ತಾವನೆ ಸಲ್ಲಿಕೆ ಮಾರ್ಗಸೂಚಿಗಳು ಮನೋತ್ಸವ ಅಧಿಕೃತ ವೆಬ್‌ಸೈಟ್ ನಲ್ಲಿ ಲಭ್ಯವಿವೆ.

# ಮಂಡ್ಯದಲ್ಲಿ ರಾಜ್ಯ ಮಟ್ಟದ ಯೋನಿಕ್ಸ್ ಸನ್‌ರೈಸ್ ಬ್ಯಾಟ್ಮಿಂಟನ್ ಪಂದ್ಯಾವಳಿ

**ಮಂಡ್ಯ:** ಕರ್ನಾಟಕ ಬ್ಯಾಟ್ಮಿಂಟನ್ ಅಸೋಸಿಯೇಷನ್ ವತಿಯಿಂದ ರಾಜ್ಯ ಮಟ್ಟದ ಯೋನಿಕ್ಸ್–ಸನ್‌ರೈಸ್ ರ್‍ಯಾಂಕಿಂಗ್ ಬ್ಯಾಟ್ಮಿಂಟನ್ ಪಂದ್ಯಾವಳಿಯನ್ನು ನಗರದ ಪಿಇಟಿ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಅಸೋಸಿಯೇಷನ್ ಅಧ್ಯಕ್ಷ ಹಾಗೂ ಮಾಜಿ ಸಚಿವ ಕುಮಾರ್ ಬಂಗಾರಪ್ಪ ತಿಳಿಸಿದರು.




ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಂದ್ಯಾವಳಿ 19 ವರ್ಷದೊಳಗಿನವರು ಹಾಗೂ ಹಿರಿಯರು ಎಂಬ ಎರಡು ವಿಭಾಗಗಳಲ್ಲಿ ನಡೆಯಲಿದ್ದು, 700ಕ್ಕೂ ಹೆಚ್ಚು ಸ್ಪರ್ಧಾಳುಗಳು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಮೈಸೂರು ರಾಜ್ಯ ಬ್ಯಾಟ್ಮಿಂಟನ್ ಅಸೋಸಿಯೇಷನ್ ಆಗಿ 1951ರಲ್ಲಿ ಸ್ಥಾಪಿತವಾದ ಸಂಸ್ಥೆಯನ್ನು ಬಳಿಕ ಕರ್ನಾಟಕ ಬ್ಯಾಟ್ಮಿಂಟನ್ ಅಸೋಸಿಯೇಷನ್ ಎಂದು ಮರುನಾಮಕರಣ ಮಾಡಲಾಗಿದೆ. ಇದೀಗ ಮಂಡ್ಯದಲ್ಲಿ ಪಂದ್ಯಾವಳಿ ಆಯೋಜಿಸುವ ಮೂಲಕ ಸಂಸ್ಥೆಯ ವಜ್ರ ಮಹೋತ್ಸವ ಆಚರಣೆಗೆ ಚಾಲನೆ ನೀಡಲಾಗುತ್ತಿದೆ. ವರ್ಷಪೂರ್ತಿ ರಾಜ್ಯಾದ್ಯಂತ ವಿವಿಧ ಪಂದ್ಯಾವಳಿಗಳು ನಡೆಯಲಿವೆ ಎಂದು ತಿಳಿಸಿದರು.

ರಾಜ್ಯದಲ್ಲಿ ಸುಮಾರು 10 ಸಾವಿರ ಬ್ಯಾಟ್ಮಿಂಟನ್ ಕೋರ್ಟ್‌ಗಳಿದ್ದು, 4.5 ಲಕ್ಷಕ್ಕೂ ಹೆಚ್ಚು ಆಟಗಾರರಿದ್ದಾರೆ. ದೇಶದಲ್ಲಿ ಕ್ರಿಕೆಟ್ ನಂತರ ಅತಿ ಹೆಚ್ಚು ಆಡಲಾಗುವ ಕ್ರೀಡೆಯಾಗಿರುವ ಬ್ಯಾಟ್ಮಿಂಟನ್‌ಗೆ ಹೆಚ್ಚಿನ ಉತ್ತೇಜನ ದೊರಕುತ್ತಿದೆ. 2036ರ ಒಲಂಪಿಕ್ಸ್ ಭಾರತದಲ್ಲಿ ನಡೆಸಲು ಒತ್ತಾಯ ಮಾಡಲಾಗುತ್ತಿದ್ದು, ರಾಜ್ಯದಲ್ಲಿ ಒಲಂಪಿಕ್ ಗ್ರಾಮ ಸ್ಥಾಪನೆಗೆ ಸರ್ಕಾರದಿಂದ ಸಕಾರಾತ್ಮಕ ಸ್ಪಂದನೆ ದೊರೆತಿದೆ. ಈ ನಡುವೆ ನಮ್ಮ ಆಟಗಾರರು ಅಂತರಾಷ್ಟ್ರೀಯ ಮಟ್ಟದಲ್ಲಿ ಮೆರೆದಾಡುವಂತೆ ಸಿದ್ಧರಾಗಬೇಕು ಎಂದು ಹೇಳಿದರು.

ಯೋನಿಕ್ಸ್–ಸನ್‌ರೈಸ್ ಸಂಸ್ಥೆಯು ಷಟಲ್ ಸೇರಿದಂತೆ ಅಗತ್ಯ ಆಟದ ಸಾಮಗ್ರಿಗಳನ್ನು ಒದಗಿಸಲಿದ್ದು, ಪಿಇಟಿ ಸಂಸ್ಥೆಯಲ್ಲಿ ಆಟಗಾರರಿಗೆ ಉಚಿತ ವಸತಿ ಮತ್ತು ಊಟದ ವ್ಯವಸ್ಥೆ ಮಾಡಲಾಗಿದೆ. ಹೆಚ್ಚುವರಿ ವಸತಿ ಅಗತ್ಯವಿದ್ದಲ್ಲಿ ನಗರದಲ್ಲಿನ ಖಾಸಗಿ ಹೋಟೆಲ್‌ಗಳು ಸಹಕರಿಸುವಂತೆ ಮನವಿ ಮಾಡಿದರು.

ಜಿಲ್ಲಾಧ್ಯಕ್ಷ ಬಿ. ಶಿವಕುಮಾರ್ ಮಾತನಾಡಿ, ಪಂದ್ಯಾವಳಿಯ ವಿಜೇತರಿಗೆ ಒಟ್ಟು 5 ಲಕ್ಷ ರೂ. ಬಹುಮಾನ ನೀಡಲಾಗುವುದು. ಹಿರಿಯರ ವಿಭಾಗಕ್ಕೆ 2.6 ಲಕ್ಷ ರೂ. (ಪ್ರಥಮ ಹಾಗೂ ದ್ವಿತೀಯ) ಮತ್ತು 19 ವರ್ಷದೊಳಗಿನವರ ವಿಭಾಗಕ್ಕೆ 2.4 ಲಕ್ಷ ರೂ. (ಪ್ರಥಮ ಹಾಗೂ ದ್ವಿತೀಯ) ಬಹುಮಾನ ನೀಡಲಾಗುವುದು ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾರ್ಯಾಧ್ಯಕ್ಷ ಡಾ. ಎಚ್. ಅನಿಲ್ ಕುಮಾರ್, ಕಾರ್ಯದರ್ಶಿ ಮನೋಹರ್ ಹಜಾರೆ, ಸುಧೀರ್, ಮುರಳೀಧರ್, ಹರೀಶ್ ಉಪಸ್ಥಿತರಿದ್ದರು.

# ಡಿಕೆಶಿ ಈಗ ಮುಖ್ಯಮಂತ್ರಿ: ಜಿಲ್ಲೆಯಿಂದ 5ನೇ ರಾಜಕಾರಣಿಗೆ ಒಲಿದ ಸ್ಥಾನ

## ಕೆಂಗಲ್ ಹನುಮಂತಯ್ಯ, ರಾಮಕೃಷ್ಣ ಹೆಗ್ಡೆ, ಎಚ್.ಡಿ.ದೇವೇಗೌಡ, ಎಚ್.ಡಿ.ಕುಮಾರಸ್ವಾಮಿ ನಂತರ ಡಿಕೆಶಿಗೆ ಒಲಿದ ಅದೃಷ್ಟ

**ರಾಮನಗರ:** ರಾಜ್ಯ ರಾಜಕೀಯದಲ್ಲಿ ಮಹತ್ವದ ಬೆಳವಣಿಗೆಯೊಂದು ಸಂಭವಿಸುತ್ತಿದ್ದು, ರಾಜ್ಯದಲ್ಲಿ ನಾಯಕತ್ವ ಬದಲಾವಣೆಯ ಸುಳಿವು ಸ್ಪಷ್ಟವಾಗಿದೆ. ಕನಕಪುರ ಶಾಸಕ ಡಿ.ಕೆ. ಶಿವಕುಮಾರ್ ಅವರ ದೀರ್ಘಕಾಲದ ಪಕ್ಷ ನಿಷ್ಠೆ, ಸಂಘಟನೆ ಶಕ್ತಿ ಮತ್ತು ಆಡಳಿತ ಅನುಭವವನ್ನು ಪರಿಗಣಿಸಿರುವ ಕಾಂಗ್ರೆಸ್ ಹೈಕಮಾಂಡ್, ಅವರನ್ನು ಉಪಮುಖ್ಯಮಂತ್ರಿ ಸ್ಥಾನದಿಂದ ಮುಖ್ಯಮಂತ್ರಿ ಹುದ್ದೆಗೆ ಪ್ರೋತ್ಸಾಹಿಸಲು ಸಮ್ಮತಿಸಿದೆ. ಇದರೊಂದಿಗೆ ರಾಮನಗರ ಜಿಲ್ಲೆಯು ರಾಜ್ಯಕ್ಕೆ ಐದನೇ ಮುಖ್ಯಮಂತ್ರಿಯನ್ನು ನೀಡಿದ ಹೆಗ್ಗಳಿಕೆಗೆ ಪಾತ್ರವಾಗಲಿದೆ.

**ಜಿಲ್ಲೆಯಿಂದ 5ನೇಯವರು:** ವಿಧಾನಸೌಧದ ನಿರ್ಮಾತೃ ಎಂದೇ ಖ್ಯಾತರಾದ ಕೆಂಗಲ್ ಹನುಮಂತಯ್ಯ ಅವರು 1952ರಲ್ಲಿ ರಾಮನಗರ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿದ್ದು, ನಂತರ ರಾಜ್ಯದ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದರು. 1983ರಲ್ಲಿ ಕನಕಪುರ ಕ್ಷೇತ್ರದ ಉಪಚುನಾವಣೆಯಲ್ಲಿ ಜಯಗಳಿಸಿದ್ದ ರಾಮಕೃಷ್ಣ ಹೆಗಡೆ ಅವರು ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದರು. 1994ರಲ್ಲಿ ರಾಮನಗರ ಕ್ಷೇತ್ರದಿಂದ ಸ್ಪರ್ಧಿಸಿದ್ದ ಎಚ್.ಡಿ. ದೇವೇಗೌಡರು ಮುಖ್ಯಮಂತ್ರಿಯಾಗಿ ರಾಜ್ಯವನ್ನು ಮುನ್ನಡೆಸಿದ್ದೇ ಅಲ್ಲ, ಬಳಿಕ ದೇಶದ ಪ್ರಧಾನಮಂತ್ರಿಯಾಗಿಯೂ ಕರ್ತವ್ಯ ನಿರ್ವಹಿಸಿದರು. ಅವರ ಪುತ್ರ ಎಚ್.ಡಿ. ಕುಮಾರಸ್ವಾಮಿ ಅವರು 2004ರಲ್ಲಿ ರಾಮನಗರ ಕ್ಷೇತ್ರವನ್ನು ಪ್ರತಿನಿಧಿಸಿ ಬಿಜೆಪಿ ಸಹಯೋಗದಲ್ಲಿ ಸರ್ಕಾರ ರಚಿಸಿ ಮುಖ್ಯಮಂತ್ರಿಯಾದರು. ನಂತರ 2018ರಲ್ಲಿ ಚನ್ನಪಟ್ಟಣ ಕ್ಷೇತ್ರದಿಂದ ಗೆದ್ದು ಕಾಂಗ್ರೆಸ್ ಬೆಂಬಲದೊಂದಿಗೆ ಮತ್ತೆ ಮುಖ್ಯಮಂತ್ರಿ ಹುದ್ದೆ ಅಲಂಕರಿಸಿದರು. ಇದೀಗ ಅದೇ ಪರಂಪರೆಯಲ್ಲಿ ಕನಕಪುರ ಶಾಸಕ ಡಿ.ಕೆ. ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಸ್ಥಾನ ಒಲಿಯುತ್ತಿದೆ.



**ರಾಜ್ಯಕ್ಕೆ ಐವರು ಮುಖ್ಯಮಂತ್ರಿಗಳನ್ನು ನೀಡಿದ ಹೆಮ್ಮೆ** ರಾಮನಗರ ಜಿಲ್ಲೆಗೆ (ಈಗಿನ ಬೆಂಗಳೂರು ದಕ್ಷಿಣ ಜಿಲ್ಲೆ) ಸಲ್ಲುತ್ತದೆ. ಆದರೆ, ಈವರೆಗೆ ಜಿಲ್ಲೆಯ ಯಾರೂ ಐದು ವರ್ಷದ ಪೂರ್ಣಾವಧಿಯನ್ನು ಮುಖ್ಯಮಂತ್ರಿಯಾಗಿ ಪೂರೈಸಿಲ್ಲ ಎಂಬುದು ಗಮನಾರ್ಹ ಸಂಗತಿ. ಇದೀಗ ಡಿ.ಕೆ. ಶಿವಕುಮಾರ್ ಅವರಿಗೂ ಸುಮಾರು 24 ತಿಂಗಳ ಅವಧಿಗೆ ಮಾತ್ರ ಅಧಿಕಾರ ಸಿಗಲಿದೆ. 2028ರಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಡಿ.ಕೆ.ಶಿವಕುಮಾರ್ ಪುನಃ ಮುಖ್ಯಮಂತ್ರಿಯಾಗುವ ಅದೃಷ್ಟ ಒಲಿಯಬಹುದು ಎನ್ನಲಾಗುತ್ತಿದೆ.

**ಜಿಲ್ಲೆಯ ಜನರ ಆಶಯ ಮುಗಿಲೆತ್ತರ:** ಜಿಲ್ಲೆಯಿಂದ ಯಾರೇ ಮುಖ್ಯಮಂತ್ರಿ ಸ್ಥಾನಕ್ಕೇರಿದರೂ, ಜಿಲ್ಲೆಯ ಜನತೆಯಲ್ಲಿ ತಮ್ಮ ನೆಲ ಇನ್ನಷ್ಟು ಅಭಿವೃದ್ಧಿಯಾಗಲಿ, ಜನಜೀವನದ ಗುಣಮಟ್ಟ ಸುಧಾರಿಸಲಿ ಎಂಬ ನಿರೀಕ್ಷೆ ಸದಾ ಇರುತ್ತದೆ. ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಿಂದ ಪ್ರತ್ಯೇಕವಾಗಿ ರಾಮನಗರ, ಚನ್ನಪಟ್ಟಣ, ಮಾಗಡಿ ಮತ್ತು ಕನಕಪುರ ತಾಲ್ಲೂಕುಗಳನ್ನು ಒಳಗೊಂಡ ರಾಮನಗರ ಜಿಲ್ಲೆಯನ್ನು ರಚಿಸಿದರು. ರಾಮನಗರವನ್ನು ಜಿಲ್ಲಾ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕಂದಾಯ ಭವನ, ಪೊಲೀಸ್ ಭವನ, ಜಿಲ್ಲಾ ಪಂಚಾಯತ್ ಭವನ ಸೇರಿದಂತೆ ಅನೇಕ ಸರ್ಕಾರಿ ಕಟ್ಟಡಗಳ ನಿರ್ಮಾಣಕ್ಕೆ ಚಾಲನೆ ನೀಡಿದರು. ಜಿಲ್ಲಾ ಕೇಂದ್ರಕ್ಕೆ ಅಗತ್ಯವಾದ ಮೂಲಸೌಕರ್ಯಗಳ ನಿರ್ಮಾಣಕ್ಕೂ ಅವರು ಆದ್ಯತೆ ನೀಡಿದ್ದರು.

**ಜಿಲ್ಲೆಯ ಹೆಸರು ಬದಲಾವಣೆಗೆ ಕಾರಣಕರ್ತರು:** ಹಾಲಿ ಸರ್ಕಾರದಲ್ಲಿ ಉಪಮುಖ್ಯಮಂತ್ರಿಯಾಗಿರುವ ಡಿ.ಕೆ. ಶಿವಕುಮಾರ್ ಅವರು ರಾಮನಗರ ಜಿಲ್ಲೆಗೆ ಬೆಂಗಳೂರು ದಕ್ಷಿಣ ಜಿಲ್ಲೆ ಎಂಬ ನಾಮಕರಣ ನೀಡಿ, ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಹೊಸ ಗುರುತನ್ನು ತಂದಿದ್ದಾರೆ. ಜಿಲ್ಲೆಯನ್ನು ಮಾದರಿ ಜಿಲ್ಲೆಯನ್ನಾಗಿಸುವ ದೂರದೃಷ್ಟಿಯೂ ಅವರಲ್ಲಿದೆ ಎಂಬ ಅಭಿಪ್ರಾಯ ಜನರಲ್ಲಿ ಮೂಡಿದೆ. ಇದೇ ಕಾರಣಕ್ಕೆ ಜಿಲ್ಲೆಯ ಜನತೆಯಲ್ಲೂ ಅವರು ಮುಖ್ಯಮಂತ್ರಿ ಹುದ್ದೆ ಅಲಂಕರಿಸಲಿ ಎಂಬ ಆಶಯ ಬಹುಕಾಲದಿಂದ ವ್ಯಕ್ತವಾಗುತ್ತಿತ್ತು. ಇದೀಗ ಆ ನಿರೀಕ್ಷೆ ಸಾಕಾರವಾಗುವ ಹಂತಕ್ಕೆ ತಲುಪಿದೆ.

ರಾಜಧಾನಿ ಬೆಂಗಳೂರಿನ ಪಕ್ಕದಲ್ಲೇ ಇರುವ ಈ ಜಿಲ್ಲೆಗೆ ಅತ್ಯಾಧುನಿಕ ಮೂಲಸೌಕರ್ಯ, ಕೈಗಾರಿಕಾ ಅಭಿವೃದ್ಧಿ, ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಹೊಸ ಯೋಜನೆಗಳನ್ನು ತರಬೇಕು ಎಂಬ ನಿರೀಕ್ಷೆ ಜನರಲ್ಲಿ ಹೆಚ್ಚಾಗಿದೆ. ಜಿಲ್ಲೆಯ ನಾಗರಿಕರ ಜೀವನಮಟ್ಟವನ್ನು ಸುಧಾರಿಸುವ ದೀರ್ಘಕಾಲಿಕ ಯೋಜನೆಗಳನ್ನು ಜಾರಿಗೆ ತರುವ ಹೊಣೆಗಾರಿಕೆ ಹೊಸ ನಾಯಕತ್ವದ ಮೇಲಿದೆ.

ರಾಜಕೀಯ ಸವಾಲುಗಳನ್ನು ಧೈರ್ಯದಿಂದ ಎದುರಿಸುವ ಸಾಮರ್ಥ್ಯ ಡಿ.ಕೆ. ಶಿವಕುಮಾರ್ ಅವರಿಗೆ ಇದೆ ಎಂಬ ನಂಬಿಕೆ ಅವರ ಬೆಂಬಲಿಗರಲ್ಲಿದೆ. ಇದೀಗ ರಾಜ್ಯದ ಸಮಗ್ರ ಅಭಿವೃದ್ಧಿ, ಜನಜೀವನದ ಸುಧಾರಣೆ ಮತ್ತು ಪರಿಣಾಮಕಾರಿ ಆಡಳಿತ ನೀಡುವ ದೊಡ್ಡ ಜವಾಬ್ದಾರಿ ಅವರ ಮುಂದೆ ನಿಂತಿದೆ. ಆ ಸವಾಲನ್ನು ಸಮರ್ಥವಾಗಿ ನಿಭಾಯಿಸಿ ಜನಪರ ಆಡಳಿತ ನೀಡಲಿ ಎಂಬುದು ಜಿಲ್ಲೆಯ ಜನತೆಯ ಆಶಯವಾಗಿದೆ.

# ಸಾಹಿತ್ಯ ಶಿಲ್ಪಿ ಚಿ.ಉದಯ ಶಂಕರ್ ಅಮರ: ಸುರೇಶ್ ಎನ್. ಋಗ್ವೇದಿ

**ಚಾಮರಾಜನಗರ:** ಕನ್ನಡ ಚಿತ್ರರಂಗದ ಅಭೂತಪೂರ್ವ ಸಾಹಿತಿ ಚಿ. ಉದಯ ಶಂಕರ್ ಅವರು 3000ಕ್ಕೂ ಹೆಚ್ಚು ಗೀತೆಗಳನ್ನು ರಚಿಸಿ ಗಿನ್ನಿಸ್ ದಾಖಲೆಗೂ ಪಾತ್ರರಾದ ಪ್ರತಿಭಾವಂತ ಸಾಹಿತ್ಯಕಾರರಾಗಿದ್ದು, ಅವರ ಹೆಸರು ಸದಾ ಅಮರವಾಗಿರುತ್ತದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ಸುರೇಶ್ ಎನ್. ಋಗ್ವೇದಿ ತಿಳಿಸಿದರು.

ನಗರದ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ಸಾಹಿತ್ಯ ಶಿಲ್ಪಿ ಚಿ. ಉದಯ ಶಂಕರ್ ನೆನಪು ಹಾಗೂ ಕೊಡುಗೆಗಳು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಉದಯ ಶಂಕರ್ ಅವರು ಗೀತರಚನಾಕಾರರು ಹಾಗೂ ಸಂಭಾಷಣಾಕಾರರಾಗಿ ಮೂರು ದಶಕಗಳ ಕಾಲ ಕನ್ನಡ ಚಲನಚಿತ್ರಗಳಿಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಅವರ ಸಾಹಿತ್ಯ ಸರಳ, ಮಧುರ ಹಾಗೂ ಕಾವ್ಯಾತ್ಮಕವಾಗಿದ್ದು, ಗೀತೆಗಳಲ್ಲಿ ಭಾವನಾತ್ಮಕ ಆಳ ಹಾಗೂ ಗಹನ ಅರ್ಥನಿರೂಪಣೆ ಕಾಣಬಹುದು. ಡಾ. ರಾಜಕುಮಾರ್ ಅವರೊಂದಿಗೆ ಅವರಿಗೆ ಆಪ್ತ ಸಂಬಂಧವಿದ್ದು, ಬಂಗಾರದ ಮನುಷ್ಯ , ಶಂಕರ್ ಗುರು, ಗಂಧದಗುಡಿ ಮೊದಲಾದ ಚಿತ್ರಗಳ ಮೂಲಕ ಜನಮನ ಗೆದ್ದಿದ್ದಾರೆ ಎಂದು ವಿವರಿಸಿದರು.

ಕಸ್ತೂರಿ ನಿವಾಸ ಚಿತ್ರದ ಆಡಿಸಿ ನೋಡು ಬೀಳಿಸಿ ನೋಡು ಗೀತೆಯಂತಹ ಅನೇಕ ಕೃತಿಗಳು ಕನ್ನಡಿಗರಲ್ಲಿ ಹೊಸ ಸ್ಫೂರ್ತಿ ಮೂಡಿಸಿವೆ. ಸಾಮಾನ್ಯ ಜನತೆಗೆ ಅರ್ಥವಾಗುವ ಸರಳ ಶೈಲಿಯಲ್ಲಿ ಗೀತೆಗಳನ್ನು ರಚಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಆಪರೇಷನ್ ಡೈಮಂಡ್ ರಾಕೆಟ್ ಚಿತ್ರದಲ್ಲಿ ಆಂಗ್ಲ ಗೀತೆಯನ್ನು ವಿಭಿನ್ನವಾಗಿ ರಚಿಸಿ ಹೊಸ ಪ್ರಯೋಗ ಮಾಡಿದವರಾಗಿದ್ದಾರೆ ಎಂದರು. ರಾಜ್ಯ ಪ್ರಶಸ್ತಿ ಸೇರಿದಂತೆ ಹಲವು ಗೌರವಗಳಿಗೆ ಪಾತ್ರರಾದ ಉದಯ ಶಂಕರ್ ಅವರು ನಿಜವಾದ ಸಾಹಿತ್ಯ ಶಿಲ್ಪಿಯಾಗಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯ ಜನಪದ ರವಿಚಂದ್ರಪ್ರಸಾದ್ ಕಹಳೆ, ಉದಯ ಶಂಕರ್ ಅವರು ಅನೇಕ ಯುವ ಗೀತರಚನಾಕಾರರಿಗೆ ಮಾದರಿಯಾಗಿದ್ದು, ಅವರ ಸಂಭಾಷಣೆಗಳು ಮತ್ತು ಗೀತೆಗಳು ಎಂದೆಂದಿಗೂ ಮರೆಯಲಾಗದವು ಎಂದರು.

ಚಿತ್ರರಂಗದಲ್ಲಿ ಅರ್ಥರಹಿತ ಗೀತೆಗಳ ಬದಲು ಅರ್ಥಪೂರ್ಣ ಹಾಗೂ ಶಾಶ್ವತ ಮೌಲ್ಯ ಹೊಂದಿದ ಗೀತೆಗಳಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಬಿಕೆ ಆರಾಧ್ಯ, ಶಿವಲಿಂಗ ಮೂರ್ತಿ, ಮಂಜುನಾಥ್, ಮಹೇಶ್, ಶಿವಲಿಂಗ ಶೆಟ್ಟಿ, ರಾಚಯ್ಯ, ಬಿಳಿಗಿರಿ ಉಪಸ್ಥಿತರಿದ್ದರು.




# ಹಸಿವು–ಆರೈಕೆ ಕಾರ್ಯಕ್ರಮಕ್ಕೆ ಚಾಲನೆ: ರೋಗಿಗಳಿಗೆ ನೆರವು

**ಕೆ.ಎಂ.ದೊಡ್ಡಿ:** ಹಸಿವು–ಆರೈಕೆ ಕಾರ್ಯಕ್ರಮದಿಂದ ಆಸ್ಪತ್ರೆಗೆ ಬರುವ ರೋಗಿಗಳಿಗೆ ಅನುಕೂಲವಾಗಲಿದೆ ಎಂದು ಭಾರತೀನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹಾಗೂ ಜಿ.ಪಂ. ಮಾಜಿ ಸದಸ್ಯ ಎ.ಎಸ್. ರಾಜೀವ್ ಅಭಿಪ್ರಾಯಪಟ್ಟರು.

ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದ ಆವರಣದಲ್ಲಿ ಸ್ಫೂರ್ತಿ ಲಯನ್ಸ್ ಸಂಸ್ಥೆ ವತಿಯಿಂದ ಹಮ್ಮಿಕೊಂಡ ಹಸಿವು–ಆರೈಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಆಸ್ಪತ್ರೆಗೆ ಬರುವ ರೋಗಿಗಳು ಹಾಗೂ ಬಾಣಂತಿಯರಿಗೆ ಹಸಿವು ನೀಗಿಸುವ ಈ ಕಾರ್ಯಕ್ರಮ ಸಹಾಯಕವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ದೂರದ ಹಳ್ಳಿಗಳಿಂದ ಚಿಕಿತ್ಸೆಗಾಗಿ ಬರುವವರು ಹಸಿವಿನಿಂದ ಬಳಲುವ ಪರಿಸ್ಥಿತಿ ಎದುರಿಸುತ್ತಾರೆ. ಇಂತಹವರಿಗೆ ನೆರವಾಗುವ ಉದ್ದೇಶದಿಂದ ಸ್ಫೂರ್ತಿ ಲಯನ್ಸ್ ಸಂಸ್ಥೆ ಕೈಗೊಂಡಿರುವ ಈ ಕಾರ್ಯ ಶ್ಲಾಘನೀಯವಾಗಿದೆ ಎಂದರು.



ಆಸ್ಪತ್ರೆಯಲ್ಲಿ ದಾಖಲಾಗಿರುವವರಿಗೆ ನಿಯಮಿತ ಊಟದ ವ್ಯವಸ್ಥೆ ಇಲ್ಲದಿರುವುದನ್ನು ಮನಗಂಡು ಈ ಕಾರ್ಯಕ್ರಮ ರೂಪಿಸಲಾಗಿದೆ. ಸಂಘ ಸಂಸ್ಥೆಗಳು, ದಾನಿಗಳು, ಸಮಾಜಸೇವಕರು ಹಾಗೂ ಉದ್ಯಮಿಗಳು ಕೈಜೋಡಿಸಿದರೆ ಪ್ರತಿದಿನವೂ ಇಂತಹ ಸೇವೆಯನ್ನು ಮುಂದುವರಿಸಬಹುದು ಎಂದು ಹೇಳಿದರು.

ಹಸಿದವರಿಗೆ ಅನ್ನ ನೀಡುವುದರಿಂದ ಆತ್ಮತೃಪ್ತಿ ಸಿಗುತ್ತದೆ. ಈ ನಿಟ್ಟಿನಲ್ಲಿ ಎಲ್ಲರೂ ಇಂತಹ ಮಹತ್ತರ ಕಾರ್ಯಕ್ರಮಗಳಿಗೆ ಕೈಜೋಡಿಸಿ ಹಸಿದವರ ಹೊಟ್ಟೆ ತುಂಬಿಸುವ ಕಾರ್ಯಕ್ಕೆ ಮುಂದಾಗಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಗ್ಯಾರಂಟಿ ಯೋಜನೆ ಅಧ್ಯಕ್ಷ ಹಾಗೂ ಜಿ.ಪಂ. ಮಾಜಿ ಅಧ್ಯಕ್ಷ ಬಿ. ಬಸವರಾಜು, ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಸುಧಾ, ಸ್ಫೂರ್ತಿ ಲಯನ್ಸ್ ಸಂಸ್ಥೆಯ ಅಧ್ಯಕ್ಷ ಕೆ.ಎಲ್. ಶಿವರಾಮು, ಪ್ರಧಾನ ಕಾರ್ಯದರ್ಶಿ ಬಿ.ಎಸ್. ಬೋರೇಗೌಡ, ರಕ್ಷ ಸಮಿತಿಯ ಸದಸ್ಯ ತೊರೆಬೊಮ್ಮನಹಳ್ಳಿ ಸಿದ್ದರಾಮೇಗೌಡ ಹಾಗೂ ಪದಾಧಿಕಾರಿಗಳಾದ ವಕ್ರತುಂಡ ವೆಂಕಟೇಶ್, ಚನ್ನಶೆಟ್ಟಿ, ಗಿರೀಶ್, ದೇವರಾಜು, ಸತೀಶ್, ಮಂಜು, ವೆಂಕಟೇಶ್ ಸೋಮ ಸೇರಿದಂತೆ ಇತರರು ಉಪಸ್ಥಿತರಿದ್ದರು.



## ಟ್ರೇಲರ್ ನಲ್ಲೇ ಗಮನ ಸೆಳೆದ "ಕ್ಷಮೆಯಿರಲಿ ತಂದೆ"




**ಈ ಚಿತ್ರದ ಮೂಲಕ ನಿರ್ಮಾಣ ಹಾಗೂ ನಿರ್ದೇಶನಕ್ಕೆ ನಟ ಎಂ.ಎನ್ ಸುರೇಶ್ ಎಂಟ್ರಿ.**

ರಂಗಭೂಮಿ, ಕಿರುತೆರೆ, ಹಿರಿತೆರೆ ಕಲಾವಿದರಾಗಿ ಕಳೆದ ಮೂರು ದಶಕಗಳಿಂದ ಜನಪ್ರಿಯರಾಗಿರುವ ಎಂ ಎನ್ ಸುರೇಶ್ (ಮೂಗ್ ಸುರೇಶ್ ) ಈಗ ನಿರ್ಮಾಪಕ ಹಾಗೂ ನಿರ್ದೇಶಕನಾಗಿ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟಿದ್ದಾರೆ. ತಮ್ಮ ಮೊದಲ ನಿರ್ಮಾಣ ಹಾಗೂ ನಿರ್ದೇಶನದ ಚಿತ್ರಕ್ಕೆ " ಕ್ಷಮೆಯಿರಲಿ ತಂದೆ" ಎಂದು ಹೆಸರಿಟ್ಟಿದ್ದಾರೆ.

ಈಗಾಗಲೇ ಚಿತ್ರೀಕರಣ ಮುಗಿಸಿ ಜೂನ್ 12ರಂದು ತೆರೆಗೆ ಬರಲು ಸಿದ್ದವಾಗಿರುವ ಈ ಚಿತ್ರದ ಮೋಷನ್ ಪೋಸ್ಟರ್, ಟ್ರೇಲರ್ ಹಾಗೂ ಲಿರಿಕಲ್ ವಿಡಿಯೋ ಇತ್ತೀಚೆಗೆ ಬಿಡುಗಡೆಯಾಯಿತು. ಕನ್ನಡ ಚಿತ್ರರಂಗದ ಹೆಸರಾಂತ ನಿರ್ದೇಶಕರಾದ ಟಿ.ಎಸ್.ನಾಗಾಭರಣ, ನಾಗತಿಹಳ್ಳಿ ಚಂದ್ರಶೇಖರ್, ನಿರ್ಮಾಪಕ ಉಮೇಶ್ ಬಣಕಾರ್ ಹಾಗೂ ರಾಮಕೃಷ್ಣ (ಮೇಕಪ್) ಮುಖ್ಯ ಅತಿಥಿಗಳಾಗಿ ಆಗಮಿಸಿ ಮೋಷನ್ ಪೋಸ್ಟರ್, ಟ್ರೇಲರ್ ಹಾಗೂ ಲಿರಿಕಲ್ ವಿಡಿಯೋ ಅನಾವರಣ ಮಾಡಿದರು. ಚಿತ್ರದ ಟ್ರೇಲರ್ ಚೆನ್ನಾಗಿದೆ. ಚಿತ್ರ ಯಶಸ್ವಿಯಾಗಲಿ. ಎಂ ಎನ್ ಸುರೇಶ್ ನಿರ್ಮಾಪಕ ಹಾಗೂ ನಿರ್ದೇಶಕರಾಗಿಯೂ ಗೆಲ್ಲಲಿ ಎಂದು ಅತಿಥಿಗಳು ಹಾರೈಸಿದರು. ಆನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ಸಮಾರಂಭಕ್ಕೆ ಆಗಮಿಸಿದ ಅತಿಥಿಗಳಿಗೆ ಧನ್ಯವಾದ ತಿಳಿಸಿ ಚಿತ್ರದ ಕುರಿತು ಮಾತನಾಡಿದ ನಿರ್ಮಾಪಕ ಹಾಗೂ ನಿರ್ದೇಶಕ ಎನ್ ಎಂ ಸುರೇಶ್, ನಾನು ಕೆಲವು ಚಿತ್ರಗಳಿಗರ ಸಹ ನಿರ್ಮಾಪಕನಾಗಿದ್ದೆ. ಪೂರ್ಣಪ್ರಮಾಣದ ನಿರ್ಮಾಪಕನಾಗಿರುವುದು ಈ ಚಿತ್ರದಿಂದ. ಇನ್ನೂ, ನಿರ್ದೇಶನ ನಾನು ಮಾಡಬೇಕೆಂದುಕೊಂಡಿರಲಿಲ್ಲ. ನನ್ನ ಕಾರ್ಯವೈಖರಿ ಹತ್ತಿರದಿಂದ ಬಲ್ಲ ಸ್ನೇಹಿತರು ನೀವೇ ನಿರ್ದೇಶನ ಮಾಡಿ ಎಂದರು. ಮೊದಲ ನಿರ್ದೇಶನದ ಚಿತ್ರ, ಬೇರೆಯವರು ದುಡ್ಡು ಹಾಕುವುದು ಬೇಡ ಅಂತ ನಾನು ಕೂಡಿಟ್ಟಿದ್ದ ಹಣವನ್ನೇ ಈ ಚಿತ್ರಕ್ಕೆ ಹಾಕಿ ನಿರ್ಮಾಣ ಮಾಡಿದ್ದೇನೆ. ಇದಕ್ಕೆ ನನ್ನ ಕುಟುಂಬದ ಸಹಕಾರವೂ ಇದೆ. ಶೀರ್ಷಿಕೆಯೇ ತಿಳಿಸುವಂತೆ ಇದೊಂದು ತಂದೆ – ಮಗನ ಬಾಂಧವ್ಯದ ಚಿತ್ರ. ಹರೀಶ್ ಅವರು ಕಥೆ ಬರೆದಿದ್ದಾರೆ. ಮಂಜುನಾಥ್ ಹೆಗ್ಡೆ, ರೇಣುಕಾಬಾಲಿ , ಶ್ರೀಮಂತ, ವಿನ್ಯಾಶೆಟ್ಟಿ ಮುಂತಾದ ಕಲಾವಿದರು ಈ ಚಿತ್ರದಲ್ಲಿ ಅಭಿನಯಿಸಿದ್ದು, ನಾನು ಸಹ ನಟಿಸಿದ್ದೇನೆ. ಸೂರ್ಯಕಾಂತ್ ಛಾಯಾಗ್ರಹಣ, ಮುತ್ತುರಾಜ್ ಸಂಕಲನ ಹಾಗೂ ಪುಣ್ಯೇಶ್ ಕುಮಾರ್ ಅವರ ಸಂಗೀತ ನಿರ್ದೇಶನವಿರುವ ಈ ಚಿತ್ರ ಜೂನ್ 12 ರಂದು ತೆರೆಗೆ ಬರಲಿದೆ. ನನ್ನ ಮೊದಲ ನಿರ್ದೇಶನ ಹಾಗೂ ನಿರ್ಮಾಣದ ಈ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು. ನಟ ಶ್ರೀಮಂತ, ಕಥೆ ಬರೆದಿರುವ ಹರೀಶ್, ಸಂಕಲನಕಾರ ಮುತ್ತುರಾಜ್, ನಟ ಶಿವಕುಮಾರ್ ಆರಾಧ್ಯ ಹಾಗೂ ಕಾರ್ಯಕಾರಿ ನಿರ್ಮಾಪಕಿ ಅಹಲ್ಯ ಸುರೇಶ್ ಮುಂತಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## "NH 66" ಚಿತ್ರೀಕರಣ ಪೂರ್ಣ



"NH66"ಚಿತ್ರದ ಚಿತ್ರೀಕರಣ ಪೂರ್ಣಗೊಂಡಿದೆ.

ಮಂಗಳೂರು ಮತ್ತು ಮುಂಬೈ ನಡುವಿನ ಅನೇಕ ಸ್ಥಳಗಳಲ್ಲಿ ವ್ಯಾಪಿಸಿರುವ ವ್ಯಾಪಕ ಶೂಟಿಂಗ್ ಶೆಡ್ಯೂಲ್ ನಂತರ, ಇಡೀ ಪ್ರಧಾನ ಛಾಯಾಗ್ರಹಣವು ಈಗ ಮುಕ್ತಾಯಗೊಂಡಿದೆ. ಕಳೆದ ತಿಂಗಳು ರಾಯರ ಸನ್ನಿಧಿಯಲ್ಲಿ ಈ ಚಿತ್ರಕ್ಕೆ ಚಾಲನೆ ದೊರಕಿತ್ತು. ಈ ಕಥೆಯನ್ನು ಜೀವಂತಗೊಳಿಸಲು ಅವಿಶ್ರಾಂತವಾಗಿ ಶ್ರಮಿಸಿದ ಪ್ರತಿಭಾನ್ವಿತ ಪಾತ್ರವರ್ಗ ಪ್ರಮೋದ್ ಶೆಟ್ಟಿ, ರಾಜೇಶ್ ನಟರಂಗ, ಶ್ರುತಿ ಹರಿಹರನ್ ಮತ್ತು ತಂಡವನ್ನು ಈ ಚಿತ್ರವು ಒಟ್ಟುಗೂಡಿಸುತ್ತದೆ.

ನಿರ್ದೇಶಕ ಮತ್ತು ನಿರ್ಮಾಪಕ ಮಂಜುನಾಥ ಟಿ ಆರ್ ಅವರ ನಾಯಕತ್ವದಲ್ಲಿ, ಈ ಚಿತ್ರವು ಪ್ರೇಕ್ಷಕರಿಗೆ ಆಕರ್ಷಕವಾದ ಸಿನಿಮೀಯ ರೋಡ್ ಥ್ರಿಲ್ಲರ್ ಕಥಾ ಅನುಭವವನ್ನು ನೀಡುವ ಭರವಸೆ ನೀಡುತ್ತದೆ ಎಂದು ಹೇಳುತ್ತಾರೆ.

"ಈ ಪ್ರಧಾನ ಛಾಯಾಗ್ರಹಣವು ಉತ್ಸಾಹ, ಸಮರ್ಪಣೆ ಮತ್ತು ಒಳಗೊಂಡಿರುವ ಪ್ರತಿಯೊಬ್ಬರ ಕಠಿಣ ಪರಿಶ್ರಮದಿಂದ ತುಂಬಿದ ಅದ್ಭುತ ಪ್ರಯಾಣವಾಗಿದೆ. ಈ ಮೂಲಕ ನಾನು ಅವರಿಗೆ ಚಿತ್ರದ ನಿರ್ದೇಶಕ ಹಾಗೂ ನಿರ್ಮಾಪಕನಾಗಿ ಧನ್ಯವಾದ ಹೇಳುತ್ತೇನೆ ಎನ್ನುತ್ತಾರೆ ನಿರ್ದೇಶಕ ಮಂಜುನಾಥ ಟಿ ಆರ್.

ಪೋಸ್ಟ್–ಪ್ರೊಡಕ್ಷನ್‌ಗೆ ಹೋಗಲು ನಾವು ಉತ್ಸುಕರಾಗಿದ್ದೇವೆ ಮತ್ತು ಶೀಘ್ರದಲ್ಲೇ ಚಿತ್ರವನ್ನು ಕನ್ನಡ ಪ್ರೇಕ್ಷಕರಿಗೆ ಪ್ರಸ್ತುತಪಡಿಸುತ್ತೇವೆ. ಚಿತ್ರೀಕರಣವು ಈಗ ಪೂರ್ಣಗೊಂಡ ನಂತರ, ಓಊ66 ಸಂಪಾದನೆ, ಧ್ವನಿ ವಿನ್ಯಾಸ, ಸಂಗೀತ ಮತ್ತು ದೃಶ್ಯ ಮುಕ್ತಾಯ ಸೇರಿದಂತೆ ಪೋಸ್ಟ್–ಪ್ರೊಡಕ್ಷನ್‌ಗೆ ಪ್ರವೇಶಿಸಿದೆ.

ಟೀಸರ್, ಟ್ರೇಲರ್, ಆಡಿಯೋ ಬಿಡುಗಡೆ ಮತ್ತು ಬಿಡುಗಡೆ ಯೋಜನೆಗಳ ಕುರಿತು ಹೆಚ್ಚಿನ ನವೀಕರಣಗಳನ್ನು ಶೀಘ್ರದಲ್ಲೇ ಘೋಷಿಸಲಾಗುವುದು.

* ನಿರ್ಮಾಣ ಬ್ಯಾನರ್: ರಾಯ ಫಿಲ್ಮ್ಸ್
* ಸಂಗೀತ: ಸ್ವಾಮಿನಾಥನ್
* ಛಾಯಾಗ್ರಹಣ: ಸುನೀತ್ ಹಲಗೇರಿ
* ಸಂಕಲನ: ಉಜ್ವಾಲ್ ಚಂದ್ರ

ಸಂಭಾಷಣೆ: ತ್ರಿಲೋಕ್ ತ್ರಿವಿಕ್ರಮ

## ರಾಗಿಣಿ ದ್ವಿವೇದಿ ಹುಟ್ಟುಹಬ್ಬ "ರಾಗಿಣಿ ಐಪಿಎಸ್ 2"ಆರಂಭ



ನಟಿ ರಾಗಿಣಿ ದ್ವಿವೇದಿಗೆ ಹುಟ್ಟುಹಬ್ಬದ ಸಂಭ್ರಮ. ಈ ಸಂದರ್ಭದಲ್ಲೇ ನೂತನ ಚಿತ್ರದ ಘೋಷಣೆ ಸಹ ಆಗಿದೆ. ಹನ್ನೆರಡು ವರ್ಷಗಳ ಹಿಂದೆ ರಾಗಿಣಿ ಅವರು ನಾಯಕಿಯಾಗಿ ನಟಿಸಿದ್ದ "ರಾಗಿಣಿ ಐಪಿಎಸ್" ಚಿತ್ರ ಭರ್ಜರಿ ಯಶಸ್ಸು ಕಂಡಿತ್ತು. ಈಗ ಈ ಚಿತ್ರದ ಮುಂದುವರಿದ ಭಾಗ "ರಾಗಿಣಿ ಐಪಿಎಸ್ 2" ಚಿತ್ರ ಸಹ ಆರಂಭವಾಗಲಿದೆ. ನಟಿ ರಾಗಿಣಿ ದ್ವಿವೇದಿ ಹುಟ್ಟುಹಬ್ಬಕ್ಕೆ ಈ ಸಿನಿಮಾ ಘೋಷಣೆಯಾಗಿದೆ.

ಜಗ್ಗೇಶ್ ಅವರ ಪುತ್ರರಾದ ಗುರುರಾಜ್ ಹಾಗೂ ಯತಿರಾಜ್ ಈ ಚಿತ್ರವನ್ನು ನಿರ್ದೇಶನ ಮಾಡುತ್ತಿದ್ದಾರೆ. ನಟರಾಗಿ ಜನಪ್ರಿಯರಾಗಿದ್ದ ಗುರುರಾಜ್ ಹಾಗೂ ಯತಿರಾಜ್ ಈ ಸಿನಿಮಾ ಮೂಲಕ ನಿರ್ದೇಶಕರಾಗಿ ಚಿತ್ರರಂಗ ಪ್ರವೇಶಿಸುತ್ತಿದ್ದಾರೆ. ಕೆ.ಮಂಜು ಹಾಗೂ ರಾಗಿಣಿ ವೆಂಚರ್ಸ್ ಜಂಟಿಯಾಗಿ ಈ ಸಿನಿಮಾ ನಿರ್ಮಾಣ ಮಾಡುತ್ತಿದೆ.

"ರಾಗಿಣಿ ಐಪಿಎಸ್" ಜನಪ್ರಿಯ ಚಿತ್ರ. "ರಾಗಿಣಿ ಐಪಿಎಸ್" ಚಿತ್ರದ ಮುಂದುವರಿದ ಭಾಗ. ಕಥೆ ಕೂಡ ಆ ಚಿತ್ರದ ಕಥೆ ಎಲ್ಲಿ ಕೊನೆಯಾಗಿತ್ತೊ, ಅಲ್ಲಿಂದಲೇ ಮುಂದುವರೆಯುತ್ತದೆ. ಮುಂದಿನ ದಿನಗಳಲ್ಲಿ ಹೆಚ್ಚಿನ ಮಾಹಿತಿ ನೀಡುವುದಾಗಿ ನಿರ್ದೇಶಕರಾದ ಗುರುರಾಜ್ ಹಾಗೂ ಯತಿರಾಜ್ ತಿಳಿಸಿದರು.

ರಾಗಿಣಿ ಉತ್ತಮ ನಟಿ. ಇತ್ತೀಚೆಗೆ ಅವರು ಫೋನ್ ಮಾಡಿ ನಿಮಗೆ ಕಥೆ ಹೇಳಲು ನಿರ್ದೇಶಕರು ಬರುತ್ತಿದ್ದಾರೆ ಅಂತ ಹೇಳಿದರು. ಯಾರು ಎಂದು ಹೇಳಲಿಲ್ಲ. ಆನಂತರ ಜಗ್ಗೇಶ್ ಅವರ ಮಕ್ಕಳಾದ ಗುರುರಾಜ್ – ಯತಿರಾಜ್ ಬಂದು "ರಾಗಿಣಿ ಐಪಿಎಸ್ 2" ಚಿತ್ರದ ಕಥೆ ಹೇಳಿದರು.



## "ಮಹಾನ್"ನಿಂದ ಹೊಸ ಲುಕ್ ಬಿಡುಗಡೆ

ಮಹಾನ್" ಚಿತ್ರದ ನಾಯಕ ನಟ ವಿಜಯ ರಾಘವೇಂದ್ರ ರೈತರ ಕುರಿತಾದ ಕಥಾಹಂದರದ ಚಿತ್ರದಲ್ಲಿರೈತನ ಪಾತ್ರದಲ್ಲೇ ಕಾಣಿಸಿಕೊಂಡಿದ್ದಾರೆ. ಅವರ ಹುಟ್ಟುಹಬ್ಬದ ಸಂದರ್ಭದಲ್ಲಿ ವಿಶೇಷ ಲುಕ್ ಬಿಡುಗಡೆ ಮಾಡುವ ಮೂಲಕ ಚಿತ್ರತಂಡ ಶುಭಾಶಯ ತಿಳಿಸಿದೆ.

ಪ್ರಕಾಶ್ ಬುದ್ದೂರು ನಿರ್ಮಾಣ ಮಾಡುತ್ತಿದ್ದಾರೆ. ಪಿ.ಸಿ.ಶೇಖರ್ ನಿರ್ದೇಶನ. ವಿಜಯ ರಾಘವೇಂದ್ರ, ರಾಧಿಕಾ ನಾರಾಯಣ್, ಮಿತ್ರ, ನಮ್ರತಾ ಗೌಡ, ವರ್ಷ ಬೊಳ್ಳಮ್ಮ, ಕಿರಣ್ ಶ್ರೀನಿವಾಸ್ ಮುಂತಾದವರು ಅಭಿನಯಿಸಿದ್ದಾರೆ.

## "ಗುರುತ್ವಾಕರ್ಷಣೆ" ಸದ್ಯದಲ್ಲೇ ತೆರೆಗೆ

ಮದರ್ ಪ್ರಾಮೀಸ್ ಟಾಕೀಸ್ ಬ್ಯಾನರ್ ಅಡಿಯಲ್ಲಿ ಮಹೇಂದರ್ ಸಿ ಗುಂಡೇಗಾಲ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ಮೊದಲ ಬಾರಿಗೆ ನಿರ್ದೇಶನ ಮಾಡುವುದರ ಜೊತೆಗೆ ನಿರ್ಮಾಣವನ್ನೂ ಮಾಡಿರುವ ಚಿತ್ರ "ಗುರುತ್ವಾಕರ್ಷಣೆ". ಇದಕ್ಕೆ ಸಹ ನಿರ್ಮಾಪಕರಾಗಿ ದಿಲೀಪ್ ಸಿದ್ದಪ್ಪಾಜಿ ಕೊಳ್ಳೇಗಾಲ ಸಾಥ್ ನೀಡಿದ್ದಾರೆ. ಈವರೆಗೂ ಕೆಲವು ಕಿರುಚಿತ್ರಗಳನ್ನು ನಿರ್ದೇಶಿಸಿರುವ ಮಹೇಂದರ್ ಸಿ ಗುಂಡೇಗಾಲ ಅವರಿಗೆ ಇದು ಚೊಚ್ಚಲ ನಿರ್ದೇಶನದ ಚಿತ್ರ.

"ಗುರುತ್ವಾಕರ್ಷಣೆ"ಯನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಏನಾಗುತ್ತದೆ? ಎಂಬುದನ್ನು ಈ ಚಿತ್ರದಲ್ಲಿ ತೋರಿಸಿದ್ದೇವೆ. ಇದು ಕೊಳ್ಳೇಗಾಲ ಮತ್ತು ಚಾಮರಾಜನಗರದಲ್ಲಿ ನಡೆಯುವ ಕಥೆ. ಚಿತ್ರೀಕರಣ ಸಹ ಅಲ್ಲೇ ಆಗಿದೆ. ಈಗಾಗಲೇ ನೀತು ನಿನಾದ್ ಸಂಗೀತ ನೀಡಿರುವ ಎರಡು ಹಾಡುಗಳು ಹಾಗೂ ಟೀಸರ್ 02 ಮ್ಯೂಸಿಕ್ ಮೂಲಕ ಬಿಡುಗಡೆಯಾಗಿದ್ದು, ಮೆಚ್ಚುಗೆಯ ಜೊತೆಗೆ ಅಧಿಕ ಸಂಖ್ಯೆಯಲ್ಲಿ ವೀಕ್ಷಣೆ ಸಹ ಆಗುತ್ತಿದೆ. ಸದ್ಯದಲ್ಲೇ ಚಿತ್ರವನ್ನು ತೆರೆಗೆ ತರುವ ಪ್ರಯತ್ನ ಕೂಡ ನಡೆಯುತ್ತಿದೆ. ನನ್ನ ತಾಯಿಗೆ ನಾನು ನಿರ್ದೇಶಕನಾಗಬೇಕೆಂಬ ಆಸೆ. ಅವರು ಕಣ್ಣು ಮುಚ್ಚುವ ಮೊದಲು ಹೇಳಿದ ಮಾತು ಹೀಡೇರಿಸಲು.ಅವರ ಆಸೆ– ಆಶಯದಂತೆ ಸತತ ಒಂದುವರೆ ವರ್ಷ ಹಗಲಿನಲ್ಲಿ ಕೆಲಸ ಮಾಡಿ ರಾತ್ರಿ ಈ ಚಿತ್ರದ ಕಥೆ ಸಿದ್ದ ಮಾಡಿಕೊಳ್ಳುತ್ತಿದ್ದೆ. ಕೊಳ್ಳೇಗಾಲ ಮತ್ತು ಮೈಸೂರಿನ ಪ್ರತಿಭೆಗಳನ್ನು ಒಗ್ಗೂಡಿಸಿಕೊಂಡು ಮಾಡಿರುವ ಸಿನಿಮಾ ಇದು ಎನ್ನುತ್ತಾರೆ ನಿರ್ದೇಶಕ ಮಹೇಂದರ್ ಸಿ ಗುಂಡೇಗಾಲ.

ಜಯಂತ್ ದೊರೆ ಈ ಚಿತ್ರದ ನಾಯಕನಾಗಿದ್ದು, ಸುಕೃತಿ ನಾಯಕಿಯಾಗಿ ನಟಿಸಿದ್ದಾರೆ. ಪ್ರಭಾಕರ್, ದಿವ್ಯ ಕುಮಾರ್ ಸತ್ತೇಗಾಲ, ಮಂಡ್ಯ ಸಿದ್ದು, ವಿಜಯ್ ಕಿರಣ್, ಮಾಸ್ಟರ್ ಶೌರ್ಯ ಮತ್ತು ಡಾ.ಭಾನುಪ್ರಕಾಶ್ ಎ ಎಸ್ ಮುಂತಾದವರು ತಾರಾಬಳಗದಲ್ಲಿದ್ದಾರೆ. ಪವಿತ್ರನ್ – ವಿಘ್ನೇಶ್ ವಿಕ್ಕಿ ಛಾಯಾಗ್ರಹಣ ಹಾಗೂ ರಕ್ಷಿತ್ ರಾಜ್ ಸಂಕಲನ " ಗುರುತ್ವಾಕರ್ಷಣೆ " ಚಿತ್ರಕ್ಕಿದೆ.



## ನಿರ್ದೇಶಕ ಉಮೇಶ್ ಕೆ ಕೃಪ ಚಿತ್ರಕ್ಕೆ ಚಾಲನೆ



ಉಮೇಶ್ ಕೆ ಕೃಪ ನಿರ್ದೇಶಿಸುತ್ತಿರುವ, ಆಕಾಂಕ್ಷ ಪ್ರೊಡಕ್ಷನ್ಸ್ ಲಾಂಛನದಲ್ಲಿ ನಾಗೇಶ್ ವಾಸ್ಟರ್ ನಿರ್ಮಾಣದ "ಪ್ರೊಡಕ್ಷನ್ ನಂ 2" ನೂತನ ಚಿತ್ರದ ಮುಹೂರ್ತ ಸಮಾರಂಭ ಶುಕ್ರವಾರ ನೆರವೇರಿತು.ನನ್ನ ಎರಡನೇ ನಿರ್ದೇಶನದ ಚಿತ್ರಕ್ಕೆ ಚಾಲನೆ ದೊರಕಿದೆ. ನಾನೇ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದಿರುವ ಇನ್ನೂ ಹೆಸರಿಡದ ಈ ಹೊಸ ಚಿತ್ರಕ್ಕೆ ನಾಗೇಶ್ ವಾಸ್ಟರ್ ಬಂಡವಾಳ ಹೂಡುತ್ತಿದ್ದಾರೆ. ಎಸ್ ಕೆ ರಾವ್ ಛಾಯಾಗ್ರಹಣ, ಪಳನಿ ಡಿ ಸೇನಾಪತಿ ಸಂಗೀತ ನಿರ್ದೇಶನ, ಮಧು ತುಂಬಕೆರೆ ಸಂಕಲನ, ಅರ್ಜುನ್ ರಾಜ್ ಸಾಹಸ ನಿರ್ದೇಶನ ಹಾಗೂ ಎ ಸತೀಶ್ ಅವರ ಕಲಾ ನಿರ್ದೇಶನವಿರುವ ಈ ನೂತನ ಚಿತ್ರಕ್ಕೆ ಎಚ್ ಜಗದೀಶ್ ರಾವ್ ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಈ ಚಿತ್ರಕ್ಕೆ ಕಥೆಯೇ ನಾಯಕ. ನನ್ನ ಹಿಂದಿನ ಚಿತ್ರದಂತೆ ಈ ಚಿತ್ರದಲ್ಲೂ ಅನುಭವಿ ಕಲಾವಿದರ ದೊಡ್ಡ ತಾರಾಬಳಗವೇ ಇರುತ್ತದೆ. "ಪುಟ್ಟಕ್ಕನ ಮಕ್ಕಳು" ಧಾರಾವಾಹಿಯಲ್ಲಿ "ಕಂಠಿ" ಪಾತ್ರದ ಮೂಲಕ ಚಿರಪರಿಚಿತರಾಗಿರುವ ಧನುಷ್ ಹಾಗೂ ಕೆಲವು ಧಾರಾವಾಹಿ ಹಾಗೂ ಚಲನಚಿತ್ರಗಳಲ್ಲಿ ನಟಿಸಿರುವ ಮನಸ್ವಿ ಪ್ರಮುಖಪಾತ್ರಗಳಲ್ಲಿ ಅಭಿನಯಿಸುತ್ತಿದ್ದಾರೆ. ಉಳಿದ ಕಲಾವಿದರ ಆಯ್ಕೆ ನಡೆಯುತ್ತಿದೆ. ಇದೊಂದು ನಾಡಿನ ಕಥೆ. ಪ್ರೀತಿ, ಕಾಮಿಡಿ, ಸೆಂಟಿಮೆಂಟ್ ಹೀಗೆ ನೋಡುಗರಿಗೆ ಬೇಕಾದ ಎಲ್ಲಾ ಅಂಶಗಳಿರುವ ಮನೋರಂಜನೇಯೇ ಪ್ರಧಾನವಾದ ಕುಟುಂಬ ಸಮೇತ ನೋಡಬಹುದಾದ ಚಿತ್ರವಿದು. ಇನ್ನೂ, ಈ ಚಿತ್ರದಲ್ಲಿ ಮಳೆಯದು ಮುಖ್ಯ ಪಾತ್ರ. ಹಾಗಾಗಿ ಚಿತ್ರೀಕರಣಕ್ಕೆ ಮಳೆಗಾಲಕ್ಕಾಗಿ ಕಾಯುತ್ತಿದ್ದೆವು. ಮುಂದಿನ ವಾರದಿಂದ ಚಿತ್ರೀಕರಣ ಆರಂಭವಾಗಲಿದೆ. ತೀರ್ಥಹಳ್ಳಿ, ಆಗುಂಬೆ, ಕಾರ್ಕಳ, ಚಿಕ್ಕಮಗಳೂರು ಮುಂತಾದ ಕಡೆ ಮೊದಲ ಹಂತದ ಚಿತ್ರೀಕರಣ ನಡೆಯಲಿದೆ ಎಂದರು.



## ಕ್ರೇಜಿ – ಬ್ರಹ್ಮ ಮೆಗಾ ಇವೆಂಟ್ ರವಿಚಂದ್ರನ್ ಹುಟ್ಟುಹಬ್ಬಕ್ಕೆ ಸಂಭ್ರಮ

ರವಿಚಂದ್ರನ್ ನಿರ್ದೇಶನ ಮತ್ತು ಹಂಸಲೇಖ ಸಂಗೀತ ನಿರ್ದೇಶನ ಇರುವ ಚಿತ್ರಗಳಿಗೆ ಬಹುಪಾಲು ಯಶಸ್ಸು ಇತ್ತು. ಹದಿನಾರು ವರ್ಷಗಳ ಕಾಲ ಒಟ್ಟಾಗಿ ಈ ಜೋಡಿ ಮಾಡಿದ ಮೋಡಿಗೆ ಮನ ಸೋಲದವರಿಲ್ಲ.

ಇಂತಹ ದಿಗ್ಗಜ ಜೋಡಿಯ ಸಾಧನೆಯನ್ನು ಸಂಭ್ರಮಿಸುವ ಸಲುವಾಗಿ ಮೇ 30ರಂದು ಕೆಂಗೇರಿ ಬಳಿಯ ಜೆ.ಕೆ.ಗ್ರಾಂಡ್ ಅರೆನಾದಲ್ಲಿ "ಕ್ರೇಜಿ – ಬ್ರಹ್ಮ" ರೀಯೂನಿಯನ್ ಮೆಗಾ ಇವೆಂಟ್ ಅನ್ನು ಪ್ರಸ್ತುತ್ ಇನ್ನೋವೇಟಿವ್ ಕ್ರಿಯೇಷನ್ಸ್ ಮತ್ತು ಸಲ್ಯೂಷನ್ಸ್ ವ್ಯವಸ್ಥಾಪಕ ನಿರ್ದೇಶಕ ನ.ವಿನಯ್ ಹಾಗೂ ಕಲಾಲೂಹ ಸಂಸ್ಥಾಪಕಿ ಡಾ.ಚೇತನಾಆರ್.ಎಸ್ ಅವರು ಆಯೋಜಿಸಿದ್ದಾರೆ. ಈ ಕುರಿತು ಹೆಚ್ಚಿನ ಮಾಹಿತಿ ನೀಡಲು ಪತ್ರಿಕಾಗೋಷ್ಠಿ ಆಯೋಜಿಸಲಾಗಿತ್ತು.

ಈ ಜೋಡಿಯನ್ನು ಗೌರವಿಸುವ ಕಾರ್ಯಕ್ರಮದಲ್ಲಿ ನಾಡಿನ ಹೆಸರಾಂತ ಕಲಾವಿದರು ಭಾಗಿಯಾಗಲಿದ್ದಾರೆ.

ನಾಲ್ಕು ಗಂಟೆಗಳ ವಿಶೇಷ ಕಾರ್ಯಕ್ರಮ ಇದಾಗಿದೆ ಎಂದುಆಯೋಜಕ ನ.ವಿನಯ್ ಆಯೋಜಕಿ ಡಾ.ಚೇತನಾ ತಿಳಿಸಿದ್ದಾರೆ.

ನಮ್ಮ ಕಾಂಬಿನೇಷನ್ನಲ್ಲಿ ನೂರಾರು ಸೂಪರ್ ಹಿಟ್ ಹಾಡುಗಳು ಬಂದಿದೆ. "ಪ್ರೇಮಲೋಕದಿಂದ" ಹಿಡಿದು ಹದಿನಾರು ವರ್ಷಗಳ ಕಾಲ ನಮ್ಮಿಬ್ಬರ ಕಾಂಬಿನೇಶನ್ ನಲ್ಲಿ ಬಂದ ಹಾಡುಗಳು ಅಂದು, ಇಂದು, ಮುಂದು ಜನಪ್ರಿಯವಾಗಿರುತ್ತದೆ. ಆನಂತರ ನಾವು ಒಟ್ಟಾಗಿ ಸಿನಿಮಾ ಮಾಡದೆ ಇರಬಹುದು. ನನ್ನ ಮನಸ್ಸಿನಲ್ಲಿ ಅವರು. ಅವರ ಮನಸ್ಸನಲ್ಲಿ ನಾನು ಸದಾ ಇರುತ್ತೇವೆ. ಇನ್ನೂ ಈ ಸಮಾರಂಭ ಯಾವುದೇ ತೊಂದರೆ ಇಲ್ಲದೆ ನಡೆಯುತ್ತದೆ ಎಂಬ ಭರವಸೆ ಇದೆ ಎಂದು ಕ್ರೇಜಿಸ್ಟಾರ್ ರವಿಚಂದ್ರನ್ ತಿಳಿಸಿದರು.


## ದಿ ಡೈಲಿ ಡ್ರಾಪ್: ಅಶ್ವಿನಿ ನಿರ್ದೇಶನ

ತಪಸ್ವಿ ಪ್ರೊಡಕ್ಷನ್ನ ಮೊದಲ ಪ್ರಯತ್ನ ಕೋರ್ಟ್ ರೂಮ್ ಸಿರೀಸ್, the daily drop...ಆರು ಕಂತುಗಳಿರುವ ಈ ಸೀರಿಸ್ ನಲ್ಲಿ ಶ್ರೀನಿವಾಸ ಪ್ರಭು, ಅಶ್ವಿನಿ ಅನೀಶ್, ದೀಪ (ಮಗಳು ಜಾನಕಿ ಖ್ಯಾತಿಯ ರಶ್ಮಿ ಭಾರ್ಗಿ), ಸಂತೋಷ ಕರ್ಕಿ (ಮುಂದಿನ ಕಂತುಗಳಲ್ಲಿ) (ಮಗಳು ಜಾನಕಿ ಖ್ಯಾತಿಯ ಶಾರ್ದುಲ್) ಸುದರ್ಶನ್, ನಮನ, ಪರಮ್, ಪವನ್ (ಇನ್ಸ್ಪೆಕ್ಟರ್ ಪಾತ್ರಧಾರಿ), ನವನೀತ್ (ಡಿಟೆಕ್ಟಿವ್ ಪಾತ್ರಧಾರಿ), ಚಂದನ್ ಶಂಕರ್ ಮತ್ತಿತರರು ನಟನರಿದ್ದಾರೆ.

ಮೂವತ್ತೈದು ವರ್ಷ ಆಸು ಪಾಸಿನ ಹೆಂಗಸೊಬ್ಬಳು (ಅನಘ) ಕಾರ್ ಡ್ರೈವ್ ಮಾಡುವಾಗ ನಿಗೂಢವಾಗಿ ಸಾವನಪ್ಪುತ್ತಾಳೆ. ಕಾರ್ಡಿಯಾಕ್ ಅರೆಸ್ಟ್ ನಿಂದಾಗಿ ಸತ್ತಿದ್ದಾಳೆ ಎಂದು ಪೋಸ್ಟ್ ಮಾರ್ಟಮ್ ರಿಪೋರ್ಟ್ ಹೇಳಿದರೂ ಅವಳ ಸಾವಿಗೆ ಕಾರಣ ಬೇರೆ.!!

ಅದೊಂದು ಮರ್ಡರ್ ಎಂದು ಅವಳ ಗಂಡನೇ ಅದಕ್ಕೆ ಕಾರಣ ಎಂದು ಅವನನ್ನ ಅರೆಸ್ಟ್ ಮಾಡಲಾಗುತ್ತೆ.

ಆ ಕೇಸ್ ಅನ್ನು ಸೀನಿಯರ್ ಲಾಯರ್ ಶಿವನಾಥ್ ಪ್ರಭು ಗೆ ವಹಿಸೋದಕ್ಕೆ ಹೋದಾಗ ಅವರು ತಮ್ಮ ಜೂನಿಯರ್ ಗಾರ್ಗಿ ಮೇಲಿನ ಜಿದ್ದಿ ಗೆ ಆ ಕೇಸ್ ಅನ್ನು ಅವಳಿಗೆ ಕೊಡ ಬೇಕು ಎಂದು ಒತ್ತಾಯ ಮಾಡುತ್ತಾರೆ.



ಮೊದಲ ಬಾರಿಗೆ ಕೇಸ್ ವಾದಿಸಲು ಹೊರಟ ಗಾರ್ಗಿ ಒಂದು ಸರಳ ಗೃಹಿಣಿ ಹಾಗೂ ತನ್ನ ಸೀನಿಯರ್ ಶಿವನಾಥ ಪ್ರಭು ಜೊತೆ ಕೆಲಸ ಮಾಡುತ್ತಿರುವ ಜೂನಿಯರ್ ಗಳಲ್ಲೇ ಸೀನಿಯರ್ ಆದ ಲಾಯರ್.

ಸ್ವಲ್ಪ ಭಯದಲ್ಲೇ ಮಾತಾಡುವ ಸ್ವಭಾವ ಕೂಡ.. ಶಿವನಾಥ್ ಪ್ರಭು ತುಂಬಾ ಕೇಸ್ ಗಳನ್ನು ಗೆದ್ದು ಅನುಭವ ಇರುವ ಸ್ವಲ್ಪ ಅಹಂಕಾರದಲ್ಲಿರೋ ಲಾಯರ್.

ಶಿವನಾಥ್ ಪ್ರಭು ಮುಂದೆ ಗಾರ್ಗಿ ನಿಂತು ಕೇಸ್ ಗೆಲ್ಲುತ್ತಾಳ

ಗಾರ್ಗಿ ಗಂಡ ನಿಜವಾಗಲೂ ತಪ್ಪಿತಸ್ತನೆ ಅನಘಳನ್ನು ಮರ್ಡರ್ ಮಾಡಿದ್ದು ಯಾರು ಹೇಗೆ ಸತ್ತಳು

Lifepages youtube ಚಾನೆಲ್ ಅಲ್ಲಿ ನೋಡಿ..

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,